ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: **ರಮೇಶರೆಡ್ಡಿ** | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 93 ಸಂಚಿಕೆ- 93 | PAGE-8 ಪುಟ-8 | ಭಾನುವಾರ 18.05.2025 | RS.2/- ಬೆಲೆ 2/-

# ಮೋದಿ ಅವಧಿಯಲ್ಲಿ ಬ್ರಹ್ಮೋಸ್ ದಾಳಿ, ಕಾಂಗ್ರೆಸ್ ಕಾಲದಲ್ಲಿ ಯಾಕಿಲ್ಲ: ಶೆಟ್ಟರ್

ಮಲ್ಲಮ್ಮ ನುಡಿ ವಾರ್ತೆ

ಹುಬ್ಬಳ್ಳಿ:ಮೇ.17: ಮೋದಿ ಅವಧಿಯಲ್ಲಿ ಬ್ರಹ್ಮೋಸ್ ದಾಳಿಯಾಗಿದೆ, ಕಾಂಗ್ರೆಸ್ ಕಾಲದಲ್ಲಿ ಯಾಕೆ ಆಗಿಲ್ಲ ಎಂದು ಎಂದು ಮಾಜಿ ಸಿಎಂ, ಸಂಸದ ಜಗದೀಶ್ ಶೆಟ್ಟರ್ ಪ್ರಶ್ನಿಸಿದರು.

ಹುಬ್ಬಳ್ಳಿಯಲ್ಲಿಮಾಧ್ಯಮದವರೊಂದಿಗೆ ಮಾತನಾಡಿದ ಅವರು,ನರೇಂದ್ರ ಮೋದಿ ನಾಯಕತ್ವಗುರಿ ಇಟ್ಟರೆ ಗುರಿಮುಟ್ಟುವವರೆಗೆಬಿಡೋದಿಲ್ಲ. ಅವರು ಗುಜರಾತ್ ಸಿಎಂ ಇದ್ದಾಗಿನಿಂದಲೂ ಹಾಗೆಯೇ ಇದ್ದಾರೆ. ಪಹಲ್ಗಾಮ್‌ನಲ್ಲಿ ಉಗ್ರರು 26 ಅಮಾಯಕರನ್ನ ಕೊಂದು ಹಾಕಿದರು. ಅದಾದ ಮೇಲೆ ಮೋದಿ ಅವರನ್ನ ಕೊಲ್ಲೋದಾಗಿ ಹೇಳಿದ್ರು, ಅದೇ ರೀತಿ ಮಾಡಿದ್ದಾರೆ. ಸೈನಿಕರಿಂದ ಉಗ್ರರ ಸಂಹಾರ ಮಾಡಿಸಿದ್ದಾರೆ. ಇದು ನರೇಂದ್ರ ಮೋದಿ ಅವರ ಪರಿಶ್ರಮ. ಸ್ವದೇಶಿ ಡ್ರೋನ್, ಬ್ರಹ್ಮೋಸ್ ಮೂಲಕ ಅಟ್ಯಾಕ್ ಮಾಡಿದರು. ಇವತ್ತು ಅದರ ಶಕ್ತಿ ಏನು ಎಂದು ಗೊತ್ತಾಗಿದೆ ಎಂದರು.

ಈಗ ಅದರ ಬೇಡಿಕೆ ವಿದೇಶದಲ್ಲೂ ಹೆಚ್ಚಾಗಿದೆ. ಇದು ಮೋದಿ ಕಾಲದಲ್ಲಿ ಆಗಿದೆ. ಕಾಂಗ್ರೆಸ್ ಕಾಲದಲ್ಲಿ ಯಾಕೆ ಆಗಿಲ್ಲ. ಮೊದಲು ಹೊರ ದೇಶದಿಂದ ಶಸ್ತ್ರಾಸ್ತ್ರಗಳನ್ನು ತರುತ್ತಿದ್ದರು. ಪಾಕಿಸ್ತಾನ ಉಗ್ರರಿಗೆ ಉತ್ತೇಜನ ಕೊಡ್ತಾ ಇದೆ. ಹೀಗಾಗಿ ಸರ್ವ ಪಕ್ಷಗಳ ರಾಜಕಾರಣಿಗಳ ತಂಡವನ್ನ ಹಲವು ದೇಶಗಳಿಗೆ ಕಳುಹಿಸಲು




ನಿರ್ಧಾರ ಮಾಡಿದ್ದಾರೆ. ಮೋದಿ ಅವರ ರಾಜತಾಂತ್ರಿಕ ನಡೆಗೆ ಮುಂದಿನ ದಿನಗಳಲ್ಲಿ ಒಳ್ಳೆಯದಾಗುತ್ತೆ ಎಂದರು.

ಕಾಂಗ್ರೆಸ್ ನಾಯಕರ ಟೀಕೆ ವಿಚಾರವಾಗಿ ಮಾತನಾಡಿ, ಮೋದಿ ಅವರ ಪ್ರತಿ ಹೆಜ್ಜೆಗೂ ಅವರು ಟೀಕೆ ಮಾಡ್ತಾರೆ. ಮೋದಿ ಗಡಿವರೆಗೆ ಹೋಗಿ ಜನರಿಗೆ ಸಮಾಧಾನ ಮಾಡುವ ಕೆಲಸ ಮಾಡ್ತಾರೆ. ರಾಹುಲ್ ಗಾಂಧಿ ಅವರು ಗಡಿ ಭಾಗ-ಕ್ಕೆ ಹೋಗಲಿ ನೋಡೋಣ. ಸಂತೋಷ ಲಾಡ್, ಕೊತ್ತೂರ ಮಂಜುನಾಥ್ ಸೇರಿದಂತೆ ಇತರ ನಾಯಕರ ಹೇಳಿಕೆ ಸರಿಯಲ್ಲ. ಟೀಕೆ ಮಾಡುವವರಿಗೆ ನಾಚಿಕೆ, ಮಾನ, ಮರ್ಯಾದೆ ಇದ್ರೆ ಈ ರೀತಿ ಹೇಳಿಕೆ ನೀಡಲ್ಲ. ಕೆಲವು ಚಿಲ್ಲರೆ ನಾಯಕರ ಹೇಳಿಕೆಯಿಂದ ಯಾವುದೇ ವ್ಯತ್ಯಾಸ ಆಗೋದಿಲ್ಲ ಎಂದು ವಾಗ್ದಾಳಿ ನಡೆಸಿದರು.

ರಾಜ್ಯ ಸರ್ಕಾರ ಪತನ ಕುರಿತು ಪ್ರತಿಕ್ರಿಯಿಸಿ, ಸಿಎಂ, ಡಿಸಿಎಂ ನಡುವೆ ಮಾತುಕತೆ ಆಗಿದೆ. ಸಮಯ ಬಂದಾಗ ಸಿದ್ದರಾಮಯ್ಯರನ್ನ ಇಳಿಸಿ, ಡಿ.ಕೆ ಶಿವಕುಮಾರ್ ಸಿಎಂ ಆಗ್ತಾರೆ. ಸಿದ್ದರಾಮಯ್ಯ ಇಳಿಸಿದ್ರೆ, ಡಿ.ಕೆ ಶಿವಕುಮಾರ್ ಸಿಎಂ ಆಗಲ್ಲ. ಬದಲಾಗಿ ಕಾಂಗ್ರೆಸ್ ಛಿದ್ರ ಛಿದ್ರ ಆಗುತ್ತೆ. ಸಿಎಂ ಸ್ಥಾನಕ್ಕೆ ಸರ್ಕಾರದಲ್ಲಿ ಬಹಳಷ್ಟು ಆಕಾಂಕ್ಷಿಗಳಿದ್ದಾರೆ ಎಂದರು.

ಯಾವ ಪುರುಷಾರ್ಥಕ್ಕೆ ಕಾಂಗ್ರೆಸ್ ಎರಡು ವರ್ಷದ ಸಂಭ್ರಮಾಚರಣೆ ಮಾಡುತ್ತಿದೆ. ಈಗಾಗಲೇ ಜನರ ವಿಶ್ವಾಸ ಕಳೆದುಕೊಂಡಿದೆ. ಸಾಕಷ್ಟು ಭ್ರಷ್ಟಾಚಾರ ನಡೀತಾ ಇದೆ. ಗುತ್ತಿಗೆದಾರರು ಎಷ್ಟೋ ಜನ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕಾಂಗ್ರೆಸ್ ನಾಯಕರೇ ಹೇಳ್ತಾರೆ ನಮ್ಮ ಪರಿಸ್ಥಿತಿ ಗಂಭೀರವಾಗಿದೆ. ನಾವು ದುಂಬಾಲು ಬಿದ್ದರೂ ಯಾವುದೇ ಅಭಿವೃದ್ಧಿಗೆ ಹಣ ಸಿಗ್ತಿಲ್ಲ ಎಂದು ಎಂದರು.

# ಶಾಸಕರಿಂದ ದಾರಿ ತಪ್ಪಿಸುವ ಹುನ್ನಾರ : ಅಪ್ಸರಮಿಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಕ್ಷೇತ್ರವ್ಯಾಪ್ತಿಯಲ್ಲಿ ಎಲ್ಲ ಅಭಿವೃದ್ಧಿ ಕಾರ್ಯ ನನ್ನಿಂದಲೇ ನಡೆಯುತ್ತಿವೆ ಎನ್ನುವ ಭರದಲ್ಲಿ ಶಾಸಕ ಡಾ. ಸಿದ್ದು ಪಾಟೀಲ್ ಸ್ಥಳೀಯ ಕಾಂಗ್ರೆಸ್ ನಾಯಕರ ಬಗ್ಗೆ ಸುಳ್ಳು ಹೇಳಿಕೆಗಳನ್ನು ನೀಡುತ್ತ ಜನರಿಗೆ ದಾರಿ ತಪ್ಪಿಸುತ್ತಿದ್ದಾರೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಪ್ಸರಮಿಯ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರಕಾರದ ಅವಧಿಯಲ್ಲಿ ಹುಮನಾಬಾದ್ ಕ್ಷೇತ್ರದ ಶಾಸಕರಾಗಿ ರಾಜಶೇಖರ ಪಾಟೀಲ್ ಅಧಿಕಾರ ನಿರ್ವಹಣೆ ಮಾಡುತ್ತಿದ್ದ ಸಮಯದಲ್ಲಿ ರಾಜಶೇಖರ ಪಾಟೀಲ್ ಅವರು ಸರಕಾರದ ಮೇಲೆ ಒತ್ತಡ ಹಾಕಿ ಹೆಚ್ಚಿನ ಅನುದಾನ ತರುವ ಮೂಲಕ ಪ್ರವಾಸಿ ಮಂದಿರದಿಂದ ಎಸ್ ಬಿ ಐ ಬ್ಯಾಂಕ್ ವರೆಗೆ ರಸ್ತೆ ಸುಧಾರಣೆ ಕಾಮಗಾರಿಗೆ ಚಾಲನೆ ನೀಡಿದರು ಎಂದು ತಿಳಿಸಿದರು. ಈ ರಸ್ತೆ ಸುಧಾರಣೆ ಕಾಮಗಾರಿ ನನ್ನಿಂದಲೆ ನಡೆದಿದೆ. ಪ್ರಸ್ತುತ ದಿನಮಾನಗಳಲ್ಲಿ ಹುಮನಾಬಾದ್ ಕ್ಷೇತ್ರದ ಅಭಿವೃದ್ಧಿ ಕಂಡು ಕಾಂಗ್ರೆಸ್ ನಾಯಕರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ ಎಂದು ಸುಳ್ಳು ಹೇಳಿಕೆ ನೀಡುವ ಮೂಲಕ ಶಾಸಕ ಡಾ. ಸಿದ್ದು ಪಾಟೀಲ್ ಅವರು ಸುವ್ಯವಸ್ಥಿತ ರಾಜ-ಕಾರಣ ಮಾಡುತ್ತಿದ್ದಾರೆ ಎಂದು ಕಿಡಿ ಕಾರಿದರು. ಸ್ಥಳೀಯ ಕಾಂಗ್ರೆಸ್ ನಾಯಕರ

(2ನೇ ಪುಟ ನೋಡಿ)

## ಜನರ ನಿರೀಕ್ಷೆಯಂತೆ ಕೆಲಸ ಮಾಡಿ; ತುಂಬಾ



ಪುಸರಭೆ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರು ಸೇರಿದಂತೆ ಸ್ಥಳೀಯ ಕಾಂಗ್ರೆಸ್ ನಾಯಕರ ಬಗ್ಗೆ ಮಾತನಾಡುವ ನೈತಿಕತೆ ಶಾಸಕ ಡಾ. ಸಿದ್ದು ಪಾಟೀಲ್ ಅವರಿಗಿಲ್ಲ ಎಂದು ಗ್ರಾಮೀಣ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಓಂಕಾರ ತುಂಬಾ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರವಿದೆ. ಅಭಿವೃದ್ಧಿಗೆ ಸ್ಥಳೀಯ ಕಾಂಗ್ರೆಸ್ ನಾಯಕರು ಸಹಕಾರ ನೀಡುತ್ತಿಲ್ಲ ಹಾಗೆ, ಹೀಗೆ ಎಂದು ಹೇಳುವುದನ್ನು ಚುನಾವಣೆ ಪ್ರಚಾರ ಸಂದರ್ಭದಲ್ಲಿ ಕ್ಷೇತ್ರದ ಜನರಿಗೆ ನೀಡಿರುವ ಭರವಸೆ ಈಡೇರಿಸಲು ಮುಂದಾಗಬೇಕು. ಸಿಎಂ ಸಿದ್ದಾರಾಮಯ್ಯ ನವರಿಂದ ಅನುದಾನ ತರುವ ಮೂಲಕ ಸಕ್ಕರೆ ಕಾರ್ಖಾನೆ ಆರಂಭಿಸಲಿ ಎಂದು ಸಲಾಲು ಹಾಕಿದರು.

# ಪಾಕಿಸ್ತಾನ ಮಾನವಕುಲಕ್ಕೆ ಅಪಾಯಕಾರಿ

ಮಲ್ಲಮ್ಮ ನುಡಿ ವಾರ್ತೆ

ಹೈದರಾಬಾದ್:ಮೇ.17:ಪಾಕಿಸ್ತಾನವು ಭಯೋತ್ಪಾದನೆಯನ್ನು ಪ್ರಾಯೋಜಿಸುವ ದೀರ್ಘ ಇತಿಹಾಸವನ್ನು ಹೊಂದಿದ್ದು ಆ ದೇಶವು ಮಾನವಕುಲಕ್ಕೆ ಅಪಾಯಕಾರಿಯಾಗಿದೆ ಎಂದು ಆಲ್ ಇಂಡಿಯಾ ಮಜ್ಲಿಸ್-ಎ-ಇತ್ತೆಹಾದುಲ್ ಮುಸ್ಲಿಮೀನ್ (ಎಐ-ಎಂಐಎಂ) ನಾಯಕ ಅಸಾದುದ್ದೀನ್ ಓವೈಸಿ ಹೇಳಿದ್ದಾರೆ. ಸರ್ಕಾರವು ಹಲವಾರು ದೇಶಗಳಿಗೆ ಭೇಟಿ ನೀಡಲು ಕಳುಹಿಸುತ್ತಿರುವ ಸರ್ವಪಕ್ಷ ನಿಯೋಗಗಳಲ್ಲಿ ಒಬ್ಬರಾದ ಓವೈಸಿ, ಅಂತಾರಾಷ್ಟ್ರೀಯ ಸಮುದಾಯಕ್ಕೆ ತಮ್ಮ ಸಂದೇಶದ ತಿರುಳು ಇದೇ ಆಗಿರುತ್ತದೆ ಎಂದು ಹೇಳಿದರು. ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದಕರು ದೀರ್ಘಕಾಲದವರೆಗೆ ಅಮಾಯಕ ನಾಗರಿಕರನ್ನು ಕೊಲ್ಲುತ್ತಿರುವ ಬಗ್ಗೆ ಜಗತ್ತಿಗೆ ತಿಳಿಸಬೇಕಾಗಿದೆ ಎಂದು ಹೈದರಾಬಾದ್ ಸಂಸದ ಓವೈಸಿ ಸಂದರ್ಶನವೊಂದರಲ್ಲಿ ಹೇಳಿದರು.



ಪಾಕಿಸ್ತಾನಿ ಮಾಧ್ಯಮಗಳಲ್ಲಿ ತಮ್ಮನ್ನು ಗುರಿಯಾಗಿಸಿಕೊಂಡಿರುವ ಬಗ್ಗೆ ಕೇಳಿದ ಪ್ರಶ್ನೆಗೆ, ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ, ಪಾಕಿಸ್ತಾನಿಗಳು ಇಷ್ಟೊಂದು ಸುಂದರ ವ್ಯಕ್ತಿಯನ್ನು ನೋಡಿಲ್ಲ ಎಂದು ಹೇಳಿದರು. ಅವರು ನನ್ನನ್ನು ಭಾರತದಲ್ಲಿ ಮಾತ್ರ ನೋಡುತ್ತಾರೆ. ನನ್ನ ಮಾತನ್ನು ಕೇಳುತ್ತಲೇ ಇರಬೇಕು. ಆಗ ಅವರ ಜ್ಞಾನ ಹೆಚ್ಚಾಗುತ್ತದೆ ಮತ್ತು ಅಜ್ಞಾನ ದೂರವಾಗುತ್ತದೆ. ನಾನು ಇದನ್ನು ಈ ಮೊದಲು ಹೇಳಿದ್ದೇನೆ. ಮತ್ತೊಮ್ಮೆ ಹೇಳುತ್ತಿದ್ದೇನೆ. ನಮ್ಮ ಪ್ರಧಾನಿ ಕದನ ವಿರಾಮವನ್ನು ಘೋಷಿಸಬೇಕಿತ್ತು. ಅಮೆರಿಕ ಅಧ್ಯಕ್ಷರಲ್ಲ ಎಂದು ಓವೈಸಿ ಹೇಳಿದರು. ನಿಮಗೆ ತಿಳಿದಿದೆಯೇ, ಪಾಕಿಸ್ತಾನ ಅಮೆರಿಕದೊಂದಿಗೆ ಕೇವಲ 10 ಬಿಲಿಯನ್ ವ್ಯಾಪಾರ, ಆದರೆ ಭಾರತಕ್ಕೆ ಅದು 150 ಬಿಲಿಯನ್‌ಗಿಂತ ಹೆಚ್ಚು. ಇದು ತಮಾಷೆಯಾ? ಎಂದು ಪ್ರಶ್ನಿಸಿದರು.

ಪಾಕಿಸ್ತಾನ ಇನ್ನು ಮುಂದೆ ನಮ್ಮ ವಿರುದ್ಧ

(2ನೇ ಪುಟ ನೋಡಿ)

# ತಾಳಿ ಕಟ್ಟಿ ಬದುಕಿಗೆ ವಿದಾಯ ಹೇಳಿದ ಮದುಮಗ!

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.17-ವಧುವಿಗೆ ತಾಳಿ ಕಟ್ಟಿ ಅಕ್ಷತೆ ಹಾಕಿದ ಕೆಲವೇ ನಿಮಿಷಗಳಲ್ಲಿ ಮದುಮಗ ಮಂಟಪದಲ್ಲೇ ಕುಸಿದು ಸಾವನ್ನಪ್ಪಿದ ಹೃದಯವಿದ್ರಾವಕ ಘಟನೆ ಜಿಲ್ಲೆಯ ಜಮಖಂಡಿ ಪಟ್ಟಣದಲ್ಲಿ ಶನಿವಾರ ನಡೆದಿದೆ.

ಜಮಖಂಡಿ ತಾಲೂಕಿನ ಕುಂಬಾರಹಳ್ಳ ಗ್ರಾಮದ ನಿವಾಸಿ ರಾಜ್ಯ ಸೈಕ್ಲಿಂಗ್ ಸಂಸ್ಥೆ ಕಾರ್ಯದರ್ಶಿ ಶಂಕರ ಕುರಣಿ ಅವರ ಪುತ್ರ ಪ್ರವೀಣ ಕುರಣಿ(25) ಮದುವೆ ಜಮಖಂಡಿಯ ನಂದಿಕೇಶ್ವರ ಕಲ್ಯಾಣ ಮಂಟಪದಲ್ಲಿ ಆಯೋಜನೆಗೊಂಡಿತ್ತು.

ಬೆಳಿಗ್ಗೆ ಮದುವೆ ಕಾರ್ಯಕ್ರಮದ



ಎಲ್ಲ ವಿಧಾನಗಳು ನೆರವೇರಿ ಮಧ್ಯಾಹ್ನ 12-15 ಗಂಟೆಗೆ ಮದುಮಕ್ಕಳು ಮದುವೆ ಮಂಟಪಕ್ಕೆ ಬಂದು ಪ್ರವೀಣ ವಧುವಿಗೆ ತಾಳಿ ಕಟ್ಟಿ ಹೂಹಾರ ಬದಲಾಯಿಸಿಕೊಂಡು ಸಂಭ್ರಮಿಸಿ ಆಗಮಿಸಿದ್ದ ಬಂಧು ಬಾಂಧವರ ಶುಭಾಶಯ ಸ್ವೀಕರಿಸುತ್ತಿದ್ದಂತೆ ತಲೆ ಸುತ್ತಿ ಬಂದಂತಾಗಿದೆ.

ನೀರು ತರಿಸಿ ಕುಡಿಸಬೇಕೆನ್ನುವಷ್ಟರಲ್ಲಿ ಹೃದಯಾಘಾತವಾಗಿ ಪ್ರವೀಣ ಕುಸಿದು ಬಿದ್ದಿದ್ದಾರೆ. ತಕ್ಷಣ ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ. ಕ್ಷಣಾರ್ಧದಲ್ಲಿ ನಡೆದು ಹೋದ ಈ ಘಟನೆಯಿಂದ ಮದುವೆ ಸಂಭ್ರಮದಲ್ಲಿದ್ದ ಕುಟುಂಬದವರಿಗೆ ಬರಸಿಡಿಲು ಬಡಿದಂತಾಗಿ ಇಡೀ ವಾತಾವರಣ ಮೌನವಾಯಿತು.

ಮದುವೆಗೆ ಬಂದು ಸಂಭ್ರಮಪಡಬೇಕಾದ ಜನ ಪ್ರವೀಣನ ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡು ಅವನ ಬದುಕಿಗೆ ವಿದಾಯ ಹೇಳಿದ್ದು ವಿಪರ್ಯಾಸ.

# ವೈದ್ಯಕೀಯ, ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕ ಹೆಚ್ಚಳ ಇಲ್ಲ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.17: ಖಾಸಗಿ ವೈದ್ಯಕೀಯ ಕಾಲೇಜುಗಳ ಒತ್ತಡದ ಹೊರತಾಗಿಯೂ, ಮುಂಬರುವ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕದಲ್ಲಿ ಯಾವುದೇ ಹೆಚ್ಚಳವಿಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ್ ಶನಿವಾರ ತಿಳಿಸಿದ್ದಾರೆ.

ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿಗಳ ಪದಾಧಿಕಾರಿಗಳೊಂದಿಗಿನ ಸಭೆಯಲ್ಲಿ ಸಚಿವರು ಈ ವಿಚಾರ ಸ್ಪಷ್ಟಪಡಿಸಿದ್ದಾರೆ ಎಂದು ಅವರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.



ಖಾಸಗಿ ಕಾಲೇಜುಗಳು ಶೇ. 10 ರಿಂದ 15 ರಷ್ಟು ಶುಲ್ಕ ಹೆಚ್ಚಳಕ್ಕೆ ಮನವಿ ಮಾಡಿದ್ದವು. ಆದರೆ ಕಳೆದ ವರ್ಷ ಶೇ. 10 ರಷ್ಟು ಹೆಚ್ಚಳಕ್ಕೆ ಸರ್ಕಾರ ಅವಕಾಶ ನೀಡಿತ್ತು. ಈ ವರ್ಷ ಯಾವುದೇ ಶುಲ್ಕ ಹೆಚ್ಚಳಕ್ಕೆ ಅವಕಾಶ ನೀಡಲಾಗುವುದಿಲ್ಲ ಎಂದು ಸಚಿವರು ಹೇಳಿದ್ದಾರೆ.


ಕಳೆದ ವರ್ಷ ಶೇ. 10 ರಷ್ಟು ಹೆಚ್ಚಳ ಮಾಡಿರುವುದನ್ನು ಗಮನಿಸಿದ ಸಚಿವರು, ಈ ವರ್ಷ ಯಾವುದೇ ಶುಲ್ಕ ಹೆಚ್ಚಳ ಇರುವುದಿಲ್ಲ ಎಂದು ಒತ್ತಿ ಹೇಳಿದರು ಮತ್ತು ಈ ನಿರ್ಧಾರವನ್ನು ಅಧಿಕೃತಗೊಳಿಸುವ ಆದೇಶಕ್ಕೆ ಶೀಘ್ರದಲ್ಲೇ ಸಹಿ ಹಾಕಲಾಗುವುದು ಎಂದು ತಿಳಿಸಿದ್ದಾರೆ.

# ಇಂದು ಇಸ್ರೋದ 101ನೇ ಉಪಗ್ರಹ ಉಡಾವಣೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.17: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ(ಇಸ್ರೋ) ಮತ್ತೊಂದು ಹೆಗ್ಗಳಿಕೆಗೆ ಪಾತ್ರವಾಗಲು ಸಜ್ಜಾಗಿದ್ದು, ಮೇ 18 ರಂದು ಶ್ರೀಹರಿಕೋಟದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ PSLV-ಅ61/EOS-09 ಕಾರ್ಯಾಚರಣೆಯೊಂದಿಗೆ ತನ್ನ 101ನೇ ಉಪಗ್ರಹವನ್ನು ಉಡಾವಣೆ ಮಾಡಲಿದೆ.

ಈ ಕಾರ್ಯಾಚರಣೆಯಡಿಯಲ್ಲಿ ವಿಜ್ಞಾನಿಗಳು ಭಾರತದ ಎಲ್ಲಾ ಹವಾಮಾನ ಭೂ ವೀಕ್ಷಣಾ ಸಾಮರ್ಥ್ಯ ಹೊಂದಿರುವ ಉಪಗ್ರಹವನ್ನು



ಸೂರ್ಯನ ಸಿಂಕ್ರೊನಸ್ ಧ್ರುವ ಕಕ್ಷೆಯಲ್ಲಿ (SPO) ಇರಿಸಲಿದ್ದಾರೆ.

ನಾಳೆ ಬೆಳಗ್ಗೆ 5.59ಕ್ಕೆ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಈ ಉಪಗ್ರಹ ಉಡಾವಣೆ ನಿಗದಿಯಾಗಿದ್ದು, ಇಸ್ರೋದ ಅಧಿಕೃತ ?ಯೂಟ್ಯೂಬ್? ಚಾನೆಲ್?ನಲ್ಲಿ ಇದರ ನೇರಪ್ರಸಾರ ವೀಕ್ಷಿಸಬಹುದಾಗಿದೆ.

ಇಸ್ರೋ ಹಂಚಿಕೊಂಡ ಮಾಹಿತಿಯ

(2ನೇ ಪುಟ ನೋಡಿ)

# ಜಿಎಸ್ ಟಿ ಸಂಗ್ರಹಣೆಯಲ್ಲಿ ದೇಶದಲ್ಲಿ ಪ್ರಥಮ ಸ್ಥಾನ ಗಳಿಸಲು ಪ್ರಯತ್ನಿಸಿ- ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ಸಿಎಂ ಕರೆ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮೇ, 17: ಜಿಎಸ್‌ಟಿ ಸಂಗ್ರಹಣೆಯಲ್ಲಿ ಕರ್ನಾಟಕ ರಾಜ್ಯ ದೇಶದಲ್ಲಿ ದ್ವಿತೀಯ ಸ್ಥಾನದಲ್ಲಿದ್ದು, ಮುಂದಿನ ದಿನಗಳಲ್ಲಿ ಎರಡನೇ ಸ್ಥಾನಕ್ಕೆ ಬರಲು ಪ್ರಯತ್ನಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ತಿಳಿಸಿದರು.

ಇಂದು ಕರ್ನಾಟಕ ವಾಣಿಜ್ಯ ತೆರಿಗೆಗಳ ಸೇವಾ ಸಂಘ ಬೆಂಗಳೂರು ಇವರ ವತಿಯಿಂದ ಆಯೋಜಿಸಲಾಗಿದ್ದ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಂಘವು 50 ವರ್ಷಗಳ ಮೈಲಿಗಲ್ಲನ್ನು ಸಾಧಿಸಿದ್ದು, ಇದಕ್ಕಾಗಿ ಶ್ರಮಿಸಿದ ಸಂಘದ ಎಲ್ಲ ಪದಾಧಿಕಾರಿಗಳಿಗೆ ಅಭಿನಂದನೆಗಳು. ನಿಮ್ಮೆಲ್ಲರ ಸಹಕಾರದಿಂದ ನಾನು ಆರ್ಥಿಕ ಇಲಾಖೆಯ ಜವಾಬ್ದಾರಿಯನ್ನು ದೀರ್ಘ ಕಾಲದವರೆಗೆ ನಿಭಾಯಿಸಲು ಸಾಧ್ಯವಾಯಿತು. ನಾನು ಹಣಕಾಸು ಮಂತ್ರಿಯಾಗಿ, ಉಪಮುಖ್ಯಮಂತ್ರಿಯಾಗಿ ಹಾಗೂ ಮುಖ್ಯಮಂತ್ರಿಯಾಗಿ ಹಣಕಾಸು ಇಲಾಖೆಯ ಕಾರ್ಯಭಾರವನ್ನು ನಿರ್ವಹಿಸಿದ್ದೇನೆ. ಈಗ ಸರ್ಕಾರದ ಯಶಸ್ವಿ ಆಡಳಿತಕ್ಕೆ ಎರಡು ವರ್ಷ ಪೂರೈಸಿದ್ದು, ಮೇ 20 ರಂದು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಸಮಾವೇಶವನ್ನು ಏರ್ಪಡಿಸಲಾಗಿದೆ ಎಂದರು.

ತೆರಿಗೆ ಸಂಗ್ರಹಣೆಯಲ್ಲಿ ವಾಣಿಜ್ಯ ತೆರಿಗೆ ಅಧಿಕಾರಿಗಳ ಪ್ರಮುಖ ಪಾತ್ರ ವಹಿಸುತ್ತಿದ್ದು, ಇದಕ್ಕಾಗಿ ಎಲ್ಲ ಅಧಿಕಾರಿಗಳಿಗೆ ಅಭಿನಂದನೆಗಳು. ಜವಾಬ್ದಾರಿಯುತ ಅಧಿಕಾರಿಗಳಿಂದ ಉತ್ತಮ ತೆರಿಗೆ ಸಂಗ್ರಹಣೆಯಾಗುತ್ತದೆ. ವಾಣಿಜ್ಯ ತೆರಿಗೆ ಇಲಾಖೆಯಿಂದ ಹೆಚ್ಚಿನ ಮೊತ್ತದ ತೆರಿಗೆ ಸಂಗ್ರಹಣೆ ಸಾಧ್ಯವಾಗುತ್ತದೆ. ಕಳೆದ ವರ್ಷ ತೆರಿಗೆ ಸಂಗ್ರಹಣೆಗೆ 1,03,000 ಕೋಟಿಗಳ ಗುರಿ ನಿಗದಿಪಡಿಸಲಾಗಿದ್ದು, ಹೆಚ್ಚುವರಿ 17000 ಕೋಟಿಗಳ ತೆರಿಗೆ

(2ನೇ ಪುಟ ನೋಡಿ)

# ಕೊತ್ತೂರು ಮಂಜುನಾಥ್‌ಗೆ ಸೇನೆ ಬಗ್ಗೆ ಅನುಮಾನವಿಲ್ಲ, ಬಿಜೆಪಿಗರ ಬಗ್ಗೆಯಿದೆ: ರಾಮಲಿಂಗಾ ರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ರಾಮನಗರ:ಮೇ.17:ಮಂಜುನಾಥ್‌ಗೆ ಸೈನ್ಯದ ಬಗ್ಗೆ ವಿಶ್ವಾಸ ಇದೆ. ಸೈನ್ಯಕ್ಕೆ ಇನ್ನೂ ಫ್ರೀಹ್ಯಾಂಡ್ ಕೊಟ್ಟಿದ್ರೆ ಪಾಕಿಸ್ತಾನಕ್ಕೆ ಮತ್ತಷ್ಟು ಬುದ್ದಿ ಕಲಿಸಬಹುದಿತ್ತು ಎನ್ನುವುದು ಅವರ ಅಭಿಪ್ರಾಯ. ಅವರು ಬಿಜೆಪಿ ನಾಯಕರ ಬಗ್ಗೆ ಸಂಶಯ ವ್ಯಕ್ತಪಡಿಸಿದ್ದಾರೆ ಹೊರತು ಸೈನ್ಯದ ಬಗ್ಗೆ ಅಲ್ಲ ಎಂದು ಉಸ್ತುವಾರಿ ಸಚಿವ ರಾಮಲಿಂಗಾ ರೆಡ್ಡಿ ಹೇಳಿದ್ದಾರೆ.

ಆಪರೇಷನ್ ಸಿಂಧೂರ ಬಗ್ಗೆ ಶಾಸಕ ಕೊತ್ತೂರು ಮಂಜುನಾಥ್ ಅನುಮಾನ ವ್ಯಕ್ತಪಡಿಸಿದ ವಿಚಾರದ ಕುರಿತು ರಾಮನಗರದಲ್ಲಿ ಮಾತನಾಡಿದ ಅವರು, ಕೊತ್ತೂರು ಮಂಜುನಾಥ್ ಪಕ್ಕಾ ದೇಶಾಭಿಮಾನಿ. ಸೈನ್ಯದ ಬಗ್ಗೆ ಅವರು



ತಪ್ಪು ಮಾತನಾಡಿಲ್ಲ. ಸೈನಿಕರ ಬಗ್ಗೆ ಕಾಂಗ್ರೆಸ್ ಯಾವತ್ತೂ ಅಪಮಾನ ಮಾಡಲ್ಲ. ಕಾಂಗ್ರೆಸ್ ಪಕ್ಷ ಸ್ವಾತಂತ್ರ್ಯ ಹೋರಾಟ ಮಾಡಿದ ಪಕ್ಷ. ಬಿಜೆಪಿಯವರು ಬೇಕಾದರೆ ಸೈನಿಕರಿಗೆ ಅಪಮಾನ ಮಾಡಬಹುದು ಆದರೆ ಕಾಂಗ್ರೆಸ್ ಮಾಡಲ್ಲ. ಸೇನಾ ಮುಖ್ಯಸ್ಥರು ಹೇಳಿರೋದನ್ನ ನಾವು ನಂಬುತ್ತೇವೆ ಹೊರತು ಬಿಜೆಪಿಗರ ಮಾತು ನಂಬಲ್ಲ ಎಂದು ಕೊತ್ತೂರು ಮಂಜುನಾಥ್ ಹೇಳಿಕೆಯನ್ನ ಸಮರ್ಥನೆ ಮಾಡಿಕೊಂಡರು.

ಬಮೂಲ್ ನಿರ್ದೇಶಕ ಸ್ಥಾನಕ್ಕೆ ಮಾಜಿ ಸಂಸದ ಡಿ.ಕೆ.ಸುರೇಶ್ ಸ್ಪರ್ಧೆ ಮಾಡಿರುವ ವಿಚಾರದ ಕುರಿತು ಮಾತನಾಡಿದ ಅವರು, ಇಂದು ಡಿ.ಕೆ ಸುರೇಶ್ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಅವರು ಎಲ್ಲಾ ಸ್ಥಾನಕ್ಕೂ ಅರ್ಹವಾಗಿದ್ದಾರೆ. ಲೋಕಸಭಾ ಸದಸ್ಯರಾಗಿ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದಾರೆ. ಅವರು ಬಯಸಿದರೆ ಯಾವ ಸ್ಥಾನ ಬೇಕಾದರೂ ಅವರಿಗೆ ಸಿಗುತ್ತಿತ್ತು. ಆದರೆ ಅವರು ಯಾವ ಸ್ಥಾನವನ್ನೂ ಕೇಳಿರಲಿಲ್ಲ. ಈಗ ಬಮೂಲ್‌ಗೆ ಸ್ಪರ್ಧೆ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಒಂದನೇ ಪುಟದಿಂದ

## ಪ್ರಯತ್ನಿಸಿ- ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ಸಿಎಂ ಕರೆ

ಸಂಗ್ರಹಣೆಯನ್ನು ಸಾಧಿಸಲಾಗಿತ್ತು. ಈ ವರ್ಷ ತೆರಿಗೆ ಸಂಗ್ರಹಣೆಗೆ 1,20,000 ಕೋಟಿಗಳ ಗುರಿಯನ್ನು ನೀಡಲಾಗಿದ್ದು, ಅಧಿಕಾರಿಗಳು ಗುರಿಮೀರಿ ಸಾಧನೆ ಮಾಡಬೇಕಿದೆ. ಈ ವರ್ಷ 409000 ಕೋಟಿ ರೂ. ಗಳ ಬಜೆಟ್ ಮಂಡಿಸಲಾಗಿದ್ದು, ಇದರಲ್ಲಿ ಗ್ಯಾರಂಟಿ ಯೋಜನೆಗಳಿಗೆ 50,018 ಕೋಟಿ ರೂ.ಗಳನ್ನು ಮೀಸಲಿಡಲಾಗಿದೆ. ಈವರೆಗೆ 90,000 ಕೋಟಿ ರೂ.ಗಳನ್ನು ಗ್ಯಾರಂಟಿಯೋಜನೆಗಳಿಗೆ ವೆಚ್ಚ ಮಾಡಲಾಗಿದೆ. ಗ್ಯಾರಂಟಿಗಳಿಗೆ ಹಣ ಪೂರೈಸಲಾಗದೇ ರಾಜ್ಯ ಆರ್ಥಿಕ ದಿವಾಳಿಯಾಗುತ್ತದೆ ಎಂದು ವಿರೋಧಪಕ್ಷದವರು ಟೀಕಿಸಿದ್ದರು. ಸರ್ಕಾರದ ಈ ಯಶಸ್ಸಿಗೆ ಇಲಾಖೆಯ ಅಧಿಕಾರಿಗಳ ಶ್ರಮ ಅಡಗಿದೆ ಎಂದರು.

ತೆರಿಗೆ ಪ್ರಕ್ರಿಯೆಯಲ್ಲಿ ಸುಧಾರಣೆ ತರಲು ಸರ್ಕಾರ ಬದ್ಧ:

ನಾನು ಹಣಕಾಸಿನ ಮಂತ್ರಿಯಾಗಿದ್ದರೂ ಸಹ ತೆರಿಗೆ ಅಧಿಕಾರಿಗಳ ಕಾರ್ಯನಿರ್ವಹಣೆಯಲ್ಲಿ ಅನಗತ್ಯ ಮದ್ಯಪ್ರವೇಶ ಮಾಡಲು ಬಯಸುವುದಿಲ್ಲ. ಆದರೆ ಅಧಿಕಾರಿಗಳು ಇಲಾಖೆಗೆ ನೀಡಿರುವ ತೆರಿಗೆ ಸಂಗ್ರಹಣೆಯ ಗುರಿಯನ್ನು ಸಾಧಿಸಲು ಪ್ರಯತ್ನಿಸಬೇಕು. ಬೆಂಗಳೂರಿನಲ್ಲಿ ತೆರಿಗೆ ಸೋರಿಕೆ ಹೆಚ್ಚಿನ ಮಟ್ಟದಲ್ಲಿದೆ. ಕರ್ನಾಟಕ ತೆರಿಗೆ ಸಂಗ್ರಹಣೆಯಲ್ಲಿ ಮುಂಚೂಣಿಯಲ್ಲಿದೆ. ತೆರಿಗೆ ಪಾವತಿ ಪ್ರಕ್ರಿಯೆಯಲ್ಲಿ ಹೆಚ್ಚಿನ ಸುಧಾರಣೆಗಳನ್ನು ತರಲು ಸರ್ಕಾರ ಬದ್ಧವಾಗಿದೆ. ತೆರಿಗೆ ಅಧಿಕಾರಿಗಳ ಸಂಘದ ಬೇಡಿಕೆಗಳನ್ನು ಸರ್ಕಾರ ಪರಿಶೀಲಿಸಲಾಗುವುದು. ಸರ್ಕಾರಿ ನೌಕರರ ನ್ಯಾಯಯುತ ಬೇಡಿಕೆಗಳಿಗೆ ಸರ್ಕಾರ ಎಂದಿಗೂ ಸ್ಪಂದಿಸುತ್ತದೆ. ಅಂತೆಯೇ ಕರ್ತವ್ಯಲೋಪ ಎಸಗುವ ಅಧಿಕಾರಿ ನೌಕರರ ಮೇಲೆ ಶಿಸ್ತಿನ ಕ್ರಮವನ್ನೂ ಸರ್ಕಾರ ತೆಗೆದುಕೊಳ್ಳುತ್ತದೆ ಎಂದರು.

## 101ನೇ ಉಪಗ್ರಹ ಉಡಾವಣೆ

ಪ್ರಕಾರ, ಉಡಾವಣಾ ವಾಹನವು 44.5 ಮೀಟರ್ ಎತ್ತರವಾಗಿದೆ ಮತ್ತು 321 ಟನ್‌ಗಳಷ್ಟು ಲಿಫ್ಟ್ ಆಫ್ ದ್ರವ್ಯರಾಶಿಯನ್ನು ಹೊಂದಿದೆ. ಇದು ಇಸ್ರೋ ನಿರ್ಮಿಸಿದ ಅತ್ಯಂತ ಭಾರವಾದ ಉಪಗ್ರಹವಾಗಿದೆ.

ಈ ಉಪಗ್ರಹವು ಸಿಂಥೆಟಿಕ್ ಅಪರ್ಚರ್ ರಾಡಾರ್ (SAR) ಅನ್ನು ಹೊಂದಿದ್ದು, 1696.24 ಕೆಜಿ. ತೂಕವಿದೆ. ಇದರ ಜೀವಿತಾವಧಿ ಐದು ವರ್ಷಗಳಾಗಿದ್ದು, ಸಿ–ಬ್ಯಾಂಡ್ ಸಿಂಥೆಟಿಕ್ ಅಪರ್ಚರ್ ರಾಡಾರ್ ನಿಂದ (SAR) ಸಜ್ಜುಗೊಂಡಿದ್ದು, ಎಲ್ಲಾ ಹವಾಮಾನ ಪರಿಸ್ಥಿತಿಗಳಲ್ಲಿ ಹಗಲು–ರಾತ್ರಿ ಹೆಚ್ಚಿನ ರೆಸಲ್ಯೂಶನ್ ಚಿತ್ರಗಳ ಸೆರೆಹಿಡಿಯಲು ಅನುವು ಮಾಡಿಕೊಡಲಿದೆ.

EOS–09ನ ಮುಖ್ಯ ಉದ್ದೇಶ ಕೃಷಿ, ಅರಣ್ಯ ಮೇಲ್ವಿಚಾರಣೆ, ವಿಪತ್ತು ನಿರ್ವಹಣೆ, ನಗರ ಯೋಜನೆ ಮತ್ತು ರಾಷ್ಟ್ರೀಯ ಭದ್ರತೆಯಂತಹ ಕ್ಷೇತ್ರಗಳಿಗೆ ನೆರವಾಗುವುದಾಗಿದೆ. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಂತಹ ಇತ್ತೀಚಿನ ಭದ್ರತಾ ಘಟನೆಗಳ ಮೇಲ್ವಿಚಾರಣೆ ಮಾಡಲಿದೆ. ಸೂಕ್ಷ್ಮ ಗಡಿಗಳು ಮತ್ತು ಕರಾವಳಿ ಪ್ರದೇಶಗಳಲ್ಲಿ ಕಣ್ಗಾವಲು ಹೆಚ್ಚಿಸುವ ನಿಟ್ಟಿನಲ್ಲಿ ಉಪಗ್ರಹ ಕಾರ್ಯ ನಿರ್ವಹಿಸಲಿದೆ.

## ದಾರಿ ತಪ್ಪಿಸುವ ಹುನ್ನಾರ : ಅಪ್ಸರಮಿಯ

ಬಗ್ಗೆ ಇಲ್ಲಸಲ್ಲದ ಆರೋಪಗಳನ್ನು ಮಾಡುವುದನ್ನು ಬಿಟ್ಟು ಸಾರ್ವತ್ರಿಕ ಚುನಾವಣೆಯಲ್ಲಿ ಶಾಸಕ ಡಾ. ಸಿದ್ದು ಪಾಟೀಲ್ ಜನ ಮನ್ನಣೆ ಪಡೆದಿದ್ದಾರೆ. ಅದಕ್ಕಾಗಿ ಕ್ಷೇತ್ರದ ಜನರ ನಿರೀಕ್ಷೆಯಂತೆ ಕ್ಷೇತ್ರ ವ್ಯಾಪ್ತಿಯಲ್ಲಿ ಉತ್ತಮ ಯೋಜನೆಗಳನ್ನು ಅನುಷ್ಠಾನ ಮಾಡುವ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

## ಮಾನವಕುಲಕ್ಕೆ ಅಪಾಯಕಾರಿ

ಭಯೋತ್ಪಾದಕ ದಾಳಿ ನಡೆಸುವುದಿಲ್ಲ ಎಂದು ಅಮೆರಿಕ ಖಾತರಿ ನೀಡಬಹುದೇ ಎಂದು ಓವೈಸಿ ಹೇಳಿದರು. ಪಾಕಿಸ್ತಾನ ಸೇನೆ ಯಾವಾಗಲೂ ಭಾರತದೊಂದಿಗೆ ಜಗಳವಾಡುತ್ತದೆ. ನಾವು ಇದನ್ನು ಎಷ್ಟು ದಿನ ಸಹಿಸಿಕೊಳ್ಳುವುದು? ಪಾಕಿಸ್ತಾನದೊಂದಿಗೆ ನೀವು ಹೇಗೆ ವ್ಯವಹಾರ ಮಾಡೋದು? ಅವರು ಭಿಕ್ಷುಕರು. ನಾವು ಅಮೆರಿಕದಿಂದ ನಿರೀಕ್ಷಿಸುತ್ತಿರುವುದು ಟಿಆರ್‌ಎಫ್ (ದಿ ರೆಸಿಸ್ಟೆನ್ಸ್ ಫ್ರಂಟ್) ಅನ್ನು ಭಯೋತ್ಪಾದಕ ಸಂಘಟನೆ ಎಂದು ಘೋಷಿಸಬೇಕು ಎಂಬುದಷ್ಟೇ ನಮ್ಮ ನಿರೀಕ್ಷೆ.

ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಯಿಂದ ಭಾರತವು ಸಾಕಷ್ಟು ನಷ್ಟ ಅನುಭವಿಸಿದೆ ಎಂದು ಹೈದರಾಬಾದ್ ಸಂಸದರು ಹೇಳಿದರು. ಜಿಯಾ–ಉಲ್–ಹಕ್ ಕಾಲದಿಂದಲೂ ಜನರ ಹತ್ಯಾಕಾಂಡವನ್ನು ನಾವೆಲ್ಲರೂ ನೋಡಿದ್ದೇವೆ. ಆದಾಗ್ಯೂ, ರಾಜತಾಂತ್ರಿಕ ಅಭಿಯಾನದ ಬಗ್ಗೆ ಸರ್ಕಾರ ಇನ್ನೂ ವಿವರವಾದ ಮಾಹಿತಿಯನ್ನು ನೀಡಿಲ್ಲ ಎಂದು ಓವೈಸಿ ಹೇಳಿದರು. ಭಾರತದೊಂದಿಗಿನ ಸಂಘರ್ಷದಲ್ಲಿ ತನ್ನನ್ನು ತಾನು ಇಸ್ಲಾಮಿಕ್ ರಾಷ್ಟ್ರವೆಂದು ಬಿಂಬಿಸಿಕೊಳ್ಳುತ್ತಿರುವ ಪಾಕಿಸ್ತಾನವನ್ನು ತರಾಟೆಗೆ ತೆಗೆದುಕೊಳ್ಳುವ ಅಗತ್ಯವಿದೆ ಎಂದು ಲೋಕಸಭಾ ಸದಸ್ಯ ಓವೈಸಿ ಹೇಳಿದರು.

# ಪರಿಶಿಷ್ಟ ಜಾತಿಯ ಒಳ ಮೀಸಲಾತಿ

## ಸಮೀಕ್ಷೆ ನಡೆಸುವ ದಿನಾಂಕ ಮೇ 25 ರವರೆಗೆ ವಿಸ್ತರಣೆ

ಕಲಬುರಗಿ,ಮೇ.17:ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಸಮೀಕ್ಷೆ ಕುರಿತಂತೆ ಮನೆ–ಮನೆಗೆ ತೆರಳಿ ಗಣತಿ–ದಾರರು ಸಮೀಕ್ಷೆ ನಡೆಸಲು ದಿನಾಂಕವನ್ನು 2025ರ ಮೇ 25 ರವರೆಗೆ ವಿಸ್ತರಿಸಲಾಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರು ತಿಳಿಸಿದ್ದಾರೆ.

ವಿಶೇಷ ಶಿಬಿರದ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ದಿನಾಂಕವನ್ನು ಮೇ 26 ರಿಂದ 28 ರವರೆಗೆ 3 ದಿನಗಳ ಕಾಲ ಮರು ನಿಗದಿಪಡಿಸಲಾಗಿದೆ. ಆನ್‌ಲೈನ್ ಮೂಲಕ ಸ್ವಯಂ ಘೋಷಣೆಯನ್ನು ಮಾಡುವ ದಿನಾಂಕವನ್ನು ಮೇ 19 ರಿಂದ 28ರವರೆಗೆ ನಿಗದಿಪಡಿಸಲಾಗಿದೆ. ಅದರಂತೆ ಕಲಬುರಗಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಹಾಗೂ ಸಹಾಯಕ ಆಯುಕ್ತರ ಅಧ್ಯಕ್ಷತೆಯಲ್ಲಿ ತಾಲೂಕಾ ಮಟ್ಟದ ಸಮನ್ವಯ ಸಮಿತಿ ರಚಿಸಲಾಗಿದೆ. ಮತ್ತು ಸಮೀಕ್ಷೆಯ ಕುರಿತು ಗಣತಿದಾರರಿಗೆ ಮತ್ತು ಮೇಲ್ವಿಚಾರಕರಿಗೆ ಮಾಸ್ಟರ್ ಟ್ರೈನರ್‌ಗಳಿಗೆ ಈಗಾಗಲೇ ತರಬೇತಿ ನೀಡಲಾಗಿದೆ.

ಆದ್ದರಿಂದ ಗಣತಿದಾರರು ನಡೆಸುವ ಸಮೀಕ್ಷೆಯ ಸಂದರ್ಭದಲ್ಲಿ ಜಿಲ್ಲೆಯ ಎಲ್ಲಾ ಇಲಾಖೆಗಳ ಅಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು, ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು/ಪದಾಧಿಕಾರಿಗಳು, ಸಾರ್ವಜನಿಕರು, ಪೋಷಕರು ಮತ್ತು ವಿದ್ಯಾರ್ಥಿಗಳು ಗಣ–ತಿದಾರರಿಗೆ ಸಹಕರಿಸಿ ಈ ಸಮೀಕ್ಷೆಯ ಯಶಸ್ವಿಗೊಳಿಸಬೇಕು.

ಪರಿಶಿಷ್ಟ ಜಾತಿ ಒಳ ಮೀಸಲಾತಿ ಕುರಿತಂತೆ ಗೌರವಾನ್ವಿತ ನ್ಯಾಯಮೂರ್ತಿಗಳಾದ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ಏಕ ಸದಸ್ಯ ವಿಚಾರಣಾ ಆಯೋಗವನ್ನು ರಚಿಸಲಾಗಿದೆ. ಸದರಿ ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಶೇಖರಿಸಲು ಸಮೀಕ್ಷೆಯನ್ನು ನಡೆಸಲು ತಿರ್ಮಾನಿಸಿ, ರಾಜ್ಯ ಮಟ್ಟದ, ಬಿ.ಬಿ.ಎಂ.ಪಿ, ಜಿಲ್ಲಾ ಮಟ್ಟದ ಮತ್ತು ತಾಲೂಕಾ ಮಟ್ಟದ ಸಮನ್ವಯ ಸಮಿತಿಗಳನ್ನು ಸರಕಾರ ರಚಿಸಿ ಆದೇಶಿಸಲಾಗಿದೆ.

ಪರಿಶಿಷ್ಟ ಜಾತಿಯ ಪಟ್ಟಿಗೆ ಸೇರಿರುವ ಜನರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯ, ಔದ್ಯೋಗಿಕ ಪ್ರಾತಿನಿಧ್ಯತೆ ಇತ್ಯಾದಿ ಸ್ಥಿತಿಗಳ ಬಗ್ಗೆ ವೈಜ್ಞಾನಿಕವಾಗಿ ಮತ್ತು ವಾಸ್ತವಿಕ ಮಾಹಿತಿ ಪಡೆದುಕೊಳ್ಳುವುದು ಸದರಿ ಸಮೀಕ್ಷೆಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದ್ದಾರೆ.

# ಪರೀಕ್ಷಾ ಕೇಂದ್ರಗಳ ಹೆಸರಿನಲ್ಲಿ 8.82 ಲಕ್ಷ ರೂ. ವಂಚನೆ

ಕಲಬುರಗಿ,ಮೇ.17:ಸರ್ಕಾರಿ ಹುದ್ದೆಗಳ ಪರೀಕ್ಷೆಗಳನ್ನು ನಡೆಸುವಂತೆ ಸುಳ್ಳು ಹೇಳಿ, ಪುಸಲಾಯಿಸಿ ಪ್ರೀತಮ್ ತಂದೆ ಪ್ರಫುಲ್ ಮೆಹತಾ ಅವರಿಗೆ ಸುಮಾರು 8,82,856ರೂ.ಗಳನ್ನು ವಂಚಿಸಿದ ಘಟನೆ ನಗರದಲ್ಲಿ ವರದಿಯಾಗಿದೆ. ಈ ಕುರಿತು ನೊಂದ ವ್ಯಕ್ತಿ ಪ್ರೀತಮ್ ಮೇಹತಾ ಅವರು ಸಿಇಎನ್ ಪೋಲಿಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ. ಮೋಸ, ವಂಚನೆ ಮಾಡುವ ಉದ್ದೇಶದಿಂದ ಕುಮಾರ್ ವಿಷ್ಣು ಮೊಬೈಲ್ ನಂಬರ್ 8420133026, 9038984056, 9038984037 ಮತ್ತು ಇತರರು ಕೂಡಿಕೊಂಡು ನನಗೆ ಮೊಬೈಲ್ ಕರೆ ಮಾಡಿ ಹೆಚ್‌ಸಿಎಲ್ ಟೆಕ್ನಾಲಾಜಿಸ್ ಲಿಮಿಟೆಡ್ ಕಂಪನಿಗೆ ಸರ್ಕಾರಿ ಹುದ್ದೆಗಳ ಪರೀಕ್ಷೆಗಳನ್ನು ನಡೆಸಲು ಪರೀಕ್ಷಾ ಕೇಂದ್ರ ಅನುಮೋದನೆ, ಅನುಮತಿ ಪಡೆದುಕೊಂಡಿದ್ದು. ಸರ್ಕಾರಿ ಹುದ್ದೆಗಳ ಪರೀಕ್ಷೆಗಳನ್ನು ನಡೆಸುವಂತೆ ಸುಳ್ಳು ಹೇಳಿ, ಪುಸಲಾಯಿಸಿ, ನಂಬಿಕೆ ಬರುವ ರೀತಿಯಲ್ಲಿ ವಿವಿಧ ಈ–ಮೇಲ್ ಐಡಿಗಳ ಮೂಲಕ ಬಿಜಿನೆಸ್ ಡೆವಲಪ್‌ಮೆಂಟ್ ರೀಪೋರ್ಟ್‌ಗಳನ್ನು ಕಳುಹಿಸಿ ನಂಬಿಸಿದರು ಎಂದು ಅವರು ದೂರಿದ್ದಾರೆ. ರಿಜಿಸ್ಟ್ರೇಶನ್ ಮಾಡಿಸಲು ಮತ್ತು ಯುಪಿಎಸ್, ಬ್ಯಾಟರಿ ಖರೀದಿಸಲು ಹಾಗೂ ಎಲ್ಲ ಸಲಕರಣೆಗಳನ್ನು ಸಾಗಣಿಕೆ ಮಾಡುವುದಕ್ಕಾಗಿ, ಹಣ ವರ್ಗಾವಣೆ ಮಾಡುವಂತೆ ಹೇಳಿದ್ದರಿಂದ ಆರೋಪಿತರು ನೀಡಿರುವ ವಿವಿಧ ಬ್ಯಾಂಕ್ ಖಾತೆಗೆಳಿಗೆ, ಎಕ್ಸಿಸ್ ಬ್ಯಾಂಕ್ ಖಾತೆ ಸಂಖ್ಯೆ: 924020050697697ನೇದ್ದ–ರಿಂದ ಹಂತ ಹಂತವಾಗಿ 2024ರ ನವೆಂಬರ್ 7ರಿಂದ 2024ರ ಡಿಸೆಂಬರ್ 21ರ ಮಧ್ಯವದಿಯಲ್ಲಿ ಒಟ್ಟು 882856 ರೂ.ಗಳ ಹಣವನ್ನು ವರ್ಗಾವಣೆ ಮಾಡಿಸಿಕೊಂಡು ಅಪ್ರಮಾಣಿಕತೆಯಿಂದ, ಮೋಸ, ವಂಚನೆ ಮಾಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ನೀಡಿದ ದೂರಿನ ಹಿನ್ನೆಲೆಯಲ್ಲಿ ಸಿಇಎನ್ ಠಾಣೆ ಅಪರಾಧ ಸಂಖ್ಯೆ: 56/2025 ಕಲಂ: 66(ಸಿ), 66(ಡಿ) ಐ.ಟಿ ಕಾಯ್ದೆ ಮತ್ತು 318(2), 318(4), 319(4) ಬಿ.ಎನ್.ಎಸ್ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

# ಪಿ.ಐ.ಓ ಗಳೊಂದಿಗೆ ಮುಖ್ಯ ಮಾಹಿತಿ ಆಯುಕ್ತರ ಸಂವಾದ:

## ಕಾಲಮಿತಿಯಲ್ಲಿ ಅರ್ಜಿ ವಿಲೇವಾರಿ ಮಾಡಲು ಸೂಚನೆ

ಕಲಬುರಗಿ,ಮೇ.17:ಕರ್ನಾಟಕ ಮಹಾತಿ ಆಯೋಗದ ಮುಖ್ಯ ಆಯುಕ್ತ ಎ.ಎಂ. ಪ್ರಸಾದ್ ಅವರು ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಪ್ರಥಮ ಮೇಲ್ಮನವಿ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದರು. ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಸುವ ವಿಧಾನ, ಸಕಾಲದಲ್ಲಿ ವಿಲೇವಾರಿ, ವರ್ಗಾವಣೆ, ಶುಲ್ಕ, ಪ್ರಥಮ ಮೇಲ್ಮನವಿ ವಿಚಾರಣೆ, ಆಯೋಗದಲ್ಲಿ ನಡೆಯುವ ವಿಚಾರಣ ಕುರಿತು ಕೂಲಂಕುಷವಾಗಿ ಅಧಿಕಾರಿಗಳಿಗೆ ಅರಿವು ಮೂಡಿಸಿದ ಆಯುಕ್ತರು,



ತಮ್ಮ ಹಂತದಲ್ಲಿ ಯಾವುದೇ ಅರ್ಜಿ ಬಾಕಿ ಇಟ್ಟುಕೊಳ್ಳದೆ ಸಕಾಲದಲ್ಲಿ ಅರ್ಜಿ ವಿಲೇವಾರಿ ಮಾಡಬೇಕು. ಕಡ್ಡಾಯವಾಗಿ ಸೆಕ್ಷನ್ 4(1)ಎ ರಂತೆ ಅಗತ್ಯ ಮಾಹಿತಿ ಇಲಾಖೆಯ ಅಂತರ್ಜಾಲದಲ್ಲಿ ಸಾರ್ವಜನಿಕವಾಗಿ ಪ್ರಚೂರಪಡಿಸಬೇಕು ಎಂದು ಸೂಚನೆ ನೀಡಿದರು.

ಕಂದಾಯ, ನಗರ ಸ್ಥಳೀಯ ಸಂಸ್ಥೆ, ಪೋಲಿಸ್, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್, ಶಾಲಾ ಶಿಕ್ಷಣ ಹಾಗೂ ಸಾಕ್ಷರತೆ, ಲೋಕೋಪಯೋಗಿ ಇಲಾಖೆ, ಜಲ ಸಂಪನ್ಮೂಲ ಸೇರಿದಂತೆ ಅನೇಕ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಪ್ರಥಮ ಮೇಲ್ಮನವಿ ಅಧಿಕಾರಿಗಳು ಭಾಗವಹಿಸಿದ್ದರು. ಡಿ.ಸಿ.ಪಿ ಕನಿಕಾ ಸಿಕ್ರಿವಾಲ್, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್ ಸೇರಿದಂತೆ ಇತರೆ ಅಧಿಕಾರಿಗಳಿದ್ದರು.

ಪ್ರಕರಣ ಇತ್ಯರ್ಥ: ಇನ್ನು ಕಲಬುರಗಿ ಪೀಠಕ್ಕೆ ಸಂಬಂಧಿಸಿದಂತೆ ಆಯೋಗದ ಕಲಬುರಗಿ ಕಚೇರಿಯಲ್ಲಿ ವಿಚಾರಣೆ ನಡೆಸಿದ ಮುಖ್ಯ ಆಯುಕ್ತ ಎ.ಎಂ.ಪ್ರಸಾದ್ ಅವರು, ವಾದ ವಿವಾದ ಆಲಿಸಿ ಸುಮಾರು ನೂರಾರು ಪ್ರಕರಣಗಳನ್ನು ಇತ್ಯರ್ಥಪಡಿಸಿದರು. ಇನ್ನು ಗುರುವಾರ ಕಲಬುರಗಿಯ ಸಿದ್ದಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮುಖ್ಯ ಮಾಹಿತಿ ಆಯುಕ್ತರು ಕಾನೂನು ವಿದ್ಯಾರ್ಥಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಸಾಮಾನ್ಯ ಮಾಹಿತಿ ನೀಡಿದರು. ಕಾಲೇಜಿನ ಪ್ರಾಂಶುಪಾಲ ಡಾ.ಎಸ್. ಚಂದ್ರಶೇಖರ್ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಕಾನೂನು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಶಿಕ್ಷಣದಿಂದ ಸರ್ವಾಂಗೀಣ ಪ್ರಗತಿ ಸಾಧ್ಯ

ಕಲಬುರಗಿ:ಮೇ.17:ಮನುಷ್ಯರನ್ನು ಮನುಷ್ಯರಂತೆ ಕಾಣದ ಭಾರತದಲ್ಲಿ ಬದುಕಿನ ಕಷ್ಟ, ನಷ್ಟಗಳನ್ನು ಎದುರಿಸಿದ ಡಾ. ಬಿ.ಆರ್. ಅಂಬೇಡ್ಕರ್ ಅವರು, ಸಮಾನತೆ, ಸ್ವಾತಂತ್ರ್ಯಕ್ಕಾಗಿ ಬಡಿದಾಡಿದ ಮಹಾನ್ ವ್ಯಕ್ತಿ ಎಂದು ಶಾಸಕ ಅಲ್ಲಮಪ್ರಭು ಪಾಟೀಲ ನೆಲೋಗಿ ಅಭಿಪ್ರಾಯಪಟ್ಟರು.



ನಗರದ ಸರ್ಕಾರಿ ಮಹಾವಿದ್ಯಾಲಯ (ಸ್ವಾಯತ್ತ) ದಲ್ಲಿ ಶನಿವಾರ ಆಯೋಜಿಸಿದ್ದ 2024–25ನೇ ಶೈಕ್ಷಣಿಕ ಸಾಲಿನ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಸ್ಮರಣಾರ್ಥ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳು, ಎನ್.ಎಸ್.ಎಸ್, ಎನ್.ಸಿ.ಸಿ, ರೇಂಜರ್ಸ್, ರೋವರ್ಸ್, ರೆಡ್ ಕ್ರಾಸ್, ರೆಡ್ ರಿಬ್ಬನ್ ಘಟಕಗಳು ಹಾಗೂ ವಿವಿಧ ಚಟುವಟಿಕೆಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ವಿದ್ಯೆಯ ಜೊತೆಗೆ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಹೆಚ್ಚಿನ ಒತ್ತು ನೀಡಿ ಸರ್ವಾಂಗೀಣ ಅಭಿವೃದ್ಧಿ ಹೊಂದಬೇಕು ಎಂದು ಕರೆ ನೀಡಿದರು.

ಸಾನ್ನಿಧ್ಯ ವಹಿಸಿದ್ದ ಚಿಗರಳ್ಳಿ ಮರುಳಶಂಕರ ದೇವರ ಮಠದ ಸಿದ್ಧಬಸವ ಕಬೀರ ಸ್ವಾಮೀಜಿ ಮಾತನಾಡಿ, ಶಿಕ್ಷಣದಿಂದ ಮಕ್ಕಳ ಭವಿಷ್ಯ ನಿರ್ಮಾಣವಾಗುತ್ತದೆ. ವಿದ್ಯಾರ್ಥಿಗಳ ಆಯ್ಕೆ ಕ್ರಮಬದ್ಧವಾಗಿದ್ದು, ಆತ್ಮವಿಶ್ವಾಸ ಮತ್ತು ಸತತ ಪ್ರಯತ್ನದ ಮೂಲಕ ಏನನ್ನಾದರೂ ಸಾಧಿಸಬಹುದು ಎಂದು ನುಡಿದರು.

ಜಾತಿ, ಮತ, ಪಂಥಕ್ಕಿಂತ ದೇಶ ಮುಖ್ಯ. ಕಷ್ಟದಲ್ಲಿ ಇರುವವರಿಗೆ ಕಣ್ಣೀರು ಒರೆಸುವುದೇ ನಿಜವಾದ ಧರ್ಮ. ಬುದ್ಧ, ಬಸವ, ಅಂಬೇಡ್ಕರ್ ತತ್ವಗಳು ಪರಿವರ್ತನೆ ಹಾಗೂ ಅಭಿವೃದ್ಧಿಗೆ ದಾರಿಯಾಗಿವೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿದ್ದ ಲೇಖಕ ಡಾ. ಶಿವರಂಜನ ಸತ್ಯಂಪೇಟೆ, ಬೌದ್ಧ ಚಿಂತಕ ಅನಾಗರಿಕ ಮಿಲಿಂದ ಗುರೂಜಿ ಮಾತನಾಡಿ, ದೇಶದ ಪ್ರಗತಿಗೆ ಶಿಕ್ಷಣ ಮುಖ್ಯ. ಶಿಕ್ಷಣ ಬಾಹ್ಯವಾಗಿ ಮಾತ್ರವಲ್ಲದೆ ಆಂತರಿಕವಾಗಿ ಆತ್ಮವಿಶ್ವಾಸ ಹೆಚ್ಚಿಸಿ ಆತ್ಮಜ್ಞಾನಕ್ಕೆ ದಾರಿ ಮಾಡಿಕೊಡಬೇಕು. ಶಿಕ್ಷಣದಿಂದ ಸರ್ವಾಂಗೀಣ ಪ್ರಗತಿ ಸಾಧ್ಯ ಎಂದು ಹೇಳಿದರು.

ಪ್ರಾಚಾರ್ಯೆ ಡಾ. ಸವಿತಾ ತಿವಾರಿ ಅಧ್ಯಕ್ಷತೆ ವಹಿಸಿದ್ದರು. ಡಾ.ಟಿ.ವಿ. ಅಡಿವೇಶ, ಡಾ.ಮಲ್ಲೇಶಪ್ಪ ಎಸ್.ಕುಂಬಾರ, ಡಾ.ವಿಜಯಕುಮಾರ ಸಾಲಿಮನಿ, ಡಾ.ರಾಜಕುಮಾರ ಸಲಗರ, ಡಾ. ದವಲಪ್ಪ ಎಚ್, ಡಾ. ಅರುಣಕುಮಾರ ಸಲಗರ, ಡಾ.ರಾಜಶೇಖರ ಮಡಿವಾಳ, ಅಜಯಸಿಂಗ್ ತಿವಾರಿ, ವಿಜಯಲಕ್ಷ್ಮೀ, ಶಿವಾನಂದ ಸ್ವಾಮಿ, ಡಾ. ನಾಗಪ್ಪ ಗೋಗಿ ವೇದಿಕೆಯಲ್ಲಿದ್ದರು.

ಇದೇ ವೇಳೆಯಲ್ಲಿ ಕ್ರೀಡಾ–ಕೂಟ, ಸಾಹಿತ್ಯ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ಬಹುಮಾನ ಹಾಗೂ ಪ್ರಶಸ್ತಿ ಪಡೆದ ವಿದ್ಯಾರ್ಥಿ ಹಾಗೂ ಪ್ರಾಧ್ಯಾಪಕರನ್ನು ಸನ್ಮಾನಿಸಲಾಯಿತು.

ಡಾ. ಬಲಭೀಮ ಸಾಂಗ್ಲಿ ನಿರೂಪಿಸಿದರು. ಡಾ.ರಾಜಕುಮಾರ ಸಲಗರ ಸ್ವಾಗತಿಸಿದರು. ಡಾ. ಶ್ರೀಮಂತ ಹೋಳಕರ ಪ್ರಾಸ್ತಾವಿಕ ಮಾತನಾಡಿದರು. ಸಿದ್ಧಾರ್ಥ ಚಿಮ್ಮಾ ಇದಲಾಯಿ ಪ್ರಾರ್ಥನೆಗೀತೆ ಹಾಡಿದರು. ಡಾ. ವಿಶ್ವನಾಥ ಬೆಣ್ಣೂರ, ಡಾ. ಸುರೇಶ ಎಸ್. ಮಾಳೆಗಾಂವ, ಡಾ. ನಾಗಜ್ಯೋತಿ, ಡಾ. ಶ್ಯಾಮಲಾ ಸ್ವಾಮಿ, ಡಾ. ನಿವೇದಿತಾ ಸ್ವಾಮಿ, ಈರಮ್ಮ ಪಾಟೀಲ, ಡಾ. ರಮೇಶ ಪೋತೆ, ಡಾ. ಸುರೇಂದ್ರ ಕೆರಮಗಿ, ಡಾ.ಶಿವಲಿಂಗಪ್ಪ ಪಾಟೀಲ, ಡಾ.ಬಸಂತ ಸಾಗರ, ಡಾ.ರವಿ ಬೌದ್ದೆ, ಡಾ.ವಿಜಯಕುಮಾರ ಗೋಪಾಳೆ, ಡಾ.ಮೀನಾಕ್ಷಿ ಕೆ.ಸಿ, ಡಾ.ಗೌಶಿಯಾ ಬೇಗಂ, ಡಾ.ರಬಿಯಾ ಇಫತ್, ಡಾ.ಭಾಗ್ಯಲಕ್ಷ್ಮೀ, ಡಾ.ಸುಜಾತಾ ದೊಡ್ಡಮನಿ, ಪ್ರೊ.ರಹಮಾನ ಸಾಬ, ಪ್ರೊ.ದಿನೇಶ ಮೇತ್ರೆ, ಡಾ.ನಶೀಮ ಫಾತಿಮಾ ಡಾ.ವಿಜಯನಂದ ವಿಠಲರಾವ ಸೇರಿದಂತೆ ಎಲ್ಲಾ ಪ್ರಾಧ್ಯಾಪಕರು, ಸಿಬ್ಬಂದಿವರ್ಗದವರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಗ್ಯಾರಂಟಿ ಸರ್ಕಾರಕ್ಕೆ ಎರಡು ವರ್ಷದ ಸಂಭ್ರಮ:

## ಜಿಲ್ಲೆಯ 20.77 ಲಕ್ಷ ಜನರಿಗೆ ಅನ್ನ ಭಾಗ್ಯ ಪ್ರಯೋಜನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:"ಅನ್ನದೇವರಗಿಂತ ಇನ್ನು ದೇವರು ಇಲ್ಲ" ಎನ್ನುವ ಸರ್ವಜ್ಞರ ಕವಿವಾಣಿಯಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಜನತೆ ಹಸಿವಿನಿಂದ ಬಳಲಬಾರದು, ಅನ್ನಕ್ಕೆ ಕೊರತೆ ಇರಬಾರದೆಂದು ಪ್ರತಿ ಸದಸ್ಯನಿಗೆ ತಲಾ 10 ಕೆ.ಜಿ. ಉಚಿತ ಅಕ್ಕಿ ನೀಡುವ "ಅನ್ನ ಭಾಗ್ಯ" ಯೋಜನೆ ಜಾರಿಗೊಳಿಸಿದ್ದು, ಕಲಬುರಗಿ ಜಿಲ್ಲೆಯಲ್ಲಿ ಸುಮಾರು 5.80 ಲಕ್ಷ ಪಡಿತರ ಚೀಟಿಯ 20.77 ಲಕ್ಷ ಜನ ಇದರ ಪ್ರಯೋಜನ ಪಡೆಯುತ್ತಿದ್ದಾರೆ.




ಹಸಿವು ಮುಕ್ತ ಕರ್ನಾಟಕ ಗುರಿ ಇಟ್ಟುಕೊಂಡು ಪ್ರತಿ ಸದಸ್ಯನಿಗೆ ಆಹಾರ ಭದ್ರತೆ ಒದಗಿಸುವ ಬಡವರ ತುತ್ತಿನ ಚೀಲ ತುಂಬಿಸುವ ಯೋಜನೆ ಇದಾಗಿದ್ದು, ಯೋಜನೆ ಜಾರಿಯಿಂದ ಬಡ, ಹಿಂದುಳಿದ, ಪರಿಶಿಷ್ಟ ಜಾತಿ, ಕೂಲಿ ಕಾರ್ಮಿಕರು, ಅಲೆಮಾರಿ ಜನಾಂಗ ಹೀಗೆ ತಳ ಸಮುದಾಯದವರು ಹೊಟ್ಟೆ ತುಂಬ ಊಟ ಮಾಡಲು ಕಾರಣವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2013ರಲ್ಲಿ ಪ್ರಥಮ ಬಾರಿಗೆ ಮುಖ್ಯಮಂತ್ರಿಯ ಚುಕ್ಕಾಣಿ ಹಿಡಿದಾಗ ದೇಶಕ್ಕೆ ಮಾದರಿಯಾಗಿ "ಅನ್ನಭಾಗ್ಯ" ಯೋಜನೆ ಜಾರಿಗೊಳಿಸಿದ ಶ್ರೇಯಸ್ಸು ಅವರದ್ದಾಗಿದೆ. 2023ರಲ್ಲಿ ಸಾರ್ವತ್ರಿಕ ವಿಧಾನಸಭೆ ಚುನಾವಣೆಯಲ್ಲಿ ಅಭೂತಪೂರ್ವ ಜನಾದೇಶದೊಂದಿಗೆ ಮರಳಿ ಅಧಿಕಾರ ಬಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಚುನಾವಣಾ ಪೂರ್ವ ನೀಡಿದ ಭರವಸೆಯಂತೆ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಯ. ಪ್ರತಿ ಸದಸ್ಯನಿಗೆ ತಲಾ 10 ಕೆ.ಜಿ. ಅಕ್ಕಿ ಉಚಿತ ನೀಡುವ ದಿಟ್ಟ ನಿರ್ಧಾರ ಕೈಗೊಂಡರು.

ಆರಂಭಿಕವಾಗಿ ಅಕ್ಕಿ ಅಲಭ್ಯತೆ ಕಾರಣ ಪ್ರತಿ ಸದಸ್ಯನಿಗೆ 5 ಕೆ.ಜಿ. ಉಚಿತ ಅಕ್ಕಿ ಜೊತೆ–ಗೆ ಉಳಿದ 5 ಕೆ.ಜಿ. ಅಕ್ಕಿ ಬದಲಾಗಿ ಪ್ರತಿ ಸದಸ್ಯನಿಗೆ 170 ರೂ. ಗಳಂತೆ ಹಣ ಪಡಿತರ ಚೀಟಿಯ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ. ಕಲಬುರಗಿ ಜಿಲ್ಲೆಯನ್ನು ನೋಡುವುದಾರೆ 2023ರ ಜುಲೈ ಮಾಹೆಯಿಂದ ಡಿಸೆಂಬರ್–2024 ಮಾಹೆ ವರೆಗೆ ಒಟ್ಟಾರೆ 508.72 ಕೋಟಿ ರೂ. ಹಣ ಪಡಿತರ ಚೀಟಿಯ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗಿದೆ. ಇನು ರಾಜ್ಯದಾದ್ಯಂತ ಈ ಯೋಜನೆಗೆ ಇದೂವರೆಗೆ 14,023 ಕೋಟಿ ರೂ. ರಾಜ್ಯ ಸರ್ಕಾರ ಖರ್ಚು ಮಾಡಲಾಗಿದ್ದು, ಒಟ್ಟಾರೆ 7 ಕೋಟಿ ಜನರಿಗೆ ಯೋಜನೆ ನೆರವಾಗಿದೆ.

ಹೊಟ್ಟೆ ತುಂಬ ಊಟ: "ಅನ್ನಭಾಗ್ಯ" ಯೋಜನೆ ಪರಿಣಾಮ ಗ್ರಾಮೀಣ ಪ್ರದೇಶದಲ್ಲಿ ಕೂಲಿ–ನಾಲಿ ಮಾಡಿ ಬದುಕುವ ಬಡ ಜನರಿಗೆ, ವಿಶೇಷಚೇತನರು, ವಯೋವೃದ್ಧರಿಗೆ ತುಂಬಾ ಅನುಕೂಲವಾಗಿದೆ. ಮಾಸಿಕ ಪಡಿತರ ಖಾತ್ರಿ ಕಾರಣ ಇವರೆಲ್ಲ ಹೊಟ್ಟೆ ತುಂಬ ಊಟ ಮಾಡುವಂತಾಗಿದೆ. ಅನ್ನ ಕಾಣದವರು ಅನ್ನ ಕಾಣುವಂತಾಗಿದೆ. ಇನ್ನು ಅನ್ನಕ್ಕೆ ಯಾರ ಕಡೆ ಕೈಚಾಚುವ ಪ್ರಮೇಯ ಇಲ್ಲದಂತಾಗಿದೆ. ಒಟ್ಟಿನಲ್ಲಿ "ಅನ್ನಭಾಗ್ಯ" ಬಡವರಿಗೆ ಅನ್ನಪೂರ್ಣೇಶ್ವರಿಯಾಗಿ ಅನ್ನದಾಹ ನೀಗಿಸುವ ಮಹತ್ವದ ಯೋಜನೆಯಾಗಿ ಪರಿಣಮಿಸಿದೆ.

**ಫಲಾನುಭವಿಗಳು ಏನಂತಾರೆ?:**

ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರ "ಅನ್ನಭಾಗ್ಯ" ಯೋಜನೆ ಜಾರಿಗೆ ತರುವ ಮೂಲಕ ನಮ್ಮಂತಹ ಬಡ ಕೂಲಿ ಕೆಲಸ ಮಾಡಿ ಬದುಕುವ ಜನರಿಗೆ ಹೊಟ್ಟೆ ತುಂಬ ಊಟ ಮಾಡಲು ಸಹಾಯವಾಗಿದೆ. ಇಂತಹ ಯೋಜನೆ ಜಾರಿಗೆ ತಂದ ಮುಖ್ಯಮಂತ್ರಿ ಮತ್ತು ಅವರ ಮಂತ್ರಿಮಂಡಲಕ್ಕೆ ಧನ್ಯವಾದಗಳು

–ಶ್ರೀಮತಿ ಭಾಗ್ಯಜ್ಯೋತಿ

ಆಶ್ರಯ ಕಾಲೋನಿ, ಚಿತ್ತಾಪುರ

ಪತಿಯು ಬಾಡಿಗೆ ಆಟೋ ಚಲಾಯಿಸುತ್ತಿದ್ದು, ದಿನಕ್ಕೆ ರೂ. 300–400 ಗಳಿಕೆ ಅವರದ್ದಾಗಿದೆ. ದುಬಾರಿ ದಿನಗಳಾದ ಇಂದಿನ ದಿನಮಾನದಲ್ಲಿ ಮನೆ ನಿರ್ವಹಣೆ ಮತ್ತು ದಿನಸಿ ಪದಾರ್ಥಗಳ ಖರೀದಿ, ಹೊಟ್ಟೆ ತುಂಬ ಊಟ ತುಂಬಾ ಕಷ್ಟವಾಗಿದೆ. ಅನ್ನಭಾಗ್ಯ ಯೋಜನೆಯಿಂದ ನಮಗೆ ಹೊಟ್ಟೆ ತುಂಬ ಊಟ ಸಿಗುತ್ತಿದೆ. ಹಿಂದೆ ಪ್ರತಿಯೊಬ್ಬರಿಗೆ 5 ಕೆ.ಜಿ. ಅಕ್ಕಿ ಮತ್ತು ಉಳಿದ ಅಕ್ಕಿ ಬದಲಾಗಿ ಹಣ ಕೊಡುತ್ತಿದ್ದರು. ಇದೀಗ 10 ಕೆ.ಜಿ. ನೀಡುತ್ತಿರುವುದನ್ನು ನಾನು ಸ್ವಾಗತಿಸುತ್ತೇನೆ.

**–ಶ್ರೀಮತಿ ಜಾಗೃತಿ ಪ್ರಭು ಖಡಕೆ**

**ವಿ.ಕೆ. ಸಲಗರ್ ಗ್ರಾಮ, ಕಮಲಾಪೂರ**

**ವರದಿ–ರವಿ ಮಿರಸ್ಕರ್**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಲಬುರಗಿ**



ಬಸವಕಲ್ಯಾಣ :– ತಾಲೂಕಿನ ಭೋಸಗಾ ಗ್ರಾಮದಲ್ಲಿ ಗುರುವಾರ ಸಾಯಂಕಾಲ ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ತಮ್ಮ ಅಮೃತ ಹಸ್ತದಿಂದ ಶ್ರೀ ಮಹಾಋಷಿ ವಾಲ್ಮೀಕಿ ದೇವಸ್ಥಾನದ ಅಡಿಗಲ್ಲು ನೆರವೇರಿಸಿದರು. ಶ್ರೀ ಸಂದೀಪ ಮಹಾರಾಜರು. ಅಪ್ಪಣ್ಣ ಜನವಾಡ ಹಾಗೂ ಗ್ರಾಮದ ಪ್ರಮುಖರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ಅಕ್ರಮವಾಗಿ ಜಾನುವಾರು ತ್ಯಾಜ್ಯ ಸಾಗಿಸುತ್ತಿದ್ದ ವ್ಯಕ್ತಿ ಬಂಧನ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.17– ಪಿಕಪ್ ವಾಹನದಲ್ಲಿ ಅಕ್ರಮವಾಗಿ ಜಾನುವಾರು ತ್ಯಾಜ್ಯ (ಮೂಳೆ ಇತ್ಯಾದಿ) ಸಾಗಿಸಲಾಗುತ್ತಿದೆ ಎಂಬ ಮಾಹಿತಿ ಮೇಲೆ ವಿಶ್ವವಿದ್ಯಾಲಯ ಪೊಲೀಸ್ ಠಾಣೆ ಪಿಐ ಸುಶೀಲಕುಮಾರ, ಸಿಬ್ಬಂದಿಗಳಾದ ಈರಣ್ಣ, ಜೈಭೀಮ ಅವರು ದಾಳಿ ನಡೆಸಿ ವ್ಯಕ್ತಿಯೊಬ್ಬನನ್ನು ಬಂಧಿಸಿ ಪಿಕಪ್ ವಾಹನದಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 2 ರಿಂದ 3 ಟನ್ ಜಾನುವಾರು ತ್ಯಾಜ್ಯ ಜಪ್ತಿ ಮಾಡಿದ್ದಾರೆ.

ಗರಿಬ್ ನವಾಜ್ ಕಾಲೋನಿಯ ತೌಫಿಕ್ ತಂದೆ ಯುಸೂಫ್ ಅಲಿ (31) ಎಂಬಾತನನ್ನು ಬಂಧಿಸಿ ಆತನ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಈತ ನೂರಾನಿ ಮಹೋಲ್ಲಾದಲ್ಲಿರುವ ಜಬ್ಬಾರ್ ಖುರೇಶಿ ಅವರ ಖುಲ್ಲಾ ಪ್ಲಾಟ್‌ನಲ್ಲಿರುವ ಜಾನುವಾರುಗಳ ತ್ಯಾಜ್ಯವನ್ನು ತುಂಬಿಕೊಂಡು ಯಾದಗಿರಿ ಜಿಲ್ಲೆಯ ಕಂಪನಿಗೆ ಸಾಗಾಣಿಕೆ ಮಾಡುತ್ತಿದ್ದ ಎಂದು ತಿಳಿದುಬಂದಿದೆ.



ಹುಮನಾಬಾದ:ಪಟ್ಟಣದ ಪಂಚಾಯತ್ ರಾಜ್ ಇಂಜಿನಿಯರ್ ಉಪವಿಭಾಗ ಹಾಗೂ ಗ್ರಾಮೀಣ ಕುಡಿಯುವ ನೀರು ಉಪವಿಭಾಗ ಆವರಣದಲ್ಲಿ ಪತ್ರಕರ್ತ ಶಿವಶರಣ ಚಾಂಗಲೇರಿರವರ ಹುಟ್ಟು ಹಬ್ಬದ ನಿಮಿತ್ತ ದೀಪಕ್ ಜಮಾದಾರ್ ರವರು ಶಾಲು ಹೊದಿಸಿ ಸನ್ಮಾನಿಸಿ ಹುಟ್ಟುಹಬ್ಬದ ಶುಭಾಶಗಳು ಕೋರಿದರು. ಈ ಸಂದರ್ಭದಲ್ಲಿ ಖಂಡಪ್ಪಾ ಸದಲ್ಲಾಪೂರ, ಪಂಡಿತ ಮುದ್ದಗೊಂಡ, ಭೀಮಶಾ ಹೆಗಡೆ, ಮಿಥುನ್ ಹುಣಸ್ನಾಳ, ಶಿವಕುಮಾರ ಧುಮ್ಮನಸೂರ, ಇತರರು ಇದ್ದರು. (ಮಲ್ಲಮ್ಮ ನುಡಿ ಚಿತ್ರ).

## ಪಿ.ಐ.ಓ ಗಳೊಂದಿಗೆ ಮುಖ್ಯ ಮಾಹಿತಿ ಆಯುಕ್ತರ ಸಂವಾದ: ಕಾಲಮಿತಿಯಲ್ಲಿ ಅರ್ಜಿ ವಿಲೇವಾರಿ ಮಾಡಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.17ಕರ್ನಾಟಕ ಮಹಾತಿ ಆಯೋಗದ ಮುಖ್ಯ ಆಯುಕ್ತ ಎ.ಎಂ. ಪ್ರಸಾದ್ ಅವರು ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಪ್ರಥಮ ಮೇಲ್ಮನವಿ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದರು.

ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಸುವ ವಿಧಾನ, ಸಕಾಲದಲ್ಲಿ ವಿಲೇವಾರಿ, ವರ್ಗಾವಣೆ, ಶುಲ್ಕ, ಪ್ರಥಮ ಮೇಲ್ಮನವಿ ವಿಚಾರಣೆ, ಆಯೋಗದಲ್ಲಿ ನಡೆಯುವ ವಿಚಾರಣ ಕುರಿತು ಕೂಲಂಕುಷವಾಗಿ ಅಧಿಕಾರಿಗಳಿಗೆ ಅರಿವು ಮೂಡಿಸಿದ ಆಯುಕ್ತರು, ತಮ್ಮ ಹಂತದಲ್ಲಿ ಯಾವುದೇ ಅರ್ಜಿ ಬಾಕಿ ಇಟ್ಟುಕೊಳ್ಳದೆ ಸಕಾಲದಲ್ಲಿ ಅರ್ಜಿ ವಿಲೇವಾರಿ ಮಾಡಬೇಕು. ಕಡ್ಡಾಯವಾಗಿ ಸೆಕ್ಷನ್ 4(1)ಎ ರಂತೆ ಅಗತ್ಯ ಮಾಹಿತಿ ಇಲಾಖೆಯ ಅಂತರ್ಜಾಲದಲ್ಲಿ ಸಾರ್ವಜನಿಕವಾಗಿ ಪ್ರಚೂರಪಡಿಸಬೇಕು ಎಂದು ಸೂಚನೆ ನೀಡಿದರು.

ಕಂದಾಯ, ನಗರ ಸ್ಥಳೀಯ ಸಂಸ್ಥೆ, ಪೋಲಿಸ್, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್, ಶಾಲಾ ಶಿಕ್ಷಣ ಹಾಗೂ ಸಾಕ್ಷರತೆ, ಲೋಕೋಪಯೋಗಿ ಇಲಾಖೆ, ಜಲ ಸಂಪನ್ಮೂಲ ಸೇರಿದಂತೆ ಅನೇಕ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಪ್ರಥಮ ಮೇಲ್ಮನವಿ ಅಧಿಕಾರಿಗಳು ಭಾಗವಹಿಸಿದ್ದರು.

ಡಿ.ಸಿ.ಪಿ ಕನಿಕಾ ಸಿಕ್ರಿವಾಲ್, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್ ಸೇರಿದಂತೆ ಇತರೆ ಅಧಿಕಾರಿಗಳಿದ್ದರು.

ಪ್ರಕರಣ ಇತ್ಯರ್ಥ: ಇನ್ನು ಕಲಬುರಗಿ ಪೀಠಕ್ಕೆ ಸಂಬಂಧಿಸಿದಂತೆ ಆಯೋಗದ ಕಲಬುರಗಿ ಕಚೇರಿಯಲ್ಲಿ ವಿಚಾರಣೆ ನಡೆಸಿದ ಮುಖ್ಯ ಆಯುಕ್ತ ಎ.ಎಂ. ಪ್ರಸಾದ್ ಅವರು, ವಾದ ವಿವಾದ ಆಲಿಸಿ ಸುಮಾರು ನೂರಾರು ಪ್ರಕರಣಗಳನ್ನು ಇತ್ಯರ್ಥಪಡಿಸಿದರು.

ಇನ್ನು ಗುರುವಾರ ಕಲಬುರಗಿಯ ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮುಖ್ಯ ಮಾಹಿತಿ ಆಯುಕ್ತರು ಕಾನೂನು ವಿದ್ಯಾರ್ಥಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಸಾಮಾನ್ಯ ಮಾಹಿತಿ ನೀಡಿದರು. ಕಾಲೇಜಿನ ಪ್ರಾಂಶುಪಾಲ ಡಾ.ಎಸ್. ಚಂದ್ರಶೇಖರ್ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಕಾನೂನು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಹೊನ್ನಕಿರಣಗಿ ಗ್ರಾಮದ ಕೂಲಿ ಕಾರ್ಮಿಕರೊಂದಿಗೆ ಸಂವಾದ ನಡೆಸಿ ಸಮಸ್ಯೆ ಆಲಿಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.17–ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ಶನಿವಾರ ಕಲಬುರಗಿ ತಾಲೂಕಿನ ಹೊನ್ನಕಿರಣಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಹೊನ್ನಕಿರಣಗಿ ಗ್ರಾಮದ ಕೂಲಿ ಕಾರ್ಮಿಕರೊಂದಿಗೆ ಸಂವಾದ ನಡೆಸಿ ಸಮಸ್ಯೆಗಳನ್ನು ಆಲಿಸಿದರು.

ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧ್ಯಕ್ಷರು ರಾಜ್ಯದ 26 ಜಿಲ್ಲೆಗಳಲ್ಲಿ ಪ್ರವಾಸ ಮಾಡಿದ್ದು, ಆದರೆ ಕಲಬುರಗಿ ಜಿಲ್ಲೆಯ ಕಲಬುರಗಿ ತಾಲ್ಲೂಕಿನ ಹೊನ್ನಕಿರಣಗಿ ಗ್ರಾಮ ಪಂಚಾಯತಿಯ ನರೇಗಾ ಕೂಲಿ ಕಾರ್ಮಿಕರಲ್ಲಿ ವಿಶೇಷತೆಯನ್ನು ಕಂಡು ಬಂದಿದೆ ಎಂದು ತಿಳಿಸಿದರು. 47 ಕುಟುಂಬಗಳು 100 ಮಾನವ ದಿನಗಳು ಮುಕ್ತಾಯಗೊಂಡಿರುತ್ತದೆ. ಕೂಲಿ ಕಾರ್ಮಿಕರಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸಿದರು. ಇಬ್ಬರು ಮಹಿಳಾ ಕೂಲಿ ಕಾರ್ಮಿಕರು ನರೇಗಾ ಯೋಜನೆಯಡಿ ಬಂದಂತಹ ಕೂಲಿ ಮೊತ್ತ 1 ರೂ. ಲಕ್ಷ ರೂ. ಗಳನ್ನು ಬ್ಯಾಂಕಿನಲ್ಲಿ ಠೇವಣಿ ಮಾಡಿರುತ್ತಾರೆ. ಇದರ ಜೊತೆ–ಗೆ ಎಲ್ಲಾ ಕೂಲಿ ಕಾರ್ಮಿರಿಗೆ ಮುಂದಿನ ದಿನಗಳಲ್ಲಿ ಇದೇ ರೀತಿ ನರೇಗಾ ಯೋಜನೆಯಡಿ ಕೂಲಿ ಕೆಲಸವನ್ನು ಮಾಡಲು ತಿಳಿಸಿದರು.

ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕಅಧಿಕಾರಿ ಭಂವರ ಸಿಂಗ್ ಮೀನಾ ಅವರು ಮಾತನಾಡಿ, ಹೊನ್ನಕಿರಣಗಿ ಗ್ರಾಮ ಪಂಚಾಯತಿಯು ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ನರೇಗಾ ಯೋಜನೆಯ ಸಾಧನೆ ಹಾಗೂ ಪರಿಣಾಮಕಾರಿ ಅನುಷ್ಠಾನ ಮಾಡುತ್ತಿದೆ. ಪ್ರತಿಯೊಬ್ಬ ಕೂಲಿ ಕಾರ್ಮಿಕರು ಪಿ.ಎಮ್. ಜೆ.ಜೆ.ವೈ. (ಕಒಎಎಜ) ಮತ್ತು ಪಿ.ಎಮ್.ಎಸ್.ಬಿ.ವೈ.(ಕಒಖಃಙ) ಯೋಜನೆಗಳಡಿ ಇನ್ಸುರೆನ್ಸ್ ಮಾಡಿಕೊಳ್ಳಬೇಕು. ಈಗಾಗಲೇ ದಿನಾಂಕ: 01–04–2025 ರಿಂದ ಕೂಲಿ ಮೊತ್ತವನ್ನು 370 ರೂ. ಗಳಿಗೆ ಹೆಚ್ಚಿಸಲಾಗಿದೆ. ಎಲ್ಲರೂ ನಿಗದಿಪಡಿಸಿದ ಅಳತೆಗನುಗುಣವಾಗಿ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು. ಈ ಸಂವಾದ ಕಾರ್ಯಕ್ರಮದಲ್ಲಿ 425 ಕೂಲಿ ಕಾರ್ಮಿಕರು ಭಾಗವಹಿಸಿದರು. ಈ ಸಂದರ್ಭದಲ್ಲಿ ಕೂಲಿ ಕಾರ್ಮಿಕರಿಗೆ ಉಚಿತ ಆರೋಗ್ಯ ಶಿಬಿರ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಕಲಬುರಗಿ ತಾಲೂಕು ಪಂಚಾಯತ ಕಾರ್ಯನಿರ್ವಾಹಕಅಧಿಕಾರಿ ಎಂ.ಡಿ ಸೈಯದ ಪಟೇಲ, ಕಲಬುರಗಿ ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕ ರೇವಣಸಿದ್ದಪ್ಪ ಗೌಡರ ಹಾಗೂ ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಉಪಸ್ಥಿತರಿದ್ದರು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕವಿತಾ ಕಾಗೆ, ಗ್ರಾಮ ಪಂಚಾಯತಿ ಅಧ್ಯಕ್ಷರು, ತಾಂತ್ರಿಕ ಸಂಯೋಜಕರಾದ ಸತೀಶ್, ತಾಂತ್ರಿಕ ಸಹಾಯಕರಾದ ಜಗದೀಶ್ ಮೇಗಪ್ಪಿ, ಐಈಸಿ ಸಂಯೋಜಕರಾದ ಮೋಸಿನ ಖಾನ್ ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಕ್ಷೇತ್ರ ಸಹಾಯಕರಾದ ಸದಾಶಿವ ಹೈದರಾ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಇಂದು ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ.17: ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಪತ್ರಕರ್ತರ ಮಕ್ಕಳ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಜಿಲ್ಲಾ ಪತ್ರಿಕಾ ಭವನದಲ್ಲಿ ಮೇ 18ರಂದು ನಡೆಯಲಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಸಂಕೀನ್ ಹೇಳಿದರು. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಅಂದು ಬೆಳಿಗ್ಗೆ 10ಕ್ಕೆ ನಡೆಯುವ ಕಾರ್ಯಕ್ರಮವನ್ನು ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಅವರು ಉದ್ಘಾಟಿಸಲಿದ್ದಾರೆ. ನಗರಸಭೆ ಅಧ್ಯಕ್ಷೆ ಲಲಿತಾ ಅನಪೂರ ಅವರು ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ವಿತರಣೆ ಮಾಡುವರು. ಮುಖ್ಯ ಅತಿಥಿಗಳಾಗಿ ನಗರಸಭೆ ಸದಸ್ಯ ಚನ್ನಕೇಶವಗೌಡ ಬಾಣತಿಹಾಳ ಮತ್ತು ಜೆಡಿಎಸ್ ನಗರ ಘಟಕ ಅಧ್ಯಕ್ಷ ಬಂದಪ್ಪ ಅರಳಿ, ಸಂಘದ ರಾಜ್ಯ ಉಪಾಧ್ಯಕ್ಷ ಮತ್ತು ಜಿಲ್ಲಾ ಉಸ್ತುವಾರಿ ಭವಾನಿಸಿಂಗ್ ಠಾಕೂರು, ಸಂಘದ ರಾಜ್ಯ ಪರಿಷತ್ತಿನ ಸದಸ್ಯ ರಾಘವೇಂದ್ರ ಕಾಮನಟಗಿ, ಪ್ರಧಾನ ಕಾರ್ಯದರ್ಶಿ ಮಹೇಶ್ ಕಲಾಲ್ ಅವರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

2024–25ನೇ ಸಾಲಿನಲ್ಲಿ ಎಸ್ ಎಸ್ ಎಲ್ ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಆದಿತ್ಯ ಧೀರೇಂದ್ರ ಕುಲಕರ್ಣಿ, ರಿಷಿಕಾ ಶ್ರೀಮಂತ ಚಲವಾದಿ, ಅರ್ಪಿತ್ ಪ್ರಶಾಂತ್ ರಾಠಿ, ಅನಘಾ ಪವನ ಕುಲಕರ್ಣಿ, ಸಮೃದ್ಧಿ ಸಿದ್ದಯ್ಯ ಪಾಟೀಲ್, ಸಿದ್ದಲಿಂಗೇಶ ಗವಿಸಿದ್ದೇಶ ಹೊಗರಿ, ಸುಮನ್ ಅಮರೇಶ್ ಹಿರೇಮಠ, ಸಂಜನಾ ಶಿವಣ್ಣ ಚಿನ್ನಾಕಾರ ಅವರಿಗೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ತಲಾ 5 ಸಾವಿರ ರೂಪಾಯಿ ನಗದು ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ಹೇಳಿದರು.



ಕಲಬುರಗಿ,:ನಗರದ ಕಲಾಮಂಡಳದಲ್ಲಿ ಕಲಬುರ್ಗಿ ಸಾಂಸ್ಕೃತಿಕ ಪ್ರತಿಷ್ಠಾದಿಂದ ಗುರುವಾರ ಆಯೋಜಿಸಿದ ನಿವೃತ್ತ ಕನ್ನಡ ಉಪನ್ಯಾಸಕ ರೇವಣಸಿದ್ದಪ್ಪ ದುಕಾನ ಅವರ ಹೂಗನಸು ಕವನ ಸಂಕಲನ ಬಿಡುಗಡೆಗೊಳಿಸಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಡಾ.ಸಿದ್ಧರಾಮ ಹೊನ್ಕಲ್ ಮಾತನಾಡಿದರು.

# ಅಕ್ರಮ ಮರಳುಗಾರಿಕೆ ಮುಚ್ಚಿ ಹಾಕಲು ವ್ಯವಸ್ಥಿತ ಸಂಚು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.17–ಇಡೀ ರಾಜ್ಯವನ್ನೇ ಬೆಚ್ಚು ಬೀಳಿಸಿದ ಜಿಲ್ಲೆಯ ಚಿತ್ತಾಪುರ–ಸೇಡಂ ಕ್ಷೇತ್ರದಲ್ಲಿನ ಕಾಗಿಣಾ ನದಿಯಲ್ಲಿನ ಅದರಲ್ಲೂ ಭಾಗೋಡಿ ಮತ್ತಿತರ ಪ್ರದೇಶದಲ್ಲಿನ ಅಕ್ರಮ ಮರಳುಗಾರಿಕೆ ತನಿಖೆಗೆ ಶುಕ್ರವಾರ ಆಗಮಿಸಿರುವ ಬಳ್ಳಾರಿಯ ಹಿರಿಯ ಭೂ ವಿಜ್ಞಾನಿಗಳ ತಂಡದ ತನಿಖೆಯ ಹಾದಿಯನ್ನು ತಪ್ಪಿಸಲು ವ್ಯವಸ್ಥಿತ ಸಂಚು ನಡೆದಿದೆ ಎಂದು ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೇಲ್ಕೂರ ಆರೋಪಿಸಿದ್ದಾರೆ.

ಕಳೆದ ನಾಲ್ಕು ವರ್ಷಗಳಿಂದ ಕಾಗಿಣಾ ನದಿಯಲ್ಲಿ ಕೇವಲ 40 ಎಕರೆ ಪ್ರದೇಶದಲ್ಲಿ ಕಾನೂನು ರೀತಿಯಲ್ಲಿ ಸಾರ್ವಜನಿಕರಿಗೆ ಮರಳು ಒದಗಿಸಬೇಕಾದ ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ (ಕೆಆರ್‌ಡಿಎಲ್–ಹಿಂದಿನ ಲ್ಯಾಂಡ್ ಆರ್ಮಿ) ಮರಳು ಪೂರೈಕೆಂಯು ಖಾಸಗಿ ಒಡೆತನ ವ್ಯಕ್ತಿಗಳಿಗೆ ಒಪ್ಪಿಸಿದ್ದರಿಂದ 40 ಎಕರೆ ಬದಲು 250–300 ಎಕರೆ ನದಿಯಲ್ಲಿ ಮರಳುಗಾರಿಕೆ ಮಾಡಿ ಕಳೆದ ನಾಲ್ಕು ವರ್ಷಗಳಲ್ಲಿ 30–ರಿಂದ 40 ಲಕ್ಷ ಟನ್ ಮರಳುಗಾರಿಕೆ ಮಾಡಿ ಸರ್ಕಾರಕ್ಕೆ ಯಾವುದೇ ರಾಜಧನ ಕಟ್ಟದೇ ಕೋಟ್ಯಾಂತರ ರೂ. ವಂಚಿಸಲಾಗಿದೆ. ಒಟ್ಟಾರೆ 300 ರಿಂದ 400 ಕೋ.ರೂ ಮೊತ್ತದಷ್ಟು ಅಕ್ರಮ ಮರಳುಗಾರಿಕೆ ದಂಧೆ ನಡೆದಿದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ವಿವರಣೆ ನೀಡಿದ್ದಾರೆ.

ಚಿತ್ತಾಪುರ ಕ್ಷೇತ್ರದ ನದಿಯಲ್ಲಿನ ಭಾಗೋಡಿ ಮತ್ತಿತರ ಪ್ರದೇಶದಲ್ಲಿ ಅಕ್ರಮವಾಗಿ ಮರಳುಗಾರಿಕೆ ನಡೆದ ವಿರುದ್ಧ ಬಿಜೆಪಿ ಹಾಗೂ ಇತರರು ಜತೆಗೆ ಸಾರ್ವಜನಿಕರು ಧ್ವನಿ ಎತ್ತಿ ಆಕ್ರೋಶ ಹೊರ ಹಾಕಿದ ನಂತರ ತನಿಖೆಗೆ ವಹಿಸಲಾಗಿದೆ. ಆದರೆ ತನಿಖೆಗೆ ಆಗಮಿಸಿರುವ ಬಳ್ಳಾರಿಯ ಹಿರಿಯ ಭೂ ವಿಜ್ಞಾನಿಗಳಾದ ಪ್ರವೀಣ ಜೋಶಿ, ಮಂಜೂನಾಥ ಅವರನ್ನೊಳಗೊಂಡ ತಂಡ ಭಾಗೋಡಿಗೆ ಹೋದಾಗ ಖಾಸಗಿ ಪಟ್ಟಾ ಭೂಮಿಯಲ್ಲಿನ ಮರಳುಗಾರಿಕೆಯನ್ನು ಮಾತ್ರ ತೋರಿಸಲಾಗಿದೆ. ಆದರೆ ಕೆಆರ್‌ಡಿಎಲ್ ರಾಶಿ ಗಟ್ಟಲೇ ಗುಡ್ಡೆ ಹಾಕಿರುವ ಮರಳುಗಾರಿಕೆ ಹೋಗದಂತೆ ದಾರಿಯನ್ನು ವಿರೂಪಗೊಳಿಸಲಾಗಿದೆ. ಈ ಮೂಲಕ ಕೆಆರ್‌ಡಿಎಲ್‌ನ ಅಕ್ರಮ ಮರಳುಗಾರಿಕೆ ಮುಚ್ಚಿ ಹಾಕಲು ವ್ಯವಸ್ಥಿತ ಸಂಚು ರೂಪಿಸಲಾಗಿದೆ. ಈ ಹಿಂದೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಭೇಟಿ ನೀಡಿದ ಸಂದರ್ಭದಲ್ಲಿ ಕೆಆರ್‌ಡಿಎಲ್ ಗುಡ್ಡೆ–ಗುಡ್ಡೆಯಾಗಿ ಹಾಕಿದ ಪ್ರದೇಶಕ್ಕೆ ಹೋಗದಂತೆ ಬೀಗ ಜಡೆದಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಒಟ್ಟಾರೆ ಕಾಗಿಣಾ ನದಿಯಲ್ಲಿನ ಅಕ್ರಮ ಅದರಲ್ಲೂ ಕೆಆರ್‌ಡಿಎಲ್ ಹೆಸರಿನಲ್ಲಿ ನಡೆದಿರುವ ಖಾಸಗಿ ವ್ಯಕ್ತಿಗಳ ಮರಳುಗಾರಿಕೆ ದಂಧೆ ಬಯಲಿಗೆ ಬಾರದಂತೆ ವ್ಯವಸ್ಥಿತವಾಗಿ ನೋಡಿಕೊಳ್ಳಲಾಗುತ್ತಿದೆ ಎಂದು ತೇಲ್ಕೂರ ಗಂಭೀರವಾಗಿ ಆರೋಪಿಸಿದ್ದಾರೆ.

ತನಿಖೆ ನಡೆಸಿ

300–400 ಕೋ.ರೂ ಅಕ್ರಮದ ಕಾಗಿಣಾ ನದಿಯಲ್ಲಿನ ಅಕ್ರಮ ಮರಳುಗಾರಿಕೆ ದಂಧೆಯ ತನಿಖೆಗೆ ಆಗಮಿಸಿರುವ ಬಳ್ಳಾರಿಯ ಹಿರಿಯ ವಿಜ್ಞಾನಿಗಳ ತಂಡ–ಕ್ಕೆ ಜಿಲ್ಲಾಡಳಿತ ಅದರಲ್ಲೂ ಜಿಲ್ಲಾಧಿಕಾರಿಗಳು ಶನಿವಾರ ಮೇ 17ರಂದು ದಿನವಾದರೂ ಸೂಕ್ತ ಪೊಲೀಸ್ ರಕ್ಷಣೆ ನೀಡಿ ಜತೆಗೆ ಮಾಧ್ಯಮದವರ ಸಮ್ಮುಖದಲ್ಲಿ ತನಿಖೆ ನಡೆದು ಸತ್ಯಾಸತ್ಯತೆ ಹೊರ ತರಲು ಕ್ರಮ ಕೈಗೊಳ್ಳಬೇಕು. ತಂಡಕ್ಕೆ ಪಟ್ಟಾ ಭೂಮಿಯಲ್ಲಿನ ಮರಳುಗಾರಿಕೆ ತೋರಿಸಿ 7–8 ಕೋ.ರೂ ದಂಡ ಹಾಕಲಾಗಿದೆ ಎಂದು ತೋರಿಸಿ ಕೆಆರ್‌ಡಿಎಲ್‌ನ ಬ್ರಹ್ಮಾಂಡ ಮರಳುಗಾರಿಕೆ ಭ್ರಷ್ಟಾಚಾರ ಮುಚ್ಚಿ ಹಾಕಲು ಎಲ್ಲ ಕಡೆಯಿಂದ ನಡೆಯುತ್ತಿದೆ. ಆದ್ದರಿಂದ ಹೀಗಾಗಲು ಬಿಜೆಪಿ ಅವಕಾಶ ಮಾಡಿಕೊಡೊದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಕ್ರಮ ಮರಳುಗಾರಿಕೆ ಸಂಬಂಧವಾಗಿ ಯಾರ ಮೇಲೂ ಕ್ರಮ ಕೈಗೊಳ್ಳದೇ ಪಟ್ಟಾ ಭೂಮಿಯಲ್ಲಿನ ಮರಳುಗಾರಿಕೆಗೆ ದಂಡ ಹಾಕಲಾಗಿ ಜತೆಗೆ ಕೆಲವರ ಹೆಸರಿಗೆ ಮಾತ್ರ ಕ್ರಮ ಕೈಗೊಳ್ಳಲಾಗಿದೆ ಎಂದು ಇಡೀ ಅಕ್ರಮ ಮರಳು ದಂಧೆ ಮುಚ್ಚಿಹಾಕಲಾಗುತ್ತಿದೆ. ಹೀಗಾಗಿ ಇದೆಲ್ಲ ಸಂಪೂರ್ಣ ಬೇರು ಸಮೇತ ಅಕ್ರಮ ಬಯಲಿಗೆ ಬರಬೇಕಾದರೆ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆಯೇ ಸೂಕ್ತ ಏನಿಸುತ್ತಿದೆ. ಆದ್ದರಿಂದ ಸರ್ಕಾರ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆಯಾಗಲಿ ಎಂಬುದೇ ತಮ್ಮ ಆಗ್ರಹವಾಗಿದೆ ಎಂದಿದ್ದಾರೆ.

ಭಾಗೋಡಿ ಚಲೋ–ಕಾಗಿಣಾ ಬಚಾವೋ: ಅಕ್ರಮ ಮರಳುಗಾರಿಕೆಯಿಂದ ನಲುಗಿರುವ ಕಾಗಿಣಾ ನದಿ ಉಳಿಸುವ ನಿಟ್ಟನಲ್ಲಿ ಭಾಗೋಡಿ ಚಲೋ–ಕಾಗಿಣಾ ಬಚಾವೋ ಆಂದೋಲನ ಹಮ್ಮಿಕೊಳ್ಳಲಾಗುವುದು. ಆದ್ದ–ರಿಂದ ಈಗ ಮಳೆ ಬಂದು ನದಿಯಲ್ಲಿ ನೀರು ನಿಲ್ಲುವ ಮುಂಚೆ ಕೆಆರ್‌ಡಿಎಲ್‌ನ ಅಕ್ರಮ ಮರಳು ದಂಧೆ ತನಿಖೆಯಾಗಿ ತಪ್ಪಿತಸ್ಥ ಎಲ್ಲ ವಿರುದ್ಧ ಕಠಿಣ ಕ್ರಮವಾಗಿ ಸರ್ಕಾರಕ್ಕೆ ಕೋಟ್ಯಾಂತರ ರೂ ರಾಜಧನ ಸಂಗ್ರಹವಾಗಬೇಕು. ಇದು ತಮ್ಮ ಸ್ಪಷ್ಟ ನಿಲುವು ಹಾಗೂ ಆಗ್ರಹವಾಗಿದೆ. ಅದಲ್ಲದೇ ರಾಶಿ–ರಾಶಿಯಾಗಿ ಸಂಗ್ರಹಿಸಿಡಲಾದ ಮರಳು ರಾತೋ ರಾತ್ರಿ ಸಾಗಾಣಿಕೆ ಮಾಡುವ ಎಲ್ಲ ಮುನ್ಸೂಚನೆಗಳಿವೆ. ಹೀಗಾಗಿ ಜಿಲ್ಲಾಡಳಿತ ತನ್ನ ಸುಪರ್ದಿಗೆ ತೆಗೆದುಕೊಳ್ಳಬೇಕೆಂದು ತೇಲ್ಕೂರ ಆಗ್ರಹಿಸಿದ್ದಾರೆ.



ಹೋರಾಟದ ಹಿನ್ನೆಲೆಯಲ್ಲಿ ಕಾಗಿಣಾ ನದಿಯಲ್ಲಿನ ನಡೆದಿರುವ ಅಕ್ರಮ ಮರಳುಗಾರಿಕೆ ತನಿಖೆಗೆ ಬಳ್ಳಾರಿ ಹಿರಿಯ ವಿಜ್ಞಾನಿಗಳ ತಂಡ ಆಗಮಿಸಿದೆ. ಆದರೆ ವಾಸ್ತವ ತನಿಖೆಗೆ ಅವಕಾಶ ಕಲ್ಪಿಸಲು ಜಿಲ್ಲಾಡಳಿತ ಶನಿವಾರ ದಿನವಾದರೂ ಸೂಕ್ತ ಪೊಲೀಸ್ ವ್ಯವಸ್ಥೆ ಕಲ್ಪಿಸಬೇಕು. ಹಾದಿ ತಪ್ಪಿಸುವ ಕೆಲಸ ಆಗಬಾರದು. ಕೆಆರ್‌ಡಿಎಲ್ ರಾಶಿ–ರಾಶಿ ಅಕ್ರಮ ಮರಳು ಗುಡ್ಡೆಗಳನ್ನು ತೋರಿಸಿ. ಇದೇ ಸಮಯದಕ್ಕೆ ಮಾಧ್ಯಮದವರೆಲ್ಲರನ್ನೂ ಕರೆದುಕೊಂಡು ವ್ಯವಸ್ಥೆ ಸಹ ಜಿಲ್ಲಾಡಳಿತ ಮಾಡಲಿ.

**– ರಾಜಕುಮಾರ ಪಾಟೀಲ್ ತೇಲ್ಕೂರ, ಮಾಜಿ ಶಾಸಕ**

## ಧಾರಾಕಾರ ಮಳೆ: ಧರೆಗುರುಳಿದ ಮರ

ಮೈಸೂರು: ಮೇ.16:– ನಗರದಲ್ಲಿ ಗುರುವಾರ ಸಂಜೆ ವೇಳೆಗೆ ಸುರಿದ ಬಿರುಗಾಳಿ ಸಹಿತ ಧಾರಾಕಾರ ಮಳೆಗೆ ಜನಜೀವನ ಅಸ್ತವ್ಯಸ್ತವಾಯಿತು. ಮಧ್ಯಾಹ್ನವೆಲ್ಲಾ ಸುಡು ಬಿಸಿಲಿದ್ದು, ಸಂಜೆಯಾಗುತ್ತಿದ್ದಂತೆ ಬಿರುಗಾಳಿ ಸಹಿತ ಧಾರಾಕಾರ ಮಳೆ ಸುರಿಯಿತು. ಇದರಿಂದ ಜನ ಜೀವನ ಅಸ್ತವ್ಯಸ್ತವಾಗಿ ವಾಹನ ಸವಾರರು ಪರದಾಡುವಂತಾಯಿತು. ಸುಮಾರು ಒಂದು ಗಂಟೆ ಕಾಲ ಸುರಿದ ಮಳೆಗೆ ಹಲವೆಡೆ ರಸ್ತೆಗೆ ಅಡ್ಡಲಾಗಿ ಮರಗಳು ಬಿದ್ದಿರುವ ದೃಶ್ಯ ಸಾಮಾನ್ಯವಾಗಿತ್ತು. ವಾಹನ ಸಂಚಾರವೂ ಸಂಪೂರ್ಣ ಅಸ್ತವ್ಯಸ್ತವಾಗಿತ್ತು

ಭಾರಿ ಪ್ರಮಾಣದ ಮಳೆಗೆ ನಗರದ ಪ್ರಮುಖ ರಸ್ತೆಯಲ್ಲೆಲ್ಲಾ ನೀರು ತುಂಬಿತ್ತು. ಬಸ್ ನಿಲ್ದಾಣದ ಹತ್ತಿರ ರಸ್ತೆ ಮೇಲೆ ಮಳೆ ನೀರು ಸಂಗ್ರಹವಾಗಿ ವಾಹನ ಹಾಗೂ ಸಾರ್ವಜನಿಕರ ಸಂಚಾರಕ್ಕೆ ಅಡಚಣೆ ಉಂಟಾಗಿತ್ತು. ನಗರದ ದೇವರಾಜ ಮೊಹಲ್ಲಾದ ಗಾಯಿತ್ರಿ ಭವನ್ ಬಳಿ ಮರವೊಂದು ಧರೆಗುರುಳಿದೆ. ದಿವಾನ್ಸ್ ರಸ್ತೆಯಲ್ಲಿ ಡಬಲ್ ಪೆಟ್ರೋಲ್ ಬಂಕ್ ಬಳಿ ಬೃಹತ್ ಮರವೊಂದು ರಸ್ತೆಯಲ್ಲಿ ಚಲಿಸುತ್ತಿದ್ದ ಕಾರಿನ ಮೇಲೆ ಬಿದ್ದ ಪರಿಣಾಮ ಕಾರು ಜಖಂಗೊಂಡಿದೆ. ಅದೃಷ್ಟವಸಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

## ಚಟ್ಟರಕಿಗೆ ಸಾಧಕ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ,ಮೇ.17:ಸಮಾಜ ಸೇವೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿಜಯಪುರದ ಲಾಲಸಾಬ ಚಟ್ಟರಕಿ ಅವರು ಸಾಧಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಇಂಡಿಯನ್ ಮ್ಯೂಸಿಕಲ್ ಫೆಸ್ಟಿವಲ್ ಅಂಗವಾಗಿ ಬೆಂಗಳೂರಿನ ಯಶವಂತಪುರದ ಲಲಿತಕಲಾ ಅಡೋಟೋರಿಯಂನಲ್ಲಿ ಸ್ವರ ಸಂಗಮ ಕಲಾ ವೃಂದ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಡೆದ ಸಮಾರಂಭದಲ್ಲಿ ಚಟ್ಟರಕಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸಮಾಜಸೇವೆಯಲ್ಲಿ ಗಣನೀಯ ಸಾಧನೆ ಮಾಡಿದ್ದನ್ನು ಪರಿಗಣಿಸಿ ಚಟ್ಟರಕಿ ಅವರಿಗೆ ಸಾಧಕ ಪ್ರಶಸ್ತಿ ಪ್ರದಾನ ಮಾಡಲಾಯಿತು.

# ಜಿ.ಪಂ. ಸಿಇಒ ವಿರುದ್ಧ ರಾಜ್ಯಪಾಲರಿಗೆ ದೂರು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 17 : ಗ್ರಾಮ ಪಂಚಾಯಿತಿಗಳಲ್ಲಿನ ಕಡತ ನಾಪತ್ತೆ ಪ್ರಕರಣದಲ್ಲಿ ಪಿಡಿಒಗಳ ವಿರುದ್ಧ ಕ್ರಮ ಜರುಗಿಸದ ಕಾರಣಕ್ಕೆ ನಮ್ಮ ಕರ್ನಾಟಕ ಸೇನೆ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಸಂಜು ಯಾದವ್ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬದೋಲೆ ವಿರುದ್ಧ ರಾಜ್ಯಪಾಲರಿಗೆ ದೂರು ಸಲ್ಲಿಸಿದ್ದಾರೆ. ಜಿಲ್ಲೆಯ ಆರು ಪಿಡಿಒಗಳು ಕಾರ್ಯ ನಿರ್ವಹಿಸುತ್ತಿರುವ ಪಂಚಾಯಿತಿಗಳಲ್ಲಿ ಕಡತಗಳು ಇಲ್ಲ. ಹೀಗಾಗಿ ಉಪ ಕಾರ್ಯದರ್ಶಿಯಿಂದ ತನಿಖೆ



ಮಾಡಿಸಬೇಕು. ಪಿಡಿಒಗಳಾದ ವಿಜಯಶೀಲಾ, ಶಂಕರರರಾವ್, ಅಬ್ದುಲ್ ಅಜೀಮ್ ಸಿದ್ದಿಕಿ, ಶಿವಕುಮಾರ ಪಾಟೀಲ, ಶರತಕುಮಾರ ಅಭಿಮಾನ, ಶ್ರೀಧರ ಹಾಗೂ ಭೀಮರಾವ್ ವಿರುದ್ಧ ಕ್ರಮ ಜರುಗಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಶಿಫಾರಸು ಮಾಡಿದ್ದರು. ಆದರೆ, ಈವರೆಗೆ ಪಿಡಿಒಗಳ ವಿರುದ್ಧ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ್ದಾರೆ.

ಸಂಘಟನೆಯ ಮನವಿ ಹಿನ್ನೆಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಪರಿಶೀಲನೆ ನಡೆಸಿ, ವಾಸ್ತವಾಂಶದ ವರದಿ ಸಲ್ಲಿಸಲು ನಿರ್ದೇಶನ ನೀಡಿದ್ದಾರೆ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅವರ ಪತ್ರಕ್ಕೂ ಬೆಲೆ ಕೊಟ್ಟಿಲ್ಲ ಎಂದು ಆಪಾದಿಸಿದ್ದಾರೆ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಕ್ರಿಶ್ಚಿಯನ್ ಸಮುದಾಯದ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಹೆಚ್ಚಿಸುವಲ್ಲಿ ಸಮಾಜದ ಮುಖಂಡರ ನೆರವಾಗುವಂತೆ ಕರೆ:ಸಂಜಯ್ ಜಾಗಿರದಾರ

ಮಲ್ಲಮ್ಮನುಡಿ ವಾರ್ತೆ ಬೀದರ :ಮೇ.17: ಇಲಾಖೆಯ ವಸತಿ ಶಾಲೆ ಹಾಗೂ ನಿಲಯಗಳಲ್ಲಿ ಕ್ರಿಶ್ಚಿಯನ್ ಸಮುದಾಯದ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಹೆಚ್ಚಿಸುವಲ್ಲಿ ಸಮಾಜದ ಮುಖಂಡರು ನೆರವಾಗುವಂತೆ ಬೆಂಗಳೂರು ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಾದ ಸಂಜಯ್ ಜಾಗಿರದಾರ ಕರೆಯನ್ನು ನೀಡಿದರು.

ಅವರು ಶುಕ್ರವಾರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಚೇರಿ ಸಭಾಂಗಣದಲ್ಲಿ ಅಲ್ಪಸಂಖಾತರ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಕಛೇರಿಗಳ ಪ್ರಗತಿ



ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ ಕ್ರಿಶ್ಚಿಯನ್ ಸಮುದಾಯದ ಸಮಗ್ರ ಏಳಿಗೆ ಹಾಗೂ ವಿವಿಧ ಯೋಜನೆಗಳಾದ ಶ್ರಮಶಕ್ತಿ ಯೋಜನೆ, ಸ್ವಯಂ ಉದ್ಯೋಗ ಯೋಜನೆ, ಅರಿವು ಯೋಜನೆ, ವಿದೇಶ ವ್ಯಾಸಾಂಗ ಶಿಷ್ಯವೇತನ, ಚರ್ಚಗಳ ದುರಸ್ಥಿ/ನವೀಕರಣ, ಸಮುದಾಯಭವನ, ಸ್ಮಶಾನಭೂಮಿ ಆವರಣಗೋಡೆ ಕಾಮಗಾರಿಗಳು, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಮತ್ತು ವಸತಿ ನಿಲಯಗಳಲ್ಲಿನ ದಾಖಲಾತಿ ಮತ್ತು ವಿದ್ಯಾರ್ಥಿವೇತನದ ಬಗ್ಗೆ ಸುಧೀರ್ಘವಾದ ಚರ್ಚೆ ನಡೆಸಿ ಹಾಗೂ ಚರ್ಚಗಳ ಅಭಿವೃದ್ದಿ ಯೋಜನೆಯ ಅನುದಾನ ಸದುಪಯೋಗವಾಗುವಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದರು.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಸ್ವಾವಲಂಭಿ ಸಾರಥಿ ಯೋಜನೆಯಡಿಯಲ್ಲಿ ಆಯ್ಕೆಯಾದ ಫಲಾನುಭವಿಗೆ ವಾಹನ ಟ್ಯಾಕ್ಸಿ ವಿತರಿಸಿದರು.

ಈ ಸಭೆಯಲ್ಲಿ ಬೀದರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲೆಯ ಕ್ರಿಶ್ಚಿಯನ್ ಸಮುದಾಯದ ಮುಖಂಡರು ಸಂಘ/ಸಂಸ್ಥೆಯ ಮುಖ್ಯಸ್ಥರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸದ್ಗುರು ವಿದ್ಯಾಲಯಕ್ಕೆ ಉತ್ತಮ ಫಲಿತಾಂಶ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ :ಮೇ.17: ಪಟ್ಟಣದ ಸದ್ಗುರು ವಿದ್ಯಾಲಯದ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದು, ವಿದ್ಯಾರ್ಥಿನಿ ಸೃಷ್ಟಿ. ಆರ್ (ಶೇ 97.60) ಪ್ರತಿಶತ ಅಂಕ ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ಅಕ್ಷಯ ಎಸ್.ಮುದ್ದಾ ತಿಳಿಸಿದ್ದಾರೆ.

ಶುಶಾಂತ ಜೆ. (ಶೇ 92.96), ರೋಹಿಣಿ ಪಿ. (88.8), ಲಕ್ಷ್ಮಿ





ಎಚ್., (88.16), ಬಸವಜ್ಯೋತಿ ವಿ. (87.2), ಪೂಜಾ ಪಿ. (86.24) ಅಂಕ ಪಡೆದು ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಸೋಮನಾಥ ಮುದ್ದಾ, ಆಡಳಿತಾಧಿಕಾರಿ ವೀರಣ್ಣಾ ಪರಸಣೆ, ರಾಜಕುಮಾರ ಮೇತ್ರೆ ಸಂತಸ ವ್ಯಕ್ತಪಡಿಸಿದ್ದಾರೆ.

# ಸೋಕೇರ್ ಇಂಡ್ ಸಂಸ್ಥೆಯಿಂದ ಬಂದಿಗಳ ಮಕ್ಕಳಿಗೆ ಉಚಿತ ವಸತಿಯೊಂದಿಗೆ ಶಿಕ್ಷಣ: ಮಕ್ಕಳನ್ನು ದಾಖಲಿಸಲು ಅರಿವು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.17:ಸೋಕೇರ್ ಇಂಡ್ ಸಂಸ್ಥೆ ಕಲಬುರಗಿ/ಬೆಂಗಳೂರು ವತಿಯಿಂದ ಬಂದಿಗಳ ಮಕ್ಕಳಿಗೆ ಉಚಿತವಾಗಿ ವಸತಿಯೊಂದಿಗೆ ಶಿಕ್ಷಣವನ್ನು ಸುಮಾರು 15 ವರ್ಷದಿಂದ ನಿರಂತರವಾಗಿ ಬಂದಿಗಳ ಮಕ್ಕಳಿಗೆ ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಕುರಿತು 2025–26ನೇ ಸಾಲಿನಲ್ಲಿ ಮಕ್ಕಳನ್ನು ಈ ಸಂಸ್ಥೆಯಲ್ಲಿ ದಾಖಲಿಸುವಂತೆ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಶುಕ್ರವಾರ ಜಾಗೃತಿ ಮತ್ತು ಅರಿವಿನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಕಲಬುರಗಿ ಸೋಕೇರ್ ಇಂಡ್ ಸಂಸ್ಥೆ ಅಧ್ಯಕ್ಷಕರಾದ ಪ್ರಕಾಶ ಕುಲಕರ್ಣಿ ಮಾತನಾಡಿ, ನಮ್ಮ ಸಂಸ್ಥೆಯು




ಶೃಂಗೇರಿ ಶಾರಾದಾಂಬೆ ಪೀಠದ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಾ, ಬಂದಿಗಳ ಮಕ್ಕಳಿಗೆ ಉಚಿತ ಹಾಗೂ ವಸತಿಯೊಂದಿಗೆ 1 ನೇ ತರಗತಿಯಿಂದ 10ನೇ ತರಗತಿವರೆಗೆ ದಾಖಲಿಸಿಕೊಂಡು ಶಿಕ್ಷಣವನ್ನು ನೀಡಲಾಗುತ್ತಿದೆ. ತಾವು ತಮ್ಮ ಮಕ್ಕಳನ್ನು ಈ ಸಂಸ್ಥೆಯ ಅಡಿಯಲ್ಲಿ ದಾಖಲಿಸಿ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿಯನ್ನು ಹಾಕಬೇಕು ಎಂದು ಹೇಳಿದರು.

ಸದರಿ ಸಂಸ್ಥೆಯ ಸದಸ್ಯ ಗುರುರಾಜ ಕುಲಕರ್ಣಿ ಮಾತನಾಡಿ, ನಮ್ಮ ಜೀವನಕ್ಕೆ ಶಿಕ್ಷಣ ಬಹಳ ಮುಖ್ಯ ಅದರಲ್ಲಿ ವಿಶೇಷವಾಗಿ ಮಕ್ಕಳಲ್ಲಿ ನೈತಿಕ ಮೌಲ್ಯಗಳನ್ನು ಕಲಿಸಿ ಉಜ್ವಲ ಭವಿಷ್ಯಕ್ಕೆ ಶಿಕ್ಷಣ ಅವಶ್ಯಕವಾಗಿದೆ. ಹಾಗಾಗಿ ಈ ಸಂಸ್ಥೆಯ ಅಡಿಯಲ್ಲಿ ಮಕ್ಕಳನ್ನು ಸೇರಿಸಬೇಕು ಎಂದರು.

ಈ ಸಂಸ್ಥೆಯ ಮುಖ್ಯಸ್ಥರಾದ ಡಾ॥ಅನಿತಾ ಆರ್. ಮಾತನಾಡಿ, ಶಿಕ್ಷಣ ಇಲ್ಲದೇ ನಾವು ನಮ್ಮ ಯಶಸ್ಸನ್ನು ಸಾಧಿಸಲು ಸಾಧ್ಯವಿಲ್ಲ. ಶಿಕ್ಷಣದ ಬಗ್ಗೆ ಅರಿವು ಮೂಡಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ತಾವು ತಮ್ಮ ಮಕ್ಕಳನ್ನು ಈ ಸಂಸ್ಥೆಯ ಅಡಿಯಲ್ಲಿ ಉತ್ತಮ ಸೌಲಭ್ಯಗಳೊಂದಿಗೆ ಶಿಕ್ಷಣ ನೀಡಲಾಗುತ್ತಿದೆ. ತಾವು ಇದರ ಲಾಭ ಪಡೆದುಕೊಳ್ಳಬೇಕು ಎಂದರು.

ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಸಹಾಯ ಅಧೀಕ್ಷಕರಾದ ಚನ್ನಪ್ಪ, ಜೈಲರ್‌ಗಳಾದ ಸುನಂದ ವಿ., ಸಾಗರ ಪಾಟೀಲ್, ಶ್ರೀಮಂತಗೌಡ ಪಾಟೀಲ್, ಶಾಮ ಬಿದ್ರಿ, ಜೈಲರ್ ಹಾಗೂ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು. ಈ ಸಂಸ್ಥೆಯ ಶಿಕ್ಷಕ ನಾಗರಾಜ ಮುಲಗೆ ಕಾರ್ಯಕ್ರಮ ನಿರೂಪಿಸಿದರು.

# ಮಕ್ಕಳ ಬೇಸಿಗೆ ಶಿಬಿರ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.17: ರಾಜ್ಯ ಬಾಲ ಭವನ ಸೊಸೈಟಿ, ಕಲಬುರಗಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲ ಭವನ ಸಮಿತಿ ಹಾಗೂ ಕಲಬುರಗಿ ರಂಗಾಯಣ ಇವರ ಸಹಯೋಗದೊಂದಿಗೆ ರಂಗಾಯಣದಲ್ಲಿ ಶುಕ್ರವಾರ ಆಯೋಜಿಸಿದ 2025–26ನೇ ಸಾಲಿನ ಮಕ್ಕಳ ಬೇಸಿಗೆ ಶಿಬಿರವನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ ಅವರು ಉದ್ಘಾಟಿಸಿದರು.

5 ರಿಂದ16 ವರ್ಷ ವರೆಗಿನ ಮಕ್ಕಳಿಗೆ ಸೃಜನಾತ್ಮಕ ಮತ್ತು ಕ್ರಿಯಾತ್ಮಕ ಚಟುಚಟಿಕೆಯಲ್ಲಿ ಭಾಗವಹಿಸಲು ಈ ಶಿಬಿರ ಸಹಕಾರಿಯಾಗಲಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಿವಶರಣಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ಪಾಟೀಲ್, ಬಾಲಕರ ಬಾಲ ಮಂದಿರದ ಅಧೀಕ್ಷಕಿ ನಾಜ್ಮೀನ್ ಬೇಗಂ ಸೇರಿದಂತೆ ಮುದ್ದು ಮಕ್ಕಳು, ಪೋಷಕರು ಭಾಗಿಯಾಗಿದ್ದರು. ಅಧೀಕ್ಷಕಿ ಹಾಗೂ ಸಂಪನ್ಮೂಲ ವ್ಯಕ್ತಿ ಶೋಭಾ ಬನ್ನಿಗೋಳ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದರು.

# ಆಪರೇಷನ್ ಸಿಂಧೂರ ಬಗ್ಗೆ ಅಪಪ್ರಚಾರ ಸಲ್ಲದು: ಭಗವಂತ ಖೂಬಾ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.17:ಪಹೆಲಗಾಮ್ ದಾಳಿಯ ಪ್ರತಿಕಾರವಾಗಿ ನಮ್ಮ ಸೈನಿಕರು ಪಾಕಿಸ್ಥಾನಕ್ಕೆ ಮುಟ್ಟಿನೋಡಿಕೊಳ್ಳುವಂತೆ ತಿರುಗೇಟು ನೀಡಿದೆ, ನಮ್ಮ ಸೈನಿಕರ ಶೌರ್ಯ, ಬುದ್ದಿವಂತಿಕೆಗೆ ಇಡಿ ವಿಶ್ವವೆ ಅಭಿನಂದಿಸುತ್ತಿದೆ ಆದರೆ ರಾಜ್ಯದ ಕಾಂಗ್ರೇಸ್ ಪಕ್ಷದ ಸಚಿವರು, ಶಾಸಕರು, ಆಪರೇಷನ್ ಸಿಂಧೂರ ಕುರಿತಾಗಿ ಮನಸ್ಸಿಗೆ ಬಂದಂತೆ ಹೇಳಿಕೆ ನೀಡಿ, ಅಪಪ್ರಚಾರ ಮಾಡುವುದು, ದೇಶದ ಸೈನಿಕರಿಗೆ ಅವಮಾನಿಸುತ್ತಿರುವುದು ಸರಿಯಲ್ಲಾ, ಇದು ಕಾಂಗ್ರೇಸ್ ಪಕ್ಷದ ಆತಂಕವಾದಿಗಳ ಪರವಾದ ಮನಸ್ಥಿತಿ ತೋರಿಸುತ್ತಿದೆ ಎಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಆಕ್ರೋಷ ವ್ಯಕ್ತಪಡಿಸಿದ್ದಾರೆ. 2014ಕ್ಕಿಂತ ಮುಂಚೆ ಅಧಿಕಾರದಲ್ಲಿದ್ದ ಕಾಂಗ್ರೇಸ್ ಪಕ್ಷಕ್ಕೆ ಪಾಕಿಸ್ಥಾನದ ಮೇಲೆ , ಆತಂಕವಾದಿಗಳ ಮೇಲೆ ಪ್ರತಿಕಾರ ತಿರಿಸಿಕೊಳ್ಳಲು ಆಗ್ತಿರಲಿಲ್ಲಾ, ನಮ್ಮ ಸೈನ್ಯದ ಕೈ ಕಟ್ಟಿ ಹಾಕಿದ್ದರು, ಇವರ ಅಧಿಕಾರದಲ್ಲಿ ಸಾವಿರಾರು ಸೈನಿಕರ, ಅಮಾಯಕರ ಜೀವಗಳು ಹೊಗಿವೆ, ಆದರೆ ಇವಾಗ ಪಾಕಿಸ್ಥಾನದ ಒಂದು ಗುಂಡಿಗೆ ನಮ್ಮಿಂದ ಹತ್ತು ಗುಂಡುಗಳು ಹಾರುತ್ತವೆ, ಇದು ಬದಲಾದ ಭಾರತವಾಗಿದೆ, ಇಡಿ ವಿಶ್ವಕ್ಕೆ ಭಾರತದ ಶಕ್ತಿಯ ಅರಿವಾಗಿದೆ ಆದರೆ ನಮ್ಮಲ್ಲಿಯ ಕಾಂಗ್ರೇಸ್ ಪಕ್ಷದವರಿಗೆ ಅರ್ಥವಾಗದಿರುವುದು ಬೇಸರದ ಸಂಗತಿಯಾಗಿದೆ ಎಂದಿದ್ದಾರೆ. ಕಾಂಗ್ರೇಸ್ ಪಕ್ಷಕ್ಕೆ ಯಾವಾಗಲೂ ಪಾಕಿಸ್ಥಾನಿಯರ



ಮೇಲೆ ಹೆಚ್ಚು ಪ್ರೀತಿ ಆದ್ದ–ರಿಂದ ನಮ್ಮ ಸೈನ್ಯದ ಮೇಲೆ, ನಮ್ಮ ಸೈನಿಕರ ಶೌರ್ಯದ ಬಗ್ಗೆ ಅನುಮಾನ ಪಟ್ಟು, ಅವಮಾನಿಸುವ ಕೆಲಸ ಮಾಡುತ್ತಾರೆ, ಇಡಿ ಜಗತ್ತೆ ಆಪರೇಷನ್ ಸಿಂಧೂರ ಬಗ್ಗೆ ಕೊಂಡಾಡುತ್ತಿದೆ, ಆದರೆ ಇಲ್ಲಿಯ ಕಾಂಗ್ರೇಸ್‌ನವರಿಗೆ ಅದು ಏನು ಅಲ್ಲಾ ಎಂಬಂತೆ ಮಾತನಾಡುತ್ತಿದ್ದಾರೆ, ಪ್ರಧಾನಿಗಳಿಗೆ ಪ್ರಶ್ನಿಸುವ ಕೆಲಸ ಮಾಡುತ್ತಿದ್ದಾರೆ, ಕಾಂಗ್ರೇಸ್‌ನವರು ನಮ್ಮ ಪ್ರಧಾನಿಗೆ ಪ್ರಶ್ನಿಸುವ ಮುನ್ನ, ಕಾಂಗ್ರೇಸ್ ಪಕ್ಷ ಅಧಿಕಾರದಲ್ಲಿದ್ದಾಗ ಆತಂಕವಾದಿಗಳ ವಿರುದ್ದ ಕಾಂಗ್ರೇಸ್‌ನವರ ನಿಲುವು ಹೇಗಿತ್ತು, ಮಾಡಿದ ಸಾಧನೆ ಏನು ಎನ್ನುವುದು ಪ್ರಶ್ನಿಸಿಕೊಳ್ಳಲಿ ಎಂದಿದ್ದಾರೆ. ಮಹಾತ್ಮಾ ಗಾಂದಿಜೀಯವರು ಅಹಿಂಸೆ ಮಾರ್ಗ ಭೋದಿಸಿದ್ದಾರೆ ಹೊರತು ಆತಂಕವಾದಿ ಮತ್ತು ಸಮಾಜಘಾತುಕ ಶಕ್ತಿಗಳ ಕೃತ್ಯಕ್ಕೆ ವಿರೋಧಿಸಬೇಡಿ ಎಂದು ಹೆಳಿಲ್ಲಾ, ಆದರೆ ನಮ್ಮ ಮೋದಿ ಸರ್ಕಾರ ಮತ್ತು ನಮ್ಮ ಸೈನ್ಯ ಆಪರೇಷನ್ ಸಿಂಧೂರ ಕೈಗೊಂಡಾಗ, ಕಾಂಗ್ರೇಸ್‌ನವರು ಮುಸ್ಲಿಂರ ಓಲೈಕೆಗೆ ರಾಷ್ಟ್ರಪಿತ ಮಹಾತ್ಮಾ ಗಾಂಧಿಜೀಯವರ ಫೋ–ಟೊ, ಅವರ ಸಂದೇಶಗಳು ಹಾಕಿ, ದೇಶದ ಜನರಲ್ಲಿ ಗಾಂಧಿಜೀಯವರ ಬಗ್ಗೆ ತಪ್ಪು ಭಾವನೆ ಮೂಡುವಂತೆ ಮಾಡಿದ್ದರು. ಕಾಂಗ್ರೇಸ್‌ನವರಿಗೆ ಒಟ್ಟಿನಲ್ಲಿ ದೇಶ ಹಾಳಾದರೂ ಪರವಾಗಿಲ್ಲಾ, ತನ್ನ ರಾಜಕೀಯ ಬೆಳೆ ಮಾತ್ರ ಬೇಯಿಬೇಕು ಎನ್ನುವುದು ಇವರ ಮನಸ್ಥಿತಿಯಾಗಿದೆ ಎಂದಿದ್ದಾರೆ. ಕಾಂಗ್ರೇಸ್ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಖರ್ಗೆಯವರು ತಮ್ಮ ಪಕ್ಷದ ಸಚಿವರುಗಳನ್ನು, ಶಾಸಕರುಗಳನ್ನು ನಿಯಂತ್ರಿಸಬೇಕು, ದೇಶದ ವಿಷಯ ಬಂದಾಗ ಪಾಕಿಸ್ಥಾನದ ಮೇಲಿನ ಪ್ರೀತಿ ಕಡಿಮೆ ಮಾಡಿಕೊಳ್ಳುವಂತೆ ಸೂಚಿಸಬೇಕೆಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಒತ್ತಾಯಿಸಿದ್ದಾರೆ.

# ಇಂದು ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ.17: ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಪತ್ರಕರ್ತರ ಮಕ್ಕಳ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಜಿಲ್ಲಾ ಪತ್ರಿಕಾ ಭವನದಲ್ಲಿ ಮೇ 18ರಂದು ನಡೆಯಲಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಸಂಕೀನ್ ಹೇಳಿದರು.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಅಂ–ದು ಬೆಳಿಗ್ಗೆ 10ಕ್ಕೆ ನಡೆಯುವ ಕಾರ್ಯಕ್ರಮವನ್ನು ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಅವರು ಉದ್ಘಾಟಿಸಲಿದ್ದಾರೆ. ನಗರಸಭೆ ಅಧ್ಯಕ್ಷೆ ಲಲಿತಾ ಅನಪೂರ ಅವರು ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ವಿತರಣೆ



ಮಾಡುವರು. ಮುಖ್ಯ ಅತಿಥಿಗಳಾಗಿ ನಗರಸಭೆ ಸದಸ್ಯ ಚನ್ನಕೇಶವಗೌಡ ಬಾಣತಿಹಾಳ ಮತ್ತು ಜೆಡಿಎಸ್ ನಗರ ಘಟಕ ಅಧ್ಯಕ್ಷ ಬಂದಪ್ಪ ಅರಳಿ, ಸಂಘದ ರಾಜ್ಯ ಉಪಾಧ್ಯಕ್ಷ ಮತ್ತು ಜಿಲ್ಲಾ ಉಸ್ತುವಾರಿ ಭವಾನಿಸಿಂಗ್ ಠಾಕೂರು, ಸಂಘದ ರಾಜ್ಯ ಪರಿಷತ್ತಿನ ಸದಸ್ಯ ರಾಘವೇಂದ್ರ ಕಾಮನಟಗಿ, ಪ್ರಧಾನ ಕಾರ್ಯದರ್ಶಿ ಮಹೇಶ್ ಕಲಾಲ್ ಅವರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

2024–25ನೇ ಸಾಲಿನಲ್ಲಿ ಎಸ್ ಎಸ್ ಎಲ್ ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಆದಿತ್ಯ ಧೀರೇಂದ್ರ ಕುಲಕರ್ಣಿ, ರಿಷಿಕಾ ಶ್ರೀಮಂತ ಚಲವಾದಿ, ಅರ್ಪಿತ್ ಪ್ರಶಾಂತ್ ರಾಠಿ, ಅನಘಾ ಪವನ ಕುಲಕರ್ಣಿ, ಸಮೃದ್ದಿ ಸಿದ್ದಯ್ಯ ಪಾಟೀಲ್, ಸಿದ್ದಲಿಂಗೇಶ ಗವಿಸಿದ್ದೇಶ ಹೊಗರಿ, ಸುಮನ್ ಅಮರೇಶ್ ಹಿರೇಮಠ, ಸಂಜನಾ ಶಿವಣ್ಣ ಚಿನ್ನಾಕಾರ ಅವರಿಗೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ತಲಾ 5 ಸಾವಿರ ರೂಪಾಯಿ ನಗದು ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ಹೇಳಿದರು.



ಭಾಲ್ಕಿ: ಪಟ್ಟಣದ ಸರ್ಕಾರಿ ಪ.ಪೂ ಕಾಲೇಜಿನಲ್ಲಿ ನಡೆದ ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದಲ್ಲಿ ಅತಿ ಹೆಚ್ಚು ಅಂಕಗಳಿಸಿ ಉತ್ತೀರ್ಣರಾದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಸತ್ಕಾರ ಮಾಡಲಾಯಿತು. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್, ಇಸಿಓ ಸಹದೇವ.ಜಿ, ಬಿಸಿಯೂಟ ಅಧಿಕಾರಿ ಮಲ್ಲಿನಾಥ ಸಜ್ಜನ್, ಕ್ಷೇತ್ರ ಸಮನ್ವಯಾಧಿಕಾರಿ ಮನೋಹರ ಹೊಳಕರ, ಸೂರ್ಯಕಾಂತ ಸುಂಟೆ, ದತ್ತು ಕಾಟಕರ, ಡಾ. ಸುಪ್ರಿಯಾ ಪಾಟೀಲ ಇದ್ದರು

# ಮಕ್ಕಳು ಓದುವ ಹವ್ಯಾಸ ರೂಢಿಸಿಕೊಳ್ಳಿ : ಮಲ್ಲಿಕಾರ್ಜುನ ತೊದಲಬಾಗಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಮೇ.17: ಶಾಲಾ ಶಿಕ್ಷಣ ಇಲಾಖೆ, ಕಲಿಕೆ ಟಾಟಾ ಟ್ರಸ್ಟ್ ಇವರ ಸಹಭಾಗಿತ್ವದಲ್ಲಿ ಚಿತ್ರ ಪುಸ್ತಕ ರಚನಾ ಕಾರ್ಯಾಗಾರದ ಸಮಾರೋಪ ಸಮಾರಂಭವನ್ನು ಕೊಪ್ಪಳ ತಾಲೂಕಿನ ಬುಡಶೆಟ್ನಾಳ ಶಾಲೆಯಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಮಲ್ಲಿಕಾರ್ಜುನ ತೊದಲಬಾಗಿ, ಮಾನ್ಯ ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್ ಕೊಪ್ಪಳ ಇವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಮನೋವಿಕಾಸಕ್ಕಾಗಿ ಪಠ್ಯೇತರ ಚಟುವಟಿಕೆಗಳು ಅಗತ್ಯವಾಗಿದ್ದು ಅವರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹ ನೀಡಬೇಕು. ಮಕ್ಕಳು ಪ್ರತಿದಿನವೂ ಓದು ಬರಹದ ಕ್ರಮ ಅನುಸರಿಸಬೇಕು. ಬೌದ್ಧಿಕ ವಿಕಸನಕ್ಕಾಗಿ ಸರ್ಕಾರದ ಯೋಜನೆಯನ್ನು ಸದುಪಯೋಗ



ಪಡೆದುಕೊಳ್ಳಿ ಎಂದರು.

ಪ್ರಾಸ್ತಾವಿಕ ನುಡಿಗಳನ್ನು ಯೋಜನಾ ನಿರ್ದೇಶಕರಾದ ಗಿರೀಶ್ ಮಾತನಾಡಿದರು. ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಶಹಾಪುರ, ಗಿಣಿಗೇರಾ–ಹ್ಯಾಟಿ ಮತ್ತು ಬುಡಶೆಟ್ನಾಳ ಶಾಲೆಗಳ ವಿದ್ಯಾರ್ಥಿಗಳು ಹತ್ತು ದಿನಗಳ ಕಾರ್ಯಾಗಾರದ ಕುರಿತು ಅನಿಸಿಕೆಗಳನ್ನು ಹಂಚಿಕೊಂಡರು. ಹತ್ತು ದಿನ ನಡೆದ ಚಟುವಟಿಕೆಯನ್ನು ಮಕ್ಕಳು ತಯಾರಿಸಿರುವ ಚಿತ್ರ ಕಥಾ ಪುಸ್ತಕ ರಚನೆಯನ್ನು ಪ್ರದರ್ಶನ ಮಾಡಲಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯಾಯರಾದ ಶಿವಪ್ಪ ಜೋಗಿ, ಶಿಕ್ಷಣ ಇಲಾಖೆಯ ಕ್ಷೇತ್ರ ಸಮನ್ವಯ ಅಧಿಕಾರಿಗಳಾದ ಶ್ರೀ ಸೈಯದ್ ಸರ್ ಮತ್ತು ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳಾದ, ಕನಕಪ್ಪ ಭಾಗವಹಿಸಿದ ಮಕ್ಕಳ ಪ್ರತಿಭೆಯ ಬಗ್ಗೆ ಶ್ಲಾಘನೀಯ ಮಾತುಗಳನ್ನು ತಿಳಿಸಿದರು. ಸಂಪನ್ಮೂಲ ವ್ಯಕ್ತಿಗಳಾದ ಕೈಲಾಸ, ವನಿತಾ ಯಾಜಿ, ಕಲಿಕೆ ಟಾಟಾ ಟ್ರಸ್ಟ್‌ನ ಕಾರ್ಯಕ್ರಮ ಅಧಿಕಾರಿಗಳಾದ ಶಿವಕುಮಾರ ಯಾದವ ಮತ್ತು ಆಯ್ದ ಮುಖ್ಯೋಪಾಧ್ಯಾಯರು ,ಎಸ್ ಡಿ ಎಮ್ ಸಿ ಅಧ್ಯಕ್ಷರು, ಸದಸ್ಯರು ಮತ್ತು ಗ್ರಾಮ ಪಂಚಾಯಿತಿ ಸದಸ್ಯರು, ಅಭಿವೃದ್ಧಿ ಅಧಿಕಾರಿಗಳು ಕಲಕೇರಿ , ಕಲಿಕೆ ಟಾಟಾ ಟ್ರಸ್ಟ್ ನ ಸಂಯೋಜಕರು, ಶಿಕ್ಷಕರು, ಊರಿನ ಪ್ರಮುಖರು, ಶಿಕ್ಷಣ ಪ್ರೇಮಿಗಳು ಮಕ್ಕಳು ಉಪಸ್ಥಿತಿ ಇದ್ದರು. ಕಲ್ಲಪ್ಪ ಅವರು ನಿರೂಪಿಸಿ ವಂದಿಸಿದರು.

# ಮೇ.23 ಸಾರಿಗೆ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.17–ಜಿಲ್ಲಾ ಪ್ರಾದೇಶಿಕ ಸಾರಿಗೆ ಕಚೇರಿ ವ್ಯಾಪ್ತಿಯಲ್ಲಿರುವ ವಾಹನ ಮಾಲಿಕರಿಗೆ, ಚಾಲಕರಿಗೆ ಮತ್ತು ಸಾರಿಗೆ ಇಲಾಖೆಯ ಸೇವೆ ಪಡೆಯುತ್ತಿರುವ ಸಾರ್ವಜನಿಕರಿಗೆ ಮೇ 23 ರಂದು ಬೆಳಿಗ್ಗೆ 10 ಗಂಟೆಗೆ ಪ್ರಾದೇಶಿಕ ಸಾರಿಗೆ ಕಾರ್ಯಾಲಯದಲ್ಲಿ ಸಾರಿಗೆ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

# ಪ್ರಥಮ ಪಿ.ಯು.ಸಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳ ಆಯ್ಕೆಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 17–: ಯಾದಗಿರಿ ಜಿಲ್ಲೆಯ ಶಹಾಪೂರ ತಾಲ್ಲೂಕಿನ ಬೇವಿನಹಳ್ಳಿ ಕ್ರಾಸ್‌ನಲ್ಲಿ ಬರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜು 2025–26ನೇ ಸಾಲಿನ ಕಾಲೇಜಿಗೆ ಪ್ರಥಮ ಪಿ.ಯು.ಸಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಚನ್ನಬಸಪ್ಪ ಅವರು ತಿಳಿಸಿದ್ದಾರೆ.

ಜಿಲ್ಲೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜು ಬೇವಿನಹಳ್ಳಿ ಕ್ರಾಸ್ ಇಲ್ಲಿ ಪ್ರಥಮ ಪಿ.ಯು.ಸಿ ವಿಜ್ಞಾನ ವಿಭಾಗಕ್ಕೆ ಪಿ.ಸಿ.ಎಂ.ಬಿ ಒಟ್ಟು 80 ವಿದ್ಯಾರ್ಥಿಗಳಿಗೆ ಆಯ್ಕೆ ಮಾಡಲಾಗುವುದು. ಕ್ರೈಸ್ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಮೊದಲ ಆದ್ಯತೆ ನೀಡಿ ಎಸ್.ಎಸ್.ಎಲ್.ಸಿ ಪಾಸಾದ ಮೆರಿಟ್ ಮತ್ತು ಮೀಸಲಾತಿ ಅನ್ವಯ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ಜಿಲ್ಲಾ ಹಂತದಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಸಂಘದ ವಸತಿ ಶಾಲೆ, ಕಾಲೇಜುಗಳ ಪ್ರಥಮ ಪಿ.ಯು.ಸಿ ತರಗತಿಗೆ ದಾಖಲಾತಿಗಾಗಿ ಆನ್‌ಲೈನ್ kreis.karnataka.gov.inನಲ್ಲಿ 2025ರ ಮೇ 20ರ ಒಳಗೆ ಅರ್ಜಿಸಲ್ಲಿಸಬೇಕು.

ಆಯ್ಕೆ ಪಟ್ಟಿ ಪ್ರಕಟಣೆಯ ಸೂಚಿತ ವೇಳಾ ಪಟ್ಟಿ ಜಿಲ್ಲಾ ಹಂತದಲ್ಲಿ ತೆಗೆದುಕೊಳ್ಳಬೇಕಾದ ಕ್ರಮ ವಿವರ ಆನ್‌ಲೈನ್ ಮೂಲಕ ಅಭ್ಯರ್ಥಿಗಳಿಂದ ಸ್ವೀಕೃತಗೊಂಡ ಅರ್ಜಿಗಳನ್ವಯ ಸಂಬಂಧಿಸಿದ ವಸತಿ ಶಾಲೆ, ಕಾಲೇಜುಗಳ ಪ್ರಾಂಶುಪಾಲರು ಆಯಾ ದಿನದಂದೇ ಎಸ್‌ಎಮ್‌ಎಸ್ ಲಾಗಿನ್‌ನಲ್ಲಿ ದಾಖಲಿಸಲು ಹಾಗೂ ಈ ಪ್ರಕ್ರಿಯೆಯ 2025ರ ಮೇ 21 ರಂದು ನಡೆಯಲಿದೆ. ಜಿಲ್ಲಾ ಹಂತದಲ್ಲಿ ಮೊದಲನೇ ಸುತ್ತಿನ ಸೀಟು ಹಂಚಿಕೆ ಆಯ್ಕೆ ಪಟ್ಟಿಯನ್ನು 2025ರ ಮೇ 23 ರಂದು ಪ್ರಕಟ, ಮೊದಲನೇ ಸುತ್ತಿನ ಆಯ್ಕೆ ಪಟ್ಟಿಯ ಪ್ರಕಾರ ವಿದ್ಯಾರ್ಥಿಗಳ ದಾಖಲಾತಿ 2025ರ ಮೇ 27 ರಂದು ನಡೆಯಲಿದೆ.

ಆಯ್ಕೆಯಾದ ವಿದ್ಯಾರ್ಥಿಗಳ ಎರಡನೇ ಸುತ್ತಿನ ಅರ್ಹತಾ ಪಟ್ಟಿಯನ್ನು 2025ರ ಮೇ 29 ರಂದು ಪ್ರಕಟ, ಎರಡನೇ ಸುತ್ತಿನ ಆಯ್ಕೆ ಪಟ್ಟಿಯ ಪ್ರಕಾರ ವಿದ್ಯಾರ್ಥಿಗಳ ದಾಖಲಾತಿ 2025ರ ಮೇ 31 ರಂದು ನಡೆಯಲಿದೆ. ಮೂರನೇ ಸುತ್ತಿನ ಸೀಟು ಹಂಚಿಕೆ ಆಯ್ಕೆ ಪಟ್ಟಿಯನ್ನು 2025ರ ಜೂನ್ 2 ರಂದು ಪ್ರಕಟ, ಮೂರನೇ ಸುತ್ತಿನ ಆಯ್ಕೆ ಪಟ್ಟಿಯ ಪ್ರಕಾರ ವಿದ್ಯಾರ್ಥಿಗಳ ದಾಖಲಾತಿ 2025ರ ಜೂನ್ 5 ರಂದು ನಡೆಯಲಿದೆ. 2025ರ ಜೂನ್ 2 ರಂದು ಕಾಲೇಜುಗಳಲ್ಲಿ ಪ್ರಥಮ ಪಿ.ಯು.ಸಿ ತರಗತಿಗಳು ಪ್ರಾರಂಭ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜು ಬೇವಿನಹಳ್ಳಿ ಕ್ರಾಸ್ ಇಲ್ಲಿ ಪ್ರಥಮ ಪಿ.ಯು.ಸಿ ವಿಜ್ಞಾನ ವಿಭಾಗಕ್ಕೆ ಪಿ.ಸಿ.ಎಂ.ಬಿ ವಿದ್ಯಾರ್ಥಿಗಳು ಅರ್ಜಿಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಬೇವಿನಹಳ್ಳಿ ಕ್ರಾಸ್, ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರು ದೂ.ಸಂ.9901939936, ದ್ವಿತೀಯ ದರ್ಜೆ ಸಹಾಯಕರು ದೂ.ಸಂ.9972530390ಗೆ ಸಂಪರ್ಕಿಸಬಹುದು ಎಂದು

# ಸಂಚಾರ ಆರೋಗ್ಯ ಘಟಕದ ವಾಹನಕ್ಕೆ ಚಾಲನೆ

# ಕಾರ್ಮಿಕರ ಆರೋಗ್ಯ ರಕ್ಷಣೆ ಮುಖ್ಯ ಗುರಿ: ಶಾಸಕ ಬಸನಗೌಡ ದದ್ದಲ್



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.17–ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿರ್ದೇಶನದಂತೆ ಹಾಗೂ ಕಾರ್ಮಿಕ ಸಚಿವರಾದ ಸಂತೋಷ ಲಾಡ್ ಅವರ ಮಾರ್ಗದರ್ಶನದಲ್ಲಿ ಕಾರ್ಮಿಕರ ಹಿತರಕ್ಷಣೆಗೆ ಕ್ರಮವಹಿಸಿದ್ದು, ಕಾರ್ಮಿಕರ ಆರೋಗ್ಯ ರಕ್ಷಣೆಯನ್ನೇ ಮುಖ್ಯ ಗುರಿಯವಾಗಿಸಿಟ್ಟುಕೊಂಡು ಕಾರ್ಮಿಕರಿಗೆ ಆರೋಗ್ಯ ಸೇವೆ ಒದಗಿಸಲು ವಾಹನವನ್ನು ಲೋಕಾರ್ಪಣೆಗೊಳಿಸಲಾಗಿದೆ ಎಂದು ಪರಿಶಿಷ್ಟ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಹೇಳಿದರು.

ಮೇ.17ರ ಶನಿವಾರ ದಂದು ನಗರದ ರಾಯಚೂರು ಗ್ರಾಮೀಣ ಶಾಸಕರ ಕಚೇರಿ ಆವರಣದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಸಂಚಾರ ಆರೋಗ್ಯ ಘಟಕದ ವಾಹನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾರ್ಮಿಕರಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಅವರಿದ್ದ ಕಡೆಗೇ ಈ ವಾಹನವು ಸಂಚರಿಸಿ ಅವರಿಗೆ ಆರೋಗ್ಯ ಸೇವೆ ಒದಗಿಸಲಿದೆ. ಸರ್ಕಾರದ ಈ ಯೋಜನೆಯ ಸೌಲಭ್ಯವನ್ನು ರಾಯಚೂರು ಗ್ರಾಮೀಣ ಕ್ಷೇತ್ರದ ಎಲ್ಲ ಕಾರ್ಮಿಕರು ಸದುಪಯೋಗಪಡಿಸಿಕೊಳ್ಳಬೇಕೆಂದರು.

ಈ ವೇಳೆ ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿ ಆರತಿ ಅವರು ಮಾತನಾಡಿ, ಜಿಲ್ಲೆಯ ಕಟ್ಟಡ ನಿರ್ಮಾಣ ಕಾರ್ಮಿಕರನ್ನು ಅವರಿರುವ ಸ್ಥಳಕ್ಕೇ ತೆರಳಿ ಉಚಿತವಾಗಿ ಆರೋಗ್ಯ ತಪಾಸಣೆಗೆ ಒಳಪಡಿಸುವುದು, ಚಿಕಿತ್ಸೆ ಹಾಗೂ ಸಲಹೆ ನೀಡಲು ಮೊದಲಾದ ಸೇವೆ ಒದಗಿಸಲು ಜಿಲ್ಲೆಯಲ್ಲಿ 3 ಸಂಚಾರಿ ಆರೋಗ್ಯ ಘಟಕಗಳನ್ನು ಸಜ್ಜುಗೊಳಿಸಲಾಗಿದೆ ಎಂದರು.

ಕಾರ್ಮಿಕ ಇಲಾಖೆ ಮತ್ತು ಕಟ್ಟಡ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಸಹಯೋಗದಲ್ಲಿ ರೂಪುಗೊಂಡಿರುವ ಈ ಘಟಕಗಳಲ್ಲಿ ವಿವಿಧ ತಪಾಸಣೆಗಳು, ಹೈಟೆಕ್ ಆರೋಗ್ಯ ಸೌಲಭ್ಯ ವ್ಯವಸ್ಥೆಯಿದ್ದು, ಒಂದು ಕ್ಲಿನಿಕ್‌ನಲ್ಲಿ ಹೊರರೋಗಿಗಳಿಗೆ ದೊರೆಯುವ ಎಲ್ಲ ಸೌಲಭ್ಯಗಳೂ ಇದರಲ್ಲಿ ಸಿಗಲಿವೆ ಎಂದರು.

ಕಾರ್ಮಿಕ ಕಾರ್ಡ್ ಹೊಂದಿರುವ ಜಿಲ್ಲೆಯ 1 ಲಕ್ಷದ 13 ಸಾವಿರ 283 ಕಾರ್ಮಿಕರು ಹಾಗೂ ಅವರ ಕುಟುಂಬದವರಿಗೂ ಆರೋಗ್ಯ ಸೇವೆ ದೊರೆಯಲಿದೆ ಎಂದು ತಿಳಿಸಿದರು.

ಘಟಕದಲ್ಲಿ 13 ಉಪಕರಣಗಳು: ವೈದ್ಯಕೀಯ ಉಪಕರಣಗಳು, ಪ್ರಯೋಗಾಲಯದ ಉಪಕರಣಗಳು ಹಾಗೂ ವಿವಿಧ ವೈದ್ಯಕೀಯ ಬಳಕೆ ವಸ್ತುಗಳು ಸೇರಿದಂತೆ ಒಟ್ಟು 13 ರೀತಿಯ ವೈದ್ಯಕೀಯ ಉಪಕರಣಗಳನ್ನು ಅಳವಡಿಸಲಾಗಿದೆ. ಸಿಬ್ಬಂದಿಗೆ ಬಯೊಮೆಟ್ರಿಕ್ ಹಾಜರಾತಿ ವ್ಯವಸ್ಥೆಯೂ ಇದೆ. ಜಿಪಿಎಸ್ ವ್ಯವಸ್ಥೆಯೂ ಲಭ್ಯವಿದ್ದು, ತೆರಳುವ ಸ್ಥಳ, ಕಾರ್ಯಾಚರಣೆ ಸಮಯ, ಎಲ್ಲಿ ತಂಗುತ್ತದೆ ಎಂಬ ಎಲ್ಲ ಮಾಹಿತಿಯೂ ಕಚೇರಿಗೆ ತಲುಪಲಿದೆ. ಒಪ್ಪಂದ ಮಾಡಿಕೊಂಡಿರುವ ಖಾಸಗಿ ಆಸ್ಪತ್ರೆಯು ಕಾರ್ಯಾಚರಣೆಯನ್ನು ನಿರ್ವಹಿಸುತ್ತದೆ ಎಂದು ಮಾಹಿತಿ ನೀಡಿದರು.

ಕಾರ್ಯಾಚರಣೆಗೆ 6 ಸಿಬ್ಬಂದಿ: ಪ್ರತಿ ಸಂಚಾರಿ ಆರೋಗ್ಯ ಘಟಕದಲ್ಲಿ ಒಬ್ಬರು ಎಂಬಿಬಿಎಸ್ ವೈದ್ಯಕೀಯ ಅಧಿಕಾರಿ, ಇಬ್ಬರು ನರ್ಸ್, ಒಬ್ಬರು ಫಾರ್ಮಸಿಸ್ಟ್ ಅಥವಾ ಆಡಳಿತ ಸಹಾಯಕರು, ತಲಾ ಒಬ್ಬ ಪ್ರಯೋಗಾಲಯ ತಜ್ಞರು ಚಾಲಕ ಅಥವಾ ಸಹಾಯಕ ಸೇರಿದಂತೆ 6 ಮಂದಿ ಕಾರ್ಯನಿರ್ವಹಿಸುವರು. ಜಿಲ್ಲೆಯಲ್ಲಿನ ವಾರ್ಡ್ ಹೋಬಳಿ ಗ್ರಾಮ ಪಂಚಾಯಿತಿ ತಾಲ್ಲೂಕು ಪಂಚಾಯಿತಿ ಮಟ್ಟದಲ್ಲಿ ನೋಂದಾಯಿಸಿದ ಕಾರ್ಮಿಕರ ಪಟ್ಟಿಯನ್ವಯ ಘಟಕಗಳನ್ನು ನಿಲುಗಡೆ ಮಾಡಬೇಕಾದ ಸ್ಥಳವನ್ನು ನಿಗದಿಪಡಿಸಲಾಗುತ್ತದೆ ಎಂದು ತಿಳಿಸಿದರು.

ನಗರ ಶಾಸಕರಿಂದಲೂ ಚಾಲನೆ: ಇದಕ್ಕೂ ಮುಂಚೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಸಂಚಾರ ಆರೋಗ್ಯ ಘಟಕದ ವಾಹನಕ್ಕೆ ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್ ಅವರು ತಮ್ಮ ಗೃಹಕಚೇರಿಯಲ್ಲಿ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ವೃತ್ತದ 1ನೇ ಕಾರ್ಮಿಕ ನಿರೀಕ್ಷಕರಾದ ಮಹ್ಮದ್ ಉಮರ್ ಅಬ್ದುಲ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ, ಕಾರ್ಮಿಕ ಇಲಾಖೆಯ ಸಿಬ್ಬಂದಿಗಳಾದ ನಾಗರಾಜ, ಡಾ.ತನ್ವೀರ್, ಕೌಶಿಕ್ ಸೇರಿದಂತೆ ಇತರರು ಇದ್ದರು.

### ತೆಲಂಗಾಣ ಗಡಿಭಾಗದ ಗ್ರಾಮಗಳಲ್ಲಿ ಗುಣಮಟ್ಟದ ಹತ್ತಿ

# ಬಿತ್ತನೆ ಬೀಜಗಳ ಆಯ್ಕೆ ಮತ್ತು ಬೀಜ ಖರೀದಿಸುವಾಗ ವಹಿಸಬೇಕಾದ ಮುಂಜಾಗ್ರತೆ ಕ್ರಮ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 17, : ಗುಣಮಟ್ಟದ ಹತ್ತಿ ಬೀಜಗಳನ್ನು ಬಿತ್ತನೆಗೆ ಬಳಸಿ ಅಧಿಕೃತ ಮಾರಾಟಗಾರರಿಂದ ಬೀಜಗಳನ್ನು ಖರೀದಿಸಿ ಮತ್ತು ಕಡ್ಡಾಯವಾಗಿ ರಶೀದಿಯನ್ನು ಪಡೆಯಿರಿ. ಅನಧಿಕೃತ ವ್ಯಕ್ತಿಗಳು ಬೀಜ ಮಾರಾಟ ಮಾಡಿದರೆ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ಒದಗಿಸಿ ಮತ್ತು ಭತ್ತ ಕಟಾವು ನಂತರ ಭತ್ತದ ಹುಲ್ಲನ್ನು ಸುಡಬೇಡಿ ಮಣ್ಣಿನ ಫಲವತ್ತೆಯನ್ನು ಕಾಪಾಡಿ ಎಂದು ಯಾದಗಿರಿ ವಿಷಯ ತಜ್ಞ, ಜಂಟಿ ಕೃಷಿ ನಿರ್ದೇಶಕರ ಕಛೇರಿ ಸಹಾಯಕ ಕೃಷಿ ನಿರ್ದೇಶಕರು ರಾಜಕುಮಾರ ಅವರು ಹೇಳಿದರು.

ಯಾದಗಿರಿ ಜಿಲ್ಲೆಯ ಕೊಂಕಲ್ ಹೋಬಳಿಯ ತೆಲಂಗಾಣ ಗಡಿಭಾಗದ ಗ್ರಾಮಗಳಾದ ನಸಲವಾಯಿ ಮತ್ತು ಗುಂಜುನೂರು ಗ್ರಾಮಗಳಲ್ಲಿ ಉತ್ತಮ ಗುಣಮಟ್ಟದ ಹತ್ತಿ ಬಿತ್ತನೆ ಬೀಜಗಳ ಆಯ್ಕೆ ಮತ್ತು ಹತ್ತಿ ಬೀಜಗಳನ್ನು ಖರೀದಿಸುವಾಗ ವಹಿಸಬೇಕಾದ ಮುಂಜಾಗೃತ ಕ್ರಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗುಣಮಟ್ಟದ ಹತ್ತಿ ಬೀಜಗಳನ್ನು ಬಿತ್ತನೆಗೆ ಬಳಸಿ ಅಧಿಕೃತ ಮಾರಾಟಗಾರರಿಂದ ಬೀಜಗಳನ್ನು ಖರೀದಿಸಿ ಮತ್ತು ಕಡ್ಡಾಯವಾಗಿ ರಶೀದಿಯನ್ನು ಪಡೆಯಿರಿ, ಅನಧಿಕೃತ ವ್ಯಕ್ತಿಗಳು ಬೀಜ ಮಾರಾಟ ಮಾಡಿದರೆ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ಒದಗಿಸಿ ಮತ್ತು ಭತ್ತ ಕಟಾವು ನಂತರ ಭತ್ತದ ಹುಲ್ಲನ್ನು ಸುಡಬೇಡಿ ಮಣ್ಣಿನ ಫಲವತ್ತೆಯನ್ನು ಕಾಪಾಡಿ ಎಂದು ರೈತರಿಗೆ ತಿಳಿಸಿದರು.

ಕೋಂಕಲ್ ರೈತ ಸಂಪರ್ಕ ಕೇಂದ್ರ ಕೃಷಿ ಅಧಿಕಾರಿಗಳು ಶ್ರೀ ಮಹಿಪಾಲರೆಡ್ಡಿ ಅವರು ಮಾತನಾಡಿದರು, ಕೃಷಿ ಇಲಾಖೆಯಿಂದ ಸಿಗುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿ ಯೋಜನೆಗಳ ಸದುಪಯೋಗವನ್ನು ಪಡೆದುಕೊಳ್ಳಬೇಕು ರೈತರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗುಂಜುನೂರು ಗ್ರಾಮಪಂಚಾಯಿತಿ ಸದಸ್ಯರಾದ ಸಂತೋಷ್, ಗ್ರಾಮ ಸಹಾಯಕರಾದ ಗುಂಜಲಪ್ಪ, ನಸಲವಾಯಿ ಗ್ರಾಮ ಸಹಾಯಕರಾದ ಗೌರಿಶ ರೈತರಾದ ಶ್ರೀಕಾಂತ, ಬಸಪ್ಪ, ರಾಜು ರೆಡ್ಡಿ ಇನ್ನಿತರರು ಉಪಸ್ಥಿತರಿದ್ದರು.

# ರಾಯಚೂರು; ಪ್ರಥಮ ದರ್ಜೆ ಕಾಲೇಜಿನಲ್ಲಿ ವಿವಿಧ ವಿಭಾಗಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.17–: ಇಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಸ್ನಾತಕ ಪದವಿಗಾಗಿ ವಿವಿಧ ವಿಭಾಗಗಳಿಗೆ ಪ್ರವೇಶಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕಾಲೇಜಿನಲ್ಲಿ ಬಿಎ, ಬಿಕಾಂ, ಬಿಎಸ್ಸಿ ಹಾಗೂ ಬಿಸಿಎ ಪದವಿ ಕೋರ್ಸುಗಳಿಗೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಎಲ್ಲಾ ವಿಭಾಗದಲ್ಲಿ ಪರಿಣಿತ ಖಾಯಂ ಪ್ರಾಧ್ಯಾಪಕರು ಹಾಗೂ ಸಹಪ್ರಾಧ್ಯಾಯಾಪಕರುಗಳು ಹಾಗೂ ಅತಿಥಿ ಉಪನ್ಯಾಸಕರಿದ್ದು, ಬಿಎಸ್ಸಿ, ಬಿಸಿಎ ವಿಭಾಗದಲ್ಲಿ ವಿಷಯವಾರು ಪ್ರಯೋಗಾಲಯಗಳಿದ್ದು, ಗುಣಮಟ್ಟದ ಉನ್ನತ ವ್ಯಾಸಾಂಗದ ಆಸಕ್ತಿ ಇರುವವರು ಇದರ ಸದುಪಯೋಗ ಪಡೆದುಕೊಳ್ಳಬಹುದು ಎಂದು ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ರಾಜ್ಯ ಗಡಿ ಭಾಗದಲ್ಲಿ ಬಸ್ ಜೀಪ್ ಮುಖಾಮುಖಿ ಡಿಕ್ಕಿ ಇಬ್ಬರು ಸಾವು

ಮಲ್ಲಮ್ಮ ನುಡಿ ವಾರ್ತೆ



ನಾರಾಯಣಪೇಟೆ/ಗುರುಮಠಕಲ್: ಗುರುಮಠಕಲ್ ಪಟ್ಟಣದಿಂದ ಸುಮಾರು 15 ಕಿಲೋ ಮೀಟರ್ ದೂರದಲ್ಲಿರುವ ನೆರೆಯ ತೆಲಂಗಾಣ ರಾಜ್ಯ ಗಡಿಯಲ್ಲಿರುವ ಎಕ್ಲಾಸ್‌ಪುರ ಗ್ರಾಮದ ಬಳಿ ಇಂದು ಶನಿವಾರ ಮಧ್ಯಾಹ್ನ ರಸ್ತೆ ಅಪಘಾತ ಸಂಭವಿಸಿದೆ. ನಾರಾಯಣಪೇಟೆ ಜಿಲ್ಲೆಯ ಸಿರಿಶಾ (10) ಮತ್ತು ಗುರುಮಠಕಲ ತಾಲೂಕ ಶಿವಪುರದ ಹನುಮಂತಿ (50) ಅಪಘಾತದಲ್ಲಿ ಮೃತಪಟ್ಟಿದ್ದಾರೆ.

ನಾರಾಯಣಪೇಟೆಯಿಂದ ಕರ್ನಾಟಕಕ್ಕೆ ಬರುತ್ತಿದ್ದ ಕರ್ನಾಟಕ ಕೆಆರ್‌ಟಿಸಿ ಬಸ್, ತಿರುವಿನಲ್ಲಿ ಸುಮಾರು 6 ಪ್ರಯಾಣಿಕರೊಂದಿಗೆ ಗಾಜರಕೊಟ ನಿಂದ ಬರುತ್ತಿದ್ದ ಜೀಪಿಗೆ ಡಿಕ್ಕಿಹೊಡೆದ ಪರಿಣಾಮ ಜೀಪಿನಲ್ಲಿದ್ದ ಸಿರಿಷಾ ಮತ್ತು ಹನುಮಂತಿ ಸಾವನ್ನಪ್ಪಿದ್ದಾರೆ.

ನಾರಾಯಣಪೇಟೆ ಪೊಲೀಸ ತಂಡ ಅಪಘಾತದ ಸ್ಥಳಕ್ಕೆ ಧಾವಿಸಿ, ಅಪಘಾತಕ್ಕೆ ಕಾರಣವನ್ನು ತನಿಖೆ ನಡೆಸುತ್ತಿದ್ದಾರೆ. ಅಪಘಾತದಲ್ಲಿ ಮೃತಪಟ್ಟ ಇಬ್ಬರ ಶವಗಳನ್ನು ಮರಣೋತ್ತರ ಪರೀಕ್ಷೆಗಾಗಿ ನಾರಾಯಣಪೇಟೆ ಜಿಲ್ಲಾ ಜನರಲ್ ಆಸ್ಪತ್ರೆಯ ಶವಾಗಾರಕ್ಕೆ ಕೊಂಡೊಯ್ಯಲಾಗಿದೆ.

# ರಾಯಚೂರ ಜಿಲ್ಲೆಯಲ್ಲಿ ಜೂನ್ 30ರವರೆಗೆ ಬುಡಕಟ್ಟು ಹೆಮ್ಮೆಯ ವರ್ಷ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ



ರಾಯಚೂರು ಮೇ.17– ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಮಂತ್ರಾಲಯದಿಂದ ಧರ್ತಿ ಆಬಾ ಬುಡಕಟ್ಟು ಗ್ರಾಮ ಅಭಿವೃದ್ಧಿ ಅಭಿಯಾನ A(DA-JAGUA) ಯೋಜನೆಯಡಿ ಬುಡಕಟ್ಟು ಹೆಮ್ಮೆಯ ವರ್ಷ–2025 (JANJATIYAGAURAV VARSH) ಆಚರಿಸಲು ದೇಶಾದ್ಯಂತ ಜೂನ್ 30ರವರೆಗೆ ಅಭಿಯಾನ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ವಿವಿಧ ಬಗೆಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಬುಡಕಟ್ಟು ಹೆಮ್ಮೆಯ ವರ್ಷ–2025ರ ಆಚರಣೆ ಸಂಬಂಧ ಜಿಲ್ಲೆಯಾದ್ಯಂತ ಈಗಾಗಲೇ ಗುರುತಿಸಲಾದ ಪರಿಶಿಷ್ಟ ಪಂಗಡದವರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಗ್ರಾಮಗಳಲ್ಲಿ ಸಂಬಂಧಪಟ್ಟ ಇಲಾಖೆಗಳ ಸಹಯೋಗದೊಂದಿಗೆ ಆಧಾರ್ ಕಾರ್ಡ್, ಪಡಿತರ ಚೀಟಿ, ಆಯುಷ್ಮಾನ್ ಭಾರತ ಕಾರ್ಡ್ (ಪಿಎಮ್–ಜೆಎವೈ), ಜಾತಿ ಪ್ರಮಾಣ ಪತ್ರ, ಪಿಎಮ್ ಕಿಸಾನ್, ಜನ್ ಧನ್ ಅಕೌಂಟ್ ಸೇರಿದಂತೆ ಕುಡಗೋಲು ಕಣ ರೋಗದ (Sickle cell) ಬಗ್ಗೆ ಮತ್ತು ಸಂಬಂಧಿತ ಪರೀಕ್ಷೆಯ ಬಗ್ಗೆ ಅರಿವು ಮೂಡಿಸುವ ಶಿಬಿರಗಳನ್ನು ಸಿಎಸ್‌ಸಿಎಸ್ ಮುಂಚೂಣಿ ಕಾರ್ಯಕರ್ತರು ಮತ್ತು ವಿವಿಧ ಇಲಾಖೆಗಳ ಒಮ್ಮುಖದ ಸಕ್ರಿಯ ಬೆಂಬಲದೊಂದಿಗೆ ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.17 : ಇಲ್ಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಇಲಾಖೆಯ ವೆಬ್‌ಸೈಟ್ ವಿಳಾಸ: https://shp.karnataka.gov.in/bcwd ಮತ್ತು ವಿವರ, ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ: https://bcwd.karnataka.gov.in ನ್ನು ನೋಡಬಹುದು. ಅಲ್ಲದೆ ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ www.bcwdhelpline@gmail.com ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ ಅಥವಾ ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 08532–295996, 8050770004, 805770005ಗೆ ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕಾಯುಕ್ತ ಪೊಲೀಸರಿಂದ ಮೇ.21ರಂದು ಸಾರ್ವಜನಿಕರ ಕುಂದುಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.17 – ಜಿಲ್ಲಾ ಲೋಕಾಯುಕ್ತ ಪೊಲೀಸರ ವತಿಯಿಂದ ಮೇ.21 ಬುಧವಾರ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಜಿಲ್ಲೆಯ ಸಿಂಧನೂರು ತಹಶೀಲ್ದಾರ್ ಕಚೇರಿಯಲ್ಲಿ ಸಭಾಂಗಣದಲ್ಲಿ ಸಾರ್ವಜನಿಕರ ಕುಂದುಕೊರತೆ ಹಾಗೂ ಅಹವಾಲುಗಳ ಸಭೆಯಲ್ಲಿ ಆಯೋಜಿಸಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳ್ಳಿಸಬೇಕೆಂದು ಕರ್ನಾಟಕ ಲೋಕಾಯುಕ್ತ ಪೋಲೀಸ್ ಅಧೀಕ್ಷಕರಾದ ಎಂ.ಎನ್.ಶಶಿಧರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಭೇಟಿ ಮಾಡಿ ಮನವಿ ನೀಡಿದ ಶಾಸಕ ಕಂದಕೂರು

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ: ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಗುಣಮಟ್ಟ ಸುಧಾರಣೆಗಾಗಿ ಶಿಕ್ಷಕರ ಬಡ್ತಿ ಹಾಗೂ ನೇಮಕ ಮತ್ತು ಹೊಸ ಕಂದಾಯ ತಾಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಆರಂಭಿಸುವಂತೆಯೇ ಗುರುಮಠಕಲ್ ಜೆಡಿಎಸ್ ಶಾಸಕ ಶರಣಗೌಡ ಕಂದಕೂರು ರಾಜ್ಯದ ಶಾಲಾ ಮತ್ತು ಸಾಕ್ಷರತಾ ಶಿಕ್ಷಣ ಇಲಾಖೆ ಸಚಿವ ಮಧು ಬಂಗಾರಪ್ಪ ಅವರಿಗೆ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿ ಶನಿವಾರ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿರುವ ಶಾಸಕರು, ಕೆಕೆ ಭಾಗದ ಶೈಕ್ಷಣಿಕ ಗುಣಮಟ್ಟ ಕುಸಿಯಲು ಹಲವಾರು ಕಾರಣಗಳಲ್ಲಿ ಪ್ರಮುಖವಾಗಿ ಶಿಕ್ಷಕರ ಕೊರತೆ–ಯೂ ಒಂದು.

ಕೆಕೆ ಭಾಗದ ಸರ್ಕಾರಿ ಪ್ರೌಢ ಶಾಲೆಗಳಿಗೆ ಮಂಜೂರು ಆಗಿರುವ 11793 ಹುದ್ದೆಗಳಲ್ಲಿ 4107 ಹುದ್ದೆಗಳು ಖಾಲಿ ಇವೆ. ಅಲ್ಲದೆ, ಈ ಏಳು ಜಿಲ್ಲೆಗಳ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮಂಜುರಾಗಿರುವ 45431 ಹುದ್ದೆಗಳಲ್ಲಿ 17274 ಹುದ್ದೆಗಳು ಅಂದರೇ ಶೇ. 40 ರಷ್ಟು ಹುದ್ದೆಗಳು ಖಾಲಿ ಇವೆ. ಯಾದಗಿರಿ ಜಿಲ್ಲೆಯಲ್ಲಿಯೇ ಶೇ. 50ರಷ್ಟು ಹುದ್ದೆಗಳು ಖಾಲಿ ಇವೆ. ಹೀಗಾದರೇ ಗುಣಮಟ್ಟದ ಶಿಕ್ಷಣ ಮತ್ತು ಉತ್ತಮ ಫಲಿತಾಂಶ ನಿರೀಕ್ಷಿಸುವುದು ಮರಳುಗಾಡಿನಲ್ಲಿ ನೀರು ಬಯಸಿದಂತೆಯೇ ಸರಿ ಎಂದು ಅವರು ಮನವಿಯಲ್ಲಿ ವಿವರಿಸಿದ್ದಾರೆ.

ಈ ನಿಟ್ಟಿನಲ್ಲಿ ಕೆಕೆ ಭಾಗದ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಇಲಾಖೆ ಅಪರ ಆಯುಕ್ತರು ಕೆಕೆಆರ್ ಡಿಬಿಯಿಂದ ವಿವಿಧ ಕಾರ್ಯಕ್ರಮಗಳು ಹಮ್ಮಿಕೊಳ್ಳುವ ಸುಧಾರಣೆಗೆ ಯತ್ನಿಸಿದ್ದಾರೆ. ಈ ಭಾಗವಾಗಿ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಬಡ್ತಿಗಾಗಿ ಮೀಸಲಿರುವ ಹುದ್ದೆಗಳನ್ನು ಅರ್ಹ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಂದ ಭರ್ತಿ ಮಾಡಲು ವಿಭಾಗದ ಎಲ್ಲ ಉಪನಿರ್ದೇಶಕರಿಗೆ ಪತ್ರ ಬರೆದು ಕ್ರಮವಹಿಸಲು ಸೂಚಿಸಿದ್ದರು, ಆದರೇ ಇಲಾಖೆ ಆಯುಕ್ತರು ಕಳೆದ ಏ.16 ರಂದು ಬರೆದ ಪತ್ರದಲ್ಲಿ ಬಡ್ತಿ ವಿಷಯ ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇರುವುದರಿಂದ ತಡೆಹಿಡಿಯುವಂತೆಯೇ ಅಪರ ಆಯುಕ್ತರಿಗೆ ನಿರ್ದೇಶಿಸಿದ್ದಾರೆ.

ಕಾರಣ ಕೆಕೆ ಭಾಗದಲ್ಲಿ 371(ಜೆ) ಕಲಂ ಜಾರಿಯಲ್ಲಿರುವುದರಿಂದ ಇದು ವಿಶೇಷ ಪ್ರಕರಣವೆಂದು ಭಾವಿಸಿ ಬಡ್ತಿ ಪ್ರಕ್ರಿಯೆಯನ್ನು ಮುಂದುವರೆಸುವಲು ಅನುಮತಿ ನೀಡುವಂತೆಯೇ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಬೇಕೆಂದು ಶಾಸಕರು ಸಚಿವರಿಗೆ ಸಲ್ಲಿಸಿದ ಮನವಿಯಲ್ಲಿ ಸುಧಿರ್ಘವಾಗಿ ವಿವರಿಸಿದ್ದಾರೆ.

ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾದ 3313 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ಕೋರಿ ಈಗಾಗಲೇ ಅಪರ ಆಯುಕ್ತರು ಕಳೆದ ಮಾ.14 ರಂದು ಸರ್ಕಾರಕ್ಕೆ ಪತ್ರ ಬರೆದಿದ್ದು, ಅದನ್ನ ಸಹ ಇತ್ಯರ್ಥಗೊಳಿಸಬೇಕೆಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡುವಂತೆಯೇ ಸಚಿವರನ್ನು ಶಾಸಕ ಕಂದಕೂರು ಒತ್ತಾಯಿಸಿದ್ದಾರೆ.

ಶೈಕ್ಷಣಿಕ ಕಾರ್ಯ ಚಟುವಟಿಕೆಗಳು ಸರಳವಾಗಿ ಮತ್ತು ತ್ವರಿತಗತಿಯಲ್ಲಿ ನಡೆಯಲು ಗುರುಮಠಕಲ್ ಹೊಸ ಕಂದಾಯ ತಾಲೂಕಿನಲ್ಲಿ ನೂತನ ಬಿಇಓ ಕಚೇರಿ ಪ್ರಾರಂಭಿಸಲು ಸಂಬಂಧಪಟ್ಟ ಉನ್ನತ ಅಧಿಕಾರಿಗಳಿಗೆ ಸೂಚಿಸಬೇಕೆಂದು ಶಾಸಕರು ಮನವಿಯಲ್ಲಿ ಒತ್ತಾಯಿಸಿದ್ದಾರೆ.

> ಕೆಕೆ ಭಾಗದ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಒತ್ತು ನೀಡಲಿ.
>
> ಜಿಲ್ಲೆಯಲ್ಲಿ ಕಳೆದ ಅನೇಕ ವರ್ಷಗಳಿಂದ ಶಿಕ್ಷಣದ ಗುಣಮಟ್ಟ ಕುಸಿಯುತ್ತಿದೆ. ಇದಕ್ಕೆ ಹಲವಾರು ಕಾರಣಗಳು ಇವೆ. ಇದರಿಂದಗಾಗಿ ಫಲಿತಾಂಶದಲ್ಲಿ ನಾವು ಕೊನೆ ಸ್ಥಾನದಲ್ಲಿ ಇದ್ದೆವೆ. ಇದಕ್ಕೆ ನಿಖರ ಕಾರಣ ಹುಡುಕಿ ಅಗತ್ಯ ಸೌಲಭ್ಯಗಳು ನೀಡಬೇಕೆಂಬ ನಿಟ್ಟಿನಲ್ಲಿ ಇಂದು ಶಿಕ್ಷಣ ಸಚಿವರಿಗೆ ಭೇಟಿ ಮಾಡಿ ಮನವಿ ಸಲ್ಲಿಸಿರುವೆ.
>
> –ಶರಣಗೌಡ ಕಂದಕೂರು
>
> ಶಾಸಕರು, ಗುರುಮಠಕಲ್ ಮತಕ್ಷೇತ್ರ.

# ಮೇ 18 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ಮೇ 17–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1ರ ವ್ಯಾಪ್ತಿಗೆ ಬರುವ 110/11ಕೆವಿ ಸೌತ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳುತ್ತಿರುವುದರಿಂದ ಮೇ 18 ರಂದು ಬೆಳಿಗ್ಗೆ 07 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಎಫ್–23 ಮತ್ತು ಎಫ್–24 ರ ವ್ಯಾಪ್ತಿಯ ಹೆಚ್.ಆರ್.ಗವಿಯಪ್ಪ ವೃತ್ತ, ತೇರು ಬೀದಿ, ಜೈನ್ ಮಾರ್ಕೆಟ್, ಕಾಳಮ್ಮ ರಸ್ತೆ, ಲಾರಿ ಟರ್ಮಿನಲ್, ರಂಗ ಮಂದಿರ, ಹೊಸ ಬಸ್ ನಿಲ್ದಾಣ, ಬಂಡಿಮೊಟ್, ಗೊಲ್ಲರಹಟ್ಟಿ, ಮಾರುತಿ ಕಾಲೋನಿ, ಬಾಪೂಜಿ ನಗರ, ಕುರಿ ಕಮೇಲ, ಕಮೇಲ ರಸ್ತೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂನಿಂದ ಮೇ 19 ರಂದು ಗ್ರಾಹಕರ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 17–ಇಲ್ಲಿನ ಜೆಸ್ಕಾಂ ಇಲಾಖೆಯಿಂದ ಜಿಲ್ಲೆಯ ಜೆಸ್ಕಾಂ ಉಪ–ವಿಭಾಗ–2ರ ಕಚೇರಿಯಲ್ಲಿ ಗ್ರಾಹಕರ ಸಂವಾದ ಸಭೆಯನ್ನು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಅಧ್ಯಕ್ಷತೆಯಲ್ಲಿ ಮೇ 19 ರಂದು ಬೆಳಗ್ಗೆ 11 ರಿಂದ 1ರವರೆಗೆ ಏರ್ಪಡಿಸಲಾಗಿದೆ. ಈ ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಹಾಜರಾಗಿ ಕುಂದು ಕೊರತೆಗಳನ್ನು ನಿವಾರಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ–ವಿಭಾಗ–2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೆ ಸಂಪರ್ಕಿಸಿರಿ: 9449732000

# ಮೆಣಸಿನಕಾಯಿ ಬೆಳೆಗಾರರು, ನರ್ಸರಿ ಮಾಲೀಕರು ಸೂಕ್ತ ಕ್ರಮ ಅನುಸರಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ17- ಕುರುಗೋಡು ತಾಲ್ಲೂಕಿನ ಮೆಣಸಿನಕಾಯಿ ಬೆಳೆಗಾರರು ಹಾಗೂ ನರ್ಸರಿ ಮಾಲೀಕರುಉತ್ತಮಬೆಳೆಪಡೆಯಲು ಸೂಕ್ತ ಕ್ರಮ ಅನುಸರಿಸಬೇಕು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ನರ್ಸರಿ ಮಾಲೀಕರು ತಮ್ಮ ನರ್ಸರಿ ಚಟುವಟಿಕೆಗಳ ನಿಯಮಬದ್ಧಗೊಳಿಸುವನಿಟ್ಟಿನಲ್ಲಿ ಕಡ್ಡಾಯವಾಗಿ ಜಿ.ಎಸ್.ಟಿ ನೋಂದಾಯಿಸಿಕೊಳ್ಳಬೇಕು. ನರ್ಸರಿಜಾಗಗುತ್ತಿಗೆಪಡೆದಿದ್ದಲ್ಲಿ ನಿಯಾಮನುಸಾರ ಒಡಂಬಡಿಕೆ ಮಾಡಿಸಿಕೊಳ್ಳಬೇಕು. ನರ್ಸರಿ ಮಾಲೀಕರು ತಮ್ಮ ನರ್ಸರಿ ಮುಂಭಾಗ ನರ್ಸರಿಯ ಹೆಸರು ಇರುವ ನಾಮ ಫಲಕ ಅಳವಡಿಸುವುದು ಕಡ್ಡಾಯವಾಗಿದೆ ಎಂದು ಹೇಳಿದ್ದಾರೆ.

ರೈತರಿಗೆ ಉತ್ತಮ ಗುಣಮಟ್ಟಸಸಿಗಳನ್ನುನೀಡಲು ಅಳವಡಿಸಿಕೊಳ್ಳಬೇಕಾದ ವೈಜ್ಞಾನಿಕ ನರ್ಸರಿ ಕ್ರಮಗಳಾದ ಕೋಕೋಪಿಟ್ ಬಳಕೆ, ತರಕಾರಿ ನರ್ಸರಿಗಳಲ್ಲಿ ಕೀಟ ನಿರೋಧಕ ಬಲೆಗಳ ಬಳಕೆಯ ಬಗ್ಗೆ ಹಾಗೂ ಬೀಜೋಪಚಾರಕುರಿತುಕಟ್ಟುನಿಟ್ಟಾಗಿ ಅಳವಡಿಸಿಕೊಳ್ಳಬೇಕು. ಪ್ರತಿ ಸಸಿಗೆ ರೂ.45ಪೈಸೆದರದಲ್ಲಿಕಡ್ಡಾಯವಾಗಿ ಮಾರಾಟ ಮಾಡಬೇಕು. ನಿಗಧಿತ ಬೆಲೆಗಿಂತ ಅಧಿಕ ಹಣ ಪಡೆದರೆ ಹಾಗೂ ನಿಯಮಗಳ ಪಾಲನೆ ಮಾಡಿದಲ್ಲಿ ಕಾನೂನು ಕ್ರಮ ಕೈಗೊಳಲಾಗುವುದು ಎಂದು ತಿಳಿಸಿದ್ದಾರೆ.

ಮೆಣಸಿನಕಾಯಿ ಬೆಳೆಗಾರರು ಕಡ್ಡಾಯವಾಗಿ ನರ್ಸರಿ ಮೆಣಸಿನಕಾಯಿ ಸಸಿಗಳನ್ನು ಜಿ.ಎಸ್.ಟಿನೋಂದಣಿಯಾಗಿರುವ ನರ್ಸರಿಗಳಿಂದಲೇ ಖರೀದಿಸಿ, ಬಿಲ್ಲನ್ನು ಪಹಣಿಯಲ್ಲಿರುವ ರೈತ ಹೆಸರಿಗೆಪಡೆದುನಾಟಿಮಾಡಬೇಕು ಹಾಗೂ ಪಡೆದಂತಹ ಬಿಲ್ಲನ್ನು ಬೆಳೆ ಮಾರಾಟ ಆಗುವವರೆಗೂ ಭದ್ರವಾಗಿ ಇಟ್ಟುಕೊಳ್ಳಬೇಕು.

ನರ್ಸರಿಗಳಲ್ಲಿ ಮಾಲೀಕರು ತಾವು ಉಪಯೋಗಿಸುವ ಬೀಜ, ಗೊಬ್ಬರ ಮತ್ತು ಕೀಟನಾಶಕಗಳ ವಿವರಗಳನ್ನು ಕಡ್ಡಾಯವಾಗಿ ವಹಿಯಲ್ಲಿ ನಮೂದಿಸಬೇಕು. ರೈತರಿಂದ ಬೀಜ ಪಡೆದಿರುವ ಮತ್ತು ಸಸಿಗಳನ್ನು ವಿತರಿಸಿದ ದಿನಾಂಕಗಳ ವಹಿ ಸಹ ನಿರ್ವಹಿಸಬೇಕು ಎಂದು ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಡುವಲಕೊಪ್ಪ-ನರೇಗಾ ಕಾಮಗಾರಿ ಸ್ಥಳದಲ್ಲಿ ಶೈಕ್ಷಣಿಕ ಜಾಗೃತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಷ್ಟಗಿ ತಾಲೂಕಿನ ಕೇಸೂರು ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ನಡುವಲಕೊಪ್ಪದಲ್ಲಿ ನರೇಗಾ ಕಾಮಗಾರಿ ನಡೆಯುತ್ತಿದ್ದ ಸ್ಥಳದಲ್ಲಿ ಕುಷ್ಟಗಿಯ ಜನಜಾಗೃತಿ ಕಲಾರಂಗ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ 2023-24ನೇ ಸಾಲಿನ ಸಂಘ-ಸಂಸ್ಥೆಗಳ ಧನಸಹಾಯ ಯೋಜನೆಯ ಅಡಿಯಲ್ಲಿ ವೈವಿಧ್ಯಮಯ ಸಾಂಸ್ಕೃತಿಕ ಅರಿವು ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮವನ್ನು ಕಾಯಕಬಂಧು ಬಾಬುನಾಯಕ ಮೇಟಿ ಅವರು ತಮಟೆ ಬಾರಿಸುವ ಮೂಲಕ ಚಾಲನೆ ನೀಡಿದರು. ನಂತರ ಮಾತನಾಡುತ್ತಾ ಅವರು "ನಾವು ದಿನ ನಿತ್ಯದ ಬದುಕಿನಲ್ಲಿ ಸರಕಾರದ ಯೋಜನೆಗಳ ಕುರಿತು ಮಾಹಿತಿ ಇಲ್ಲದೇ ಪರದಾಡುತ್ತೇವೆ. ಇಂತಹ ಸಂಸ್ಥೆಗಳು ಕಲಾತಂಡದ ಮೂಲಕ ಜಾಗೃತಿ ಮೂಡಿಸುವ ಕಾರ್ಯ ಶ್ಲಾಘನೀಯವಾಗಿದೆ. ಪ್ರತಿಯೊಬ್ಬರೂ ಅರ್ಥ ಮಾಡಿಕೊಂಡು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು" ಎಂದರು.

ಸಂಸ್ಥೆಯ ಅಧ್ಯಕ್ಷ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಶರಣಪ್ಪ ವಡಿಗೇರಿ ಅವರು ನಮ್ಮ ಮೂಲ ಜನಪದ, ಆರೋಗ್ಯ, ಶಿಕ್ಷಣ ಮತ್ತು ರಾಷ್ಟ್ರೀಯ ಯೋಜನೆಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವೀರಯ್ಯ ಹಿರೇಮಠ ಅವರಿಂದ ಜಾಗೃತಿ ಗೀತೆ, ಬನ್ನಿಗೋಳ ಶರಣಪ್ಪ ಅವರಿಂದ ಬಯಲಾಟದ ಪದ, ದೇವೇಂದ್ರಪ್ಪ ಕಮ್ಮಾರ ಅವರಿಂದ ವಚನ ಗಾಯನ ಕಾರ್ಯಕ್ರಮ ನಡೆಯಿತು. ಶಿವಲಿಂಗಪ್ಪ ಪೂಜಾರ ಸಂಗಡಿಗರಿಂದ 'ಕೂಲಿಯ ಬಿಡಿಸಿ ಶಾಲೆಗೆ ಕಳಿಸಿ' ಶೈಕ್ಷಣಿಕ ಜಾಗೃತಿ ಮೂಡಿಸುವ ಬೀದಿನಾಟಕ ಪ್ರದರ್ಶನ ನಡೆಯಿತು.

ಕಾರ್ಯಕ್ರಮದಲ್ಲಿ ನರಸಪ್ಪ ನಾಯಕ, ದೊಡ್ಡಮ್ಮ ನಾಯಕ, ಮೌನೇಶ ನಾಯಕ, ರಾಚಪ್ಪ ಬಡಿಗೇರ, ಹನಮಪ್ಪ ನಾಯಕ, ರೂಪಲೆಪ್ಪ ನಾಯಕ ಸೇರಿದಂತೆ ನರೇಗ ಕಾರ್ಮಿಕರು ಉಪಸ್ಥಿತರಿದ್ದರು. ಕೊನೆಯಲಿ ಕೇಸೂರು ಗ್ರಾಮ ಪಂಚಾಯತಿ ಸಿಬ್ಬಂದಿ ಮಾಸಪ್ಪ ಅವರು ವಂದನಾರ್ಪಣೆ ಸಲ್ಲಿಸಿದರು.

# ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿನ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಿ ಫಲಾನುಭವಿಗಳಿಗೆ ಸೌಲಭ್ಯ ಕಲ್ಪಿಸಿ: ಬಾಲಚಂದ್ರನ್ ಎಸ್.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಯೋಜನೆಗಳ ಅನುಷ್ಠಾನದಲ್ಲಿರುವ ತಾಂತ್ರಿಕ ತೊಂದರೆಗಳನ್ನು ಪರಿಹರಿಸಿ, ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ಒದಗಿಸಿ ಎಂದು ಕೊಪ್ಪಳ ತಾಲ್ಲೂಕಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಬಾಲಚಂದ್ರನ್ ಎಸ್. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಗುರುವಾರದಂದು ಮುನಿರಾಬಾದ ಡ್ಯಾಂ ಗ್ರಾಮ ಪಂಚಾಯತಿ ಸಭಾಂಗಣದಲ್ಲಿ ಆಯೋಜಿಸಿದ್ದ ಕೊಪ್ಪಳ ತಾಲೂಕಿನ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕರ ಅನುಕೂಲಕ್ಕಾಗಿ ರಾಜ್ಯ ಸರ್ಕಾರ ಪಂಚ ಗ್ಯಾರಂಟಿಗಳನ್ನು ಜಾರಿಗೆ ತಂದಿದ್ದು, ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ. ಗೃಹ ಲಕ್ಷ್ಮೀ ಯೋಜನೆಯ ಫಲಾನುಭವಿಗಳಿಗೆ ಹಣ ಜಮೆಯಾಗದೆ ಇದ್ದಲ್ಲಿ ಕೂಡಲೇ ಮೇಲಧಿಕಾರಿಗಳ ಗಮನಕ್ಕೆ ತಂದು ತಾಂತ್ರಿಕ ಸಮಸ್ಯೆ ಬಗೆಹರಿಸಿಕೊಡಬೇಕು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ತಿಳಿಸಿದರು. ಎಲ್ಲಾ ನ್ಯಾಯ ಬೆಲೆ ಅಂಗಡಿಗಳಲ್ಲಿ ಆಹಾರ ಸಂಗ್ರಹಣೆ, ವಿತರಣೆ ಮತ್ತು ಆಹಾರ ಧಾನ್ಯ ಉಳಿದಿರುವ ಮಾಹಿತಿಯುಳ್ಳ ನಾಮಫಲಕಗಳನ್ನು ಅಳವಡಿಸಿರುವುದಿಲ್ಲವೆಂದು ಸದಸ್ಯರು ಸಭೆಯಲ್ಲಿ ತಿಳಿಸಿದಾಗ ಮಾಹಿತಿ ಫಲಕಗಳನ್ನು ಕೂಡಲೇ ಅಳವಡಿಸಲು ಕ್ರಮವಹಿಸಬೇಕೆಂದು ಅಧ್ಯಕ್ಷರು ಅಧಿಕಾರಿಗಳಿಗೆ ಸೂಚಿಸಿದರು. ಏಪ್ರಿಲ್ ಮಾಹೆಯಲ್ಲಿ ತಾಲೂಕ ಪಂಚಾಯತಿಯಲ್ಲಿ ಜರುಗಿದ ನ್ಯಾಯಬೆಲೆ ಅಂಗಡಿಗಳ ಸನ್ನದುದಾರರ ಸಭೆಗೆ ಹಾಜರಾಗದ ಸನ್ನದುದಾರರಿಗೆ ಆಹಾರ ಇಲಾಖೆಯಿಂದ ನೋಟಿಸ್ ನೀಡುವಂತೆ ಸಭೆಯಲ್ಲಿ ಸದಸ್ಯರು ತಿಳಿಸಿದರು. ಈ ಬಗ್ಗೆ ಕ್ರಮ ವಹಿಸುವಂತೆ ಅಧ್ಯಕ್ಷರು ಅಧಿಕಾರಿಗಳಿಗೆ ಸೂಚಿಸಿದರು.

ಕೊಪ್ಪಳದಿಂದ ಹೊಸಪೇಟೆಗೆ ಹೋಗುವ ಎಲ್ಲಾ ಬಸ್ಸುಗಳು ಮುನಿರಾಬಾದ್ ಬಸ್ ನಿಲ್ದಾಣಕ್ಕೆ ಕಡ್ಡಾಯವಾಗಿ ಬರುವಂತೆ ಸಭೆಯಲ್ಲಿ ಅಧ್ಯಕ್ಷರು ಕಲ್ಯಾಣ ಕರ್ನಾಟಕ ಸಾರಿಗೆ ಅಧಿಕಾರಿಗಳಿಗೆ ಸೂಚಿಸಿದರು. ಅಲ್ಲದೆ ಊರ ಮುಂದಿನ ಪಿಳ್ಳೆ ಹೋಟೆಲ್ ಮುಂದುಗಡೆ ಬಸ್ ಕೋರಿಕೆಯ ನಿಲುಗಡೆ ಮಾಡಬೇಕೆಂದು ಸದಸ್ಯರು ತಿಳಿಸಿದರು. ಯುವನಿಧಿ ಫಲಾನುಭವಿಗಳು ಪ್ರತಿ ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡುವುದು ಕಡ್ಡಾಯವಾಗಿತ್ತು. ಸ್ವಲ್ಪ ಬದಲಾವಣೆ ಮಾಡಿ ಪ್ರತಿ 3 ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕೊಪ್ಪಳ ತಾಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಹಶೀಲ್ದಾರ ವಿಠ್ಠಲ್ ಚೌಗಲಾ, ಮುನಿರಾಬಾದ ಡ್ಯಾಂ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಆಯೂಬ್ ಖಾನ್, ಉಪಾಧ್ಯಕ್ಷೆ ಸೌಭಾಗ್ಯ ನಾಗರಾಜ, ಸಮಿತಿಯ ಸದಸ್ಯರಾದ ದೇವರಾಜ ನಡುವಿನಮನಿ, ರಮೇಶ ಹ್ಯಾಟಿ, ಜ್ಯೋತಿ ಗೊಂಡಬಾಳ, ಸವಿತಾ ಗೊರಂಟ್ಲಿ, ಅನ್ನದಾನಸ್ವಾಮಿ, ಮೆಹಬೂಬಪಾಷಾ ಮಾನ್ವಿ, ಅನ್ವರ್ ಹುಸೇನ್ ಗಡಾದ ಪರಶುರಾಮ ಕೊರವರ, ಧರ್ಮರಾಜರಾವ್, ಲಕ್ಷ್ಮಣ ಡೊಳ್ಳಿನ ಹಾಗೂ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಅಧಿಕಾರಿಗಳು, ಮುನಿರಾಬಾದ್ ಡ್ಯಾಂ ಗ್ರಾಮ ಪಂಚಾಯತ ಪಿಡಿಓ ಮಹೇಶ್ ಸಜ್ಜನ, ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಪಶುಪಾಲನಾ, ಪಶುವೈದ್ಯ ಸೇವಾ ಇಲಾಖೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ17- ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಅಮೃತ ಸಿರಿ ಯೋಜನೆಯಡಿ ಜಿಲ್ಲೆಯಲ್ಲಿ ದೇಶಿ ತಳಿಗಳ (ಹಸು-ಕರುಗಳ) ಸಂರಕ್ಷಣೆಗೆ ರೈತರನ್ನು ಸಹಭಾಗಿದಾರರನ್ನಾಗಿಸುವ ಉದ್ದೇಶ ಹೊಂದಿದ್ದು, ಅರ್ಹ ರೈತರು, ದೇವದಾಸಿ ಮಹಿಳೆಯರು, ವಿಧವೆಯರು, ಶವ ಸಂಸ್ಕಾರ ಕಾರ್ಮಿಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ತಮ್ಮ ವ್ಯಾಪ್ತಿಯ ತಾಲ್ಲೂಕಿನ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಿಂದ ನಿಗಧಿತ ನಮೂನೆಯ ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕರ ಮೊಬೈಲ್ ಬಳ್ಳಾರಿ-9448233756, ಕಂಪ್ಲಿ-9964444527, ಕುರುಗೋಡು-7822209185, ಸಿರುಗುಪ್ಪ-7892855573 ಮತ್ತು ಸಂಡೂರು-9108334846 ಗೆ ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ17- ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ 2025-26ನೇ ಶೈಕ್ಷಣಿಕ ಸಾಲಿಗೆ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ ಲಿಂಕ್ https://shp.karnataka.gov.in ಮೂಲಕ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿನ ಜೂನ್ 25 ಆಗಿದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ದೂ.08392-200125/224ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡತಿನಿ: ಸರ್ಕಾರಿ ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ17- ಕುಡತಿನಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025-26ನೇ ಸಾಲಿಗೆ ವಿವಿಧ ವೃತ್ತಿಗಳ ಪ್ರವೇಶಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕುಡತಿನಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಖುದ್ರತ್ ಅಲಿ ಹೆಚ್ ಲೈನ್ ಅವರು ತಿಳಿಸಿದ್ದಾರೆ.

ಇ/ಎಂ, ಜೋಡಣೆಗಾರ, ವಿದ್ಯುತ್‌ಕರ್ಮಿ, ಚರಕಿಗಾರ ಪ್ರವೇಶಕ್ಕೆ ಮೆರಿಟ್ ಕಮ್ ರಿಸವೇಶನ್ ಆಧಾರದ ಮೇಲೆ ದಾಖಲಾತಿ ಹೊಂದಬಹುದು.

ಬೇಕಾಗುವ ದಾಖಲೆ: ಆಧಾರ್ ಕಾರ್ಡ್, ಹೈದ್ರಾಬಾದ್ ಕರ್ನಾಟಕ (371ಜೆ), ಎಸ್.ಎಸ್.ಎಲ್.ಸಿ ಅಂಕಪಟ್ಟಿ, ವರ್ಗಾವಣೆ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಕನ್ನಡ ಮತ್ತು ಗ್ರಾಮೀಣ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳು.

ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಅರ್ಹ ಆಸಕ್ತ ಅಭ್ಯರ್ಥಿಗಳು ಮೇ 28 ರೊಳಗಾಗಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕುಡತಿನಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಅಥವಾ ಮೊ.9449248055, 9480939802 ಗೆ ಸಂಪರ್ಕಿಸಬಹುದು ಎಂದು ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 18 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ಮೇ 17- ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-2 ರ ವ್ಯಾಪ್ತಿಯಲ್ಲಿ ಲೈನ್ ಗಳಿಗೆ ಅಡ್ಡಲಾಗಿರುವ ಮರ ಕತ್ತರಿಸುವ ಕಾರ್ಯ ಕೈಗೊಳ್ಳುತ್ತಿರುವುದರಿಂದ ಮೇ 18 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಎಫ್-7 ರ ವ್ಯಾಪ್ತಿಯ ರಾಘವ ಕಲಾ ಮಂದಿರ, ಅನಂತಪುರ ರಸ್ತೆ, ವಡ್ಡರಬಂಡೆ, ಗ್ರಾಮ್ ರಸ್ತೆ, ಅಗಡಿ ಮಾರೆಪ್ಪ ಕಾಂಪೌಂಡ್, ರೂಪನಗುಡಿ ರಸ್ತೆ, ಮುಬಾರಕ್ ಟಾಕೀಸ್, ಬಾಲಾಜಿರಾವ್ ರಸ್ತೆ, ಕೆ.ಸಿ.ರೋಡ್, ಮೀನಾಕ್ಷಿ ಸರ್ಕಲ್, ಬೆಂಗಳೂರು ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಬಳ್ಳಾರಿ ನಗರ ಜೆಸ್ಕಾಂ ಉಪ ವಿಭಾಗ-2 ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರ ಜಿಲ್ಲೆಯಲ್ಲಿ ಜೂನ್ 30ರವರೆಗೆ ಬುಡಕಟ್ಟು ಹೆಮ್ಮೆಯ ವರ್ಷ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.17: ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಮಂತ್ರಾಲಯದಿಂದ ಧರ್ತಿ ಆಬಾ ಬುಡಕಟ್ಟು ಗ್ರಾಮ ಅಭಿವೃದ್ಧಿ ಅಭಿಯಾನ (ಆಂ-ಎಂಉಗಂ) ಯೋಜನೆಯಡಿ ಬುಡಕಟ್ಟು ಹೆಮ್ಮೆಯ ವರ್ಷ-2025 (JANJATIYAGAURAV VARSH) ಆಚರಿಸಲು ದೇಶಾದ್ಯಂತ ಜೂನ್ 30ರವರೆಗೆ ಅಭಿಯಾನ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ವಿವಿಧ ಬಗೆಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಬುಡಕಟ್ಟು ಹೆಮ್ಮೆಯ ವರ್ಷ-2025ರ ಆಚರಣೆ ಸಂಬಂಧ ಜಿಲ್ಲೆಯಾದ್ಯಂತ ಈಗಾಗಲೇ ಗುರುತಿಸಲಾದ ಪರಿಶಿಷ್ಟ ಪಂಗಡದವರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಗ್ರಾಮಗಳಲ್ಲಿ ಸಂಬಂಧಪಟ್ಟ ಇಲಾಖೆಗಳ ಸಹಯೋಗದೊಂದಿಗೆ ಆಧಾರ್ ಕಾರ್ಡ್, ಪಡಿತರ ಚೀಟಿ, ಆಯುಷ್ಮಾನ್ ಭಾರತ ಕಾರ್ಡ್ (ಪಿಎಮ್-ಜೆಎವೈ), ಜಾತಿ ಪ್ರಮಾಣ ಪತ್ರ, ಪಿಎಮ್ ಕಿಸಾನ್, ಜನ್ ಧನ್ ಅಕೌಂಟ್ ಸೇರಿದಂತೆ ಕುಡಗೋಲು ಕಣ ರೋಗದ À (Sickle cell) ಬಗ್ಗೆ ಮತ್ತು ಸಂಬಂಧಿತ ಪರೀಕ್ಷೆಯ ಬಗ್ಗೆ ಅರಿವು ಮೂಡಿಸುವ ಶಿಬಿರಗಳನ್ನು ಸಿಎಸ್‌ಸಿಎಸ್ ಮುಂಚೂಣಿ ಕಾರ್ಯಕರ್ತರು ಮತ್ತು ವಿವಿಧ ಇಲಾಖೆಗಳ ಒಮ್ಮುಖದ ಸಕ್ರೀಯ ಬೆಂಬಲದೊಂದಿಗೆ ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರಿಗೆ ಕೃಷಿ ಇಲಾಖೆಯ ಕಾರ್ಯಕ್ರಮಗಳು ಸಮರ್ಪಕವಾಗಿ ತಲುಪಲಿ - ಕೆ.ರಾಘವೇಂದ್ರ ಹಿಟ್ನಾಳ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಅವಶ್ಯವಿರುವ ಬಿತ್ತನೆ ಬೀಜ, ರಸಗೊಬ್ಬರದ ಜೊತೆಗೆ ರೈತರಿಗೆ ಕೃಷಿ ಇಲಾಖೆಯ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ತಲುಪಿಸಬೇಕೆಂದು ಕೊಪ್ಪಳ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಹೇಳಿದರು.

ಅವರು ಶನಿವಾರ ಜಿಲ್ಲಾ ಪಂಚಾಯತ್ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ಗಂಗಾವತಿಯ ಕೃಷಿ ವಿಜ್ಞಾನ ಕೇಂದ್ರ ಮತ್ತು ಕೊಪ್ಪಳದ ಕೃಷಿ ತಂತ್ರಜ್ಞರ ಸಂಸ್ಥೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 2025-26ನೇ ಸಾಲಿನ ಮುಂಗಾರು ಹಂಗಾಮಿನ ಪೂರ್ವಸಿದ್ಧತೆ, ದ್ವೈಮಾಸಿಕ ಕಾರ್ಯಾಗಾರ ಹಾಗೂ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಉದ್ಘಾಟಿಸಿ ಅವರು ಮಾತನಾಡಿದರು.

ಈ ವರ್ಷ ಮುಂಗಾರು ಹಂಗಾಮಿನ ಸಿದ್ಧತೆ ಪೂರ್ವದಲ್ಲಿ ರಾಜ್ಯ ಸರ್ಕಾರವು ರೈತರಿಗೆ ಬೇಕಾಗಿರುವ ಬಿತ್ತನೆ ಬೀಜಗಳು, ರಸಗೊಬ್ಬರಗಳ ವ್ಯವಸ್ಥೆಯ ಜೊತೆಗೆ ಸರ್ಕಾರದ ಅನೇಕ ಯೋಜನೆಗಳು ಮತ್ತು ಕಾರ್ಯಕ್ರಮ ಬಗ್ಗೆಯೂ ಸಹ ರೈತರಿಗೆ ತಿಳಿಸುವಂತಹ ಪ್ರಯತ್ನವನ್ನು ಕೃಷಿ ಇಲಾಖೆಯ ಮೂಲಕ ಮಾಡುತ್ತಿದೆ. ನಮ್ಮ ಸರ್ಕಾರವು ಹೆಚ್ಚು ರೈತರಿಗೆ ಅನುಕೂಲವಾಗುವಂತಹ ಕಾರ್ಯಕ್ರಮಗಳನ್ನು ನೀಡಿದೆ. ಈ ಬಾರಿ ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ಮುಂಗಾರು ಬಿತ್ತನೆ ಪ್ರಾರಂಭವಾಗಲಿದೆ. ಬಿತ್ತನೆ ಬೀಜ ಮತ್ತು ಗೊಬ್ಬರಕ್ಕೆ ಯಾವುದೇ ರೀತಿಯ ಸಮಸ್ಯೆಯಾಗದಂತೆ ನೋಡಿಕೊಳ್ಳಿ ಎಂದರು.

ಇತ್ತೀಚೆಗೆ ಆನೆಕಲ್ಲು ಮಳೆಯಿಂದಾಗಿ ಅನೇಕ ಭಾಗಗಳಲ್ಲಿ ಭತ್ತದ ಬೆಳೆ ನಷ್ಟವಾಗಿದ್ದು, ಇದಕ್ಕೆ ಪರಿಹಾರ ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಮುಖ್ಯಮಂತ್ರಿಗಳಿಗೆ ತಿಳಿಸಿದ್ದೇವೆ. ರೈತರು ಉತ್ತಮ ಬೆಳೆ ಬೆಳೆದಾಗ ಸರಿಯಾದ ಬೆಲೆ ಸಿಗುವುದಿಲ್ಲ ಹಾಗೂ ಉತ್ತಮ ಬೆಳೆಯಿದ್ದಾಗ ಆ ಬೆಳೆಗೆ ಸರಿಯಾದ ಬೆಲೆ ಇರುವುದಿಲ್ಲ. ಈ ಕಾರಣದಿಂದ ಸಾಲದಿಂದ ಮುಕ್ತಿಹೊಂದಲು ರೈತರಿಗೆ ಕಷ್ಟವಾಗುತ್ತದೆ. ರೈತರಿಗಾಗಿ ಸರ್ಕಾರವು ಅನೇಕ ಕಾರ್ಯಕ್ರಮಗಳನ್ನು ಕೃಷಿ ಇಲಾಖೆಯಿಂದ ಜಾರಿಗೊಳಿಸಲಾಗುತ್ತಿದೆ. ಈ ಹಿಂದೆ ನಮ್ಮ ಸರ್ಕಾರವು ಜಾರಿಗೆ ತಂದ ಕೃಷಿ ಹೊಂಡ ನಿರ್ಮಾಣ ಯೋಜನೆಯಿಂದಾಗಿ ಬಹಳಷ್ಟು ರೈತರಿಗೆ ಅನುಕೂಲವಾಗಿದೆ. ವಿಕಸಿತ ಕೃಷಿ ಸಂಕಲ್ಪ ಅಭಿಯಾನದಡಿ ಇಂದು ಮಣ್ಣು ಪರೀಕ್ಷಾ ವಾಹನಗಳನ್ನು ಉದ್ಘಾಟಿಸಲಾಗಿದ್ದು, ರೈತರು ಹೆಲ್ಪ್ ಲೈನ್‌ಗೆ ಕರೆ ಮಾಡಿದಾಗ ತ್ವರಿತಗತಿಯಲ್ಲಿ ಸ್ಪಂದನೆ ನೀಡಬೇಕು. ಇದರ ಜೊತೆಗೆ ಸ್ಥಳಕ್ಕೆ ಭೇಟಿ ನೀಡಿ, ಮಣ್ಣು ಪರೀಕ್ಷಿಸಿ, ಅಲ್ಲಿ ಯಾವ ಬೆಳೆ ಬೆಳೆಯಲು ಸೂಕ್ತವೆಂದು ರೈತರಿಗೆ ಮಾಹಿತಿ ನೀಡಬೇಕು. ಈ ಬಗ್ಗೆ ಅಧಿಕಾರಿಗಳು ಚುರುಕಾಗಿ ಕೆಲಸ ಮಾಡಬೇಕೆಂದು ಹೇಳಿದರು.

ಜಿಲ್ಲೆಯಲ್ಲಿ ನೀರಾವರಿ ಪ್ರದೇಶದಲ್ಲಿ ಹಾಗೂ ವಿಶೇಷವಾಗಿ ಭತ್ತ ಬೆಳೆಯುವ ಭಾಗಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರಸಾಯನಿಕ ಗೊಬ್ಬರಗಳ ಬಳಕೆಯಾಗುತ್ತಿದ್ದು, ಇದು ಜನರ ಆರೋಗ್ಯಕ್ಕೆ ಹಾನಿಕಾರವಾಗುವ ಜೊತೆಗೆ ಭೂಮಿಯ ಫಲವತ್ತತೆಯನ್ನು ಸಹ ಹಾಳು ಮಾಡುತ್ತದೆ. ಇದಕ್ಕಾಗಿ ಸಾವಯವ ಕೃಷಿಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ಈ ಬಗ್ಗೆ ಜಿಲ್ಲೆಯ ರೈತರಿಗೆ ಅರಿವು ಮೂಡಿಸಬೇಕು ಎಂದರು.

ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಮಾತನಾಡಿ, ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದ್ದು, ಜಿಲ್ಲೆಯಲ್ಲಿ ಬಿತ್ತನೆ ಬೀಜ ಮತ್ತು ರಸಗೊಬ್ಬರಕ್ಕೆ ಯಾವುದೇ ಕೊರತೆಯಿಲ್ಲ. ಬೇಡಿಕೆಗಿಂತಲು ಶೇ.20 ರಷ್ಟು ಹೆಚ್ಚಿನ ಪ್ರಮಾಣದ ಬೀಜ-ಗೊಬ್ಬರವನ್ನು ದಾಸ್ತಾನು ಇರಲಿದೆ. ಬೀಜ ಮತ್ತು ರಸಗೊಬ್ಬರ ಮಾರಾಟಗಾರರು ಎಂ.ಆರ್.ಪಿ.ಗಿಂತ ಹೆಚ್ಚಿನ ದರಕ್ಕೆ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳನ್ನು ಮಾರಾಟ ಮಾಡಿರುವ ಬಗ್ಗೆ ಯಾವುದೇ ದೂರು ಬಂದಲ್ಲಿ ಅಂತಹವರ ವಿರುದ್ಧ ಕಾನೂನು ಮೂಲಕ ಕ್ರಮ ಕೈಗೊಳ್ಳಲಾಗುವುದು. ಭತ್ತ ಬೆಳೆಯುವ ಭಾಗಗಳಲ್ಲಿ ಹೆಚ್ಚಿನ ಪ್ರಮಾಣದ ರಸಾಯನಿಕಗಳ ಬಳಕೆಯನ್ನು ತಡೆಯಲು ಈಗಾಗಲೇ ಜಾಗೃತಿ ಮೂಡಿಸಲಾಗುತ್ತಿದೆ. ಜಿಲ್ಲೆಯಲ್ಲಿ ರೇಷ್ಮೆ, ತೋಟಗಾರಿಕೆ, ಪಶುಪಾಲನೆ ಪ್ರಮಾಣವನ್ನು ಹೆಚ್ಚಿಸುವುದರ ಜೊತೆಗೆ ಕೃಷಿ ಮಾರುಕಟ್ಟೆಯನ್ನು ಅಭಿವೃದ್ಧಿಪಡಿಸಿ, ಸಮಗ್ರ ಸಾವಯವ ಕೃಷಿಗೆ ಉತ್ತೇಜನ ನೀಡಲು ಪ್ರಯತ್ನಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ತೋಟಗಾರಿಕೆ ಕ್ಷೇತ್ರವು ಹೆಚ್ಚಾಗುತ್ತಿದೆ ಹಾಗೂ ಪ್ರಾಣಿಗಳ ಸಂಖ್ಯೆಯು ಹೆಚ್ಚಾಗಿದೆ ಎಂದು ಹೇಳಿದರು.

ಕೃಷಿಯೊಂದಿಗೆ ಕೋಳಿ, ಕುರಿ ಮತ್ತು ಧನಕರುಗಳ ಸಾಕಾಣಿಕೆ ಹಾಗೂ ತೋಟಗಾರಿಕೆ ಬೆಳೆಗಳನ್ನು ಬೆಳೆಯುವುದರಿಂದ ಮಣ್ಣಿ ಫಲವತ್ತತೆ ಉತ್ತಮವಾಗಿರುತ್ತದೆ. ಜಿಲ್ಲೆಯಲ್ಲಿ ಈ ರೀತಿಯ ಸಮಗ್ರ ಕೃಷಿ ವ್ಯವಸ್ಥೆಯನ್ನು ಜಾರಿಗೆ ಮಾಡಬೇಂದು ಯೋಜನೆಯನ್ನು ರೂಪಿಸಲಾಗಿದೆ. ಜಿಲ್ಲೆಯ ಸರಿ ಸುಮಾರು 4.50 ಲಕ್ಷ ಹೆಕ್ಟರ್ ಭೂಮಿಯಲ್ಲಿ ವ್ಯವಸಾಯ ಮಾಡಲಾಗುತ್ತಿದ್ದು, ಇದರಲ್ಲಿ 55 ಸಾವಿರ ಹೆಕ್ಟರ್ ಭೂಮಿಯನ್ನು ತೋಟಗಾರಿಕೆ ಕ್ಷೇತ್ರದಲ್ಲಿ ತೊಡಗಿಸಲಾಗಿದೆ. ಕಳೆದ ಐದು ವರ್ಷಗಳ ಹಿಂದೆ 25 ಸಾವಿರ ಹೆಕ್ಟರ್‌ಗಿಂತಲು ಕಡಿಮೆ ತೋಟಗಾರಿಕೆ ಪ್ರದೇಶವಿತ್ತು. ಮುಂಬರುವ ವರ್ಷಗಳಲ್ಲಿ 1.50 ಲಕ್ಷ ಹೆಕ್ಟರ್ ಪ್ರದೇಶವನ್ನು ತೋಟಗಾರಿಕೆಗೆ ತರಬೇಕೆಂದು ಯೋಜನೆ ರೂಪಿಸಲಾಗಿದ್ದು, ಇದರಿಂದ ರೈತರ ಆದಾಯ ಹೆಚ್ಚಾಗಲಿದೆ. ತೋಟಗಾರಿಕೆ ಟೆಕ್ ಪಾರ್ಕ್ ಹಾಗೂ ರೈಸ್ ಪಾರ್ಕ್ ಸ್ಥಾಪನೆಯಿಂದಾಗಿಯೂ ಜಿಲ್ಲೆಯ ಕೃಷಿ ಮತ್ತು ತೋಟಗಾರಿಕೆ ಕ್ಷೇತ್ರಗಳಲ್ಲಿ ಹೆಚ್ಚಿನ ಅಭಿವೃದ್ಧಿಯಾಗಲಿದೆ ಎಂದರು.

*ರಾಷ್ಟ್ರ ಮಟ್ಟದ ಪ್ರಶಸ್ತಿಗಾಗಿ ಜಿಲ್ಲಾಧಿಕಾರಿಗಳಿಗೆ ಸನ್ಮಾನ:* 2023-24ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ಕೊಪ್ಪಳ ಜಿಲ್ಲೆಗೆ ರಾಷ್ಟ್ರ ಮಟ್ಟದ ಪ್ರಶಸ್ತಿ ಲಭಿಸಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರಿಗೆ ಬೆಂಗಳೂರಿನ ಐಎಟಿ ಸಂಸ್ಥೆ, ಕೊಪ್ಪಳ ಜಿಲ್ಲಾ ಕೃಷಿಕ ಸಮಾಜ ಹಾಗೂ ಕೃಷಿ ಇಲಾಖೆಯಿಂದ ಸನ್ಮಾನಿಸಲಾಯಿತು.

*ಪೋಸ್ಟರ್ ಬಿಡುಗಡೆ ಹಾಗೂ ಬಿತ್ತನೆ ಬೀಜ ವಿತರಣೆ:* ಕೃಷಿ ಇಲಾಖೆಯಿಂದ ಹೊರತಂದಿರುವ ಡಿಎಪಿ ಬದಲಾಗಿ ಇತರೆ ರಸಗೊಬ್ಬರ ಬಳಕೆಯ ಮಾಹಿತಿಯ ಮತ್ತು ದೇಶಿ ತಳಿಯ ಸಂರಕ್ಷಣೆ ಕುರಿತಾದ ಮಾಹಿತಿಯ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಮುಂಗಾರು ಹಂಗಾಮಿನ ಬಿತ್ತನೆ ಬೀಜಗಳನ್ನು ರೈತರಿಗೆ ಸಾಂಖೇತಿಕವಾಗಿ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಂಟಿ ಕೃಷಿ ನಿರ್ದೇಶಕರಾದ ಟಿ.ಎಸ್.ರುದ್ರೇಶಪ್ಪ, ಕೃಷಿಕ ಸಮಾಜದ ಕೊಪ್ಪಳ ಜಿಲ್ಲಾಧ್ಯಕ್ಷರಾದ ಶೇಖರಗೌಡ ಮಾಲಿ ಪಾಟೀಲ್, ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಶಿವಣ್ಣ ಮೂಲಿಮನಿ, ಬೆಂಗಳೂರಿನ ಐಎಟಿ ಕಾರ್ಯದರ್ಶಿ ವೀರಣ್ಣ ಕಂತಾರ, ಗಂಗಾವತಿಯ ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥರಾದ ರಾಘವೇಂದ್ರ ಯಲಿಗಾರ ಹಾಗೂ ವಿಜ್ಞಾನಿಗಳು ಕೃಷಿಕ ಸಮಾಜದ ಸದಸ್ಯರು, ಮುನಿರಾಬಾದ್ ತೋಟಗಾರಿಕೆ ಮಹಾವಿದ್ಯಾಲಯದ ಅಧಿಕಾರಿಗಳು, ಕೃಷಿ ಇಲಾಖೆಯ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಸಹಾಯಕ ನಿರ್ದೇಶಕರು ಸೇರಿದಂತೆ ಕೃಷಿ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಮಂಗಳೂರು ಗ್ರಾಮದಲ್ಲಿ ಮೇ 19ಕ್ಕೆ ಸಮಾನತೆಯ ಬೆಳಕು ಕಾರ್ಯಕ್ರಮ :ರವಿ ಆಗೋಲಿ

ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ತಾಲೂಕಿನ ಮಂಗಳೂರು ಗ್ರಾಮದಲ್ಲಿ ಜಗತ್ತಿಗೆ ತಮ್ಮದೇ ಆದ ಕೊಡುಗೆಯನ್ನು ನೀಡಿದ ಮಹಾನ್ ಮೂರು ವ್ಯಕ್ತಿಗಳಾದ ಬುದ್ಧ ಬಸವ ಅಂಬೇಡ್ಕರ್ ಅವರ ಜಯಂತಿಯ ಅಂಗವಾಗಿ ಸಮಾನತೆಯ ಬೆಳಕು ಕಾರ್ಯಕ್ರಮ ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ, 2024 /25 ನೇ ಸಾಲಿನ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಹಾಗೂ ರಸಮಂಜರಿ ಕಾರ್ಯಕ್ರಮ ಕೂಡ ಇರುತ್ತದೆ

ಈ ಒಂದು ಅಭೂತಪೂರ್ಣವಾದ ಕಾರ್ಯಕ್ರಮಕ್ಕೆ ಪೂಜ್ಯರುಗಳು, ಗಣ್ಯ ಮಹಾನೀಯರು, ಸಾಧಕರು, ಜನಪ್ರತಿನಿಧಿನಗಳು ಆಗಮಿಸುತ್ತಿದ್ದು ಕಾರ್ಯಕ್ರಮವು

ಇದೆ ತಿಂಗಳು ಮೇ 19 ಕ್ಕೆ ಶ್ರೀ ಮಂಗಳೇಶ್ವರ ಕಲ್ಯಾಣ ಮಂಟಪದ ಹತ್ತಿರ ಸಾಯಂಕಾಲ 7 ಗಂಟೆಗೆ ಜರುಗುವದು ಎಂದು ಪತ್ರಿಕೆ ಪ್ರಕಟಣೆಯಲ್ಲಿ ಕಾರ್ಯಕ್ರಮದ ಆಯೋಜಕರಾದ ರವಿ ನಿಂಗಪ್ಪ ಆಗೋಲಿ ಪತ್ರಕರ್ತರು ತಿಳಿಸಿದ್ದಾರೆ.

# ಮಕ್ಕಳ ಪ್ರತಿಭೆ ಅನಾವರಣಕ್ಕೆ ಶಿಬಿರಗಳು ಪೂರಕ-ಕುರೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.17-ಮಕ್ಕಳಲ್ಲಿನ ಕ್ರಿಯಾತ್ಮಕ ಹಾಗೂ ಸೃಜನಾತ್ಮಕ ಕಲೆಗಳನ್ನು ಅನಾವರಣಗೊಳಿಸಲು ಬೇಸಿಗೆ ಶಿಬಿರಗಳು ಪೂರಕವಾಗಿವೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ಕರ್ನಾಟಕ ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಸಮಿತಿ ಆಶ್ರಯದಲ್ಲಿ ನವನಗರದ ಬಾಲ ಭವನದಲ್ಲಿ ಶನಿವಾರ ಹಮ್ಮಿಕೊಳ್ಳಲಾದ ಮಕ್ಕಳ ಬೇಸಿಗೆ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಕ್ಕಳಲ್ಲಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ ತರಬೇತಿ ನೀಡುವ ಮೂಲಕ ಅವರಲ್ಲಿನ ಸೃಜನಾತ್ಮಕ ಮತ್ತು ಕ್ರಿಯಾತ್ಮಕ ಕಲೆಯನ್ನು ಹೊರತರುವುದು ಶಿಬಿರದ ಮುಖ್ಯ ಉದ್ದೇಶವಾಗಿದೆ. ಈ ಶಿಬಿರದಲ್ಲಿ ಸಮೂಹ ಸಂಗೀತ, ಸಮೂಹ ನೃತ್ಯ, ಯೋಗಾಭ್ಯಾಸ, ಚಿತ್ರಕಲೆ, ಕಸದಿಂದ ರಸ ಮತ್ತು ಜೇಡಿಮಣ್ಣಿನ ಕಲೆಗಳಲ್ಲಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿಯನ್ನು ನೀಡಲಾಗುತ್ತಿದೆ. ಮಕ್ಕಳು ಶಿಬಿರವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಕುರೇರ ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಆರ್. ಮಾತನಾಡಿ, ಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ತಮ್ಮ ಮಕ್ಕಳನ್ನು ಶಿಬಿರದಲ್ಲಿ ಪಾಲ್ಗೊಳಿಸಬೇಕು. ಮೇ. 30 ವರೆಗೆ ಬೇಸಿಗೆ ಶಿಬಿರ ನಡೆಯಲಿದೆ ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಸುಮಂಗಲಾ ಹಿರೇಮನಿ, ಜಿಲ್ಲಾ ನಿರೂಪಣಾಧಿಕಾರಿ ಮಂಜುನಾಥ ಪರಸನ್ನವರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಮೇಶ ಸೂಳಿಕೇರಿ, ಸಂಪನ್ಮೂಲ ವ್ಯಕ್ತಿಗಳಾದ ಕಾಂಚನ ಘಾಟಗೆ, ಪದ್ಮಾವತಿ ಅಣ್ಣಿಗೇರಿ, ಉಪ ನಿರ್ದೇಶಕರ ಕಚೇರಿ ಹಾಗೂ ಬಾಲ ಭವನದ ಸಿಬ್ಬಂದಿ ಪಾಲ್ಗೊಂಡಿದ್ದರು.

# ಮೇ.20 ನಿಡಗುಂದಿಯಲ್ಲಿ ಶಿಕ್ಷಕರಿಗಾಗಿ ಉದ್ಯೋಗ ಮೇಳ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.17-ವಿಜಯಪುರ ಜಿಲ್ಲಾ ಖಾಸಗಿ ಅನುದಾನ ರಹಿತ ಶಾಲೆಗಳ ಸಹಯೋಗದಲ್ಲಿ ವಿಜಯಪುರ ಜಿಲ್ಲೆಯ ನಿಡಗುಂದಿ ಪಟ್ಟಣದಲ್ಲಿ ಶಿಕ್ಷಕರಿಗಾಗಿ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಬಾದಾಮಿ ತಾಲ್ಲೂಕು ಅನುದಾನ ರಹಿತ ಶಾಲೆಗಳ ಒಕ್ಕೂಟದ ಅಧ್ಯಕ್ಷ ಸುಭಾಷ ಕೊಳ್ಳಿ ಹೇಳಿದರು.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಮೇ. 20 ರಂದು ಬೆಳಿಗ್ಗೆ 9-30 ರಿಂದ ಮಧ್ಯಾಹ್ನ 1:30 ಗಂಟೆಯವರೆಗೆ ನಿಡಗುಂದಿಯ ಬನಶಂಕರಿ ಪಬ್ಲಿಕ್ ಶಾಲೆಯ ಆವರಣದಲ್ಲಿ ಮೇಳ ನಡೆಯಲಿದೆ ಎಂದು ತಿಳಿಸಿದರು.

ಬಿಎ ಬಿಈಡಿ, ಬಿಎಸ್ಸಿ ಬಿಈಡಿ, ಎಂ.ಎ, ಎಂಎಸ್ ಸಿ, ಬಿಸಿಎ, ಬಿಕಾಂ, ಎಂಕಾಮ್ ವಿದ್ಯಾರ್ಹತೆ ಹೊಂದಿದವರು ಮೇಳದಲ್ಲಿ ಭಾಗವಹಿಸಬಹುದಾಗಿದೆ. ಅದೇ ರೀತಿ ಅಡುಗೆ ತಯಾರಕರು, ಡ್ರೈವರ್ಗಳು, ಆಯಾಗಳು, ವಾಚ್ಮನ್ ಹುದ್ದೆಗಳಿಗೂ ಅವಕಾಶವಿದೆ ಎಂದು ಅವರು ಹೇಳಿದರು.

ಎಲ್ಲಾ ಶೈಕ್ಷಣಿಕ ದಾಖಲೆಗಳು, ಆಧಾರ್ ಕಾರ್ಡ್, ಭಾವಚಿತ್ರ ಹಾಗೂ ಬಯೋಡೇಟಾವನ್ನು ತರಬೇಕು. ಉದ್ಯೋಗ ಹುಡುಕುತ್ತಿರುವ ಶಿಕ್ಷಕ ಅಭ್ಯರ್ಥಿಗಳು ಶಿಬಿರದ ಪ್ರಯೋಜನ ಪಡೆದುಕೊಳ್ಳಬೇಕು ಎಂದು ವಿಜಯಪುರ ಜಿಲ್ಲಾ ಖಾಸಗಿ ಅನುದಾನ ರಹಿತ ಶಾಲೆಗಳ ಒಕ್ಕೂಟದ ಅಧ್ಯಕ್ಷ ಎಸ್.ಎಸ್.ಪಾಟೀಲ ತಿಳಿಸಿದರು. ಎಮ್.ಎಸ್.ಕೊಪ್ಪ, ಬಿ.ಎಮ್. ಬಿರಾದಾರ, ಮುಸ್ತಾಕ ಮುಲ್ಲಾ ಇದ್ದರು.

# ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಮೀಕ್ಷೆ ಕಾರ್ಯ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ17-ನ್ಯಾಯಮೂರ್ತಿ ಡಾ. ಹೆಚ್.ಎನ್.ನಾಗಮೋಹನ ದಾಸ್ ಅವರ ಏಕಸದಸ್ಯ ವಿಚಾರಣಾ ಆಯೋಗದ ನಿರ್ದೇಶನದಂತೆ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಮೀಕ್ಷೆ ಕಾರ್ಯವು ಪ್ರಸ್ತುತ ಪ್ರಗತಿಯಲ್ಲಿದೆ. ಶಾಸಕರು, ಹಲವು ಸಂಘ-ಸಂಸ್ಥೆಗಳು ಸಮೀಕ್ಷೆ ವೇಳೆ ಉದ್ಭವಿಸಿರುವ ಕೆಲವೊಂದು ಸಮಸ್ಯೆಗಳನ್ನು ಸರಿಪಡಿಸಲು ಸಮೀಕ್ಷಾ ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿರುವ ಹಿನ್ನಲೆಯಲ್ಲಿ ಸಮೀಕ್ಷಾ ಕಾರ್ಯದ ಅವಧಿಯನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

*ವಿಸ್ತರಣಾ ಅವಧಿ:*

ಮನೆ-ಮನೆ ಭೇಟಿ ನೀಡಿ ಸಮೀಕ್ಷೆಯು ಮೇ 25 ರವರೆಗೆ ವಿಸ್ತರಣೆ. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ಮೇ 26 ರಿಂದ 28 ರವರೆಗೆ 3 ದಿನಗಳ ಕಾಲ. ಆನ್‌ಲೈನ್ ಮೂಲಕ ಮೇ 19 ರಿಂದ 28 ರವರೆಗೆ ಸ್ವಯಂ ಘೋಷಣೆಗೆ ಕಾಲ ನಿಗದಿಪಡಿಸಲಾಗಿದೆ.

ಮೇ 26 ರಿಂದ 28 ರವರೆಗೆ ವಿಶೇಷ ಶಿಬಿರದಲ್ಲಿ ನಡೆಸಬೇಕಾದ ಸಮೀಕ್ಷೆಯಲ್ಲಿ ಗಣತಿದಾರರು ಘೋಷಿತ ಮತಗಟ್ಟೆಗಳಲ್ಲಿ ಖುದ್ದಾಗಿ ಉಪಸ್ಥಿತರಿದ್ದು, ಮನೆ-ಮನೆ ಸಮೀಕ್ಷೆಯಲ್ಲಿ ಒಂದು ವೇಳೆ ಕೈಬಿಟ್ಟು ಹೋದಂತಹ ಪರಿಶಿಷ್ಟ ಜಾತಿಯ ಕುಟುಂಬದವರು ಶಿಬಿರ-ಕ್ಕೆ ಆಗಮಿಸಿದಾಗ ಸುಸೂತ್ರವಾಗಿ ಸಮೀಕ್ಷೆ ನಡೆಸಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಬಿ.ಮಲ್ಲಿಕಾರ್ಜುನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 25ರ ವರೆಗೆ ಮನೆ ಮನೆ ಭೇಟಿ ನೀಡಿ ಸಮೀಕ್ಷೆ ಅವಧಿಯನ್ನು ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 17, : ಪರಿಶಿಷ್ಟ ಜಾತಿ ಸಮೀಕ್ಷೆ 2025ರ ಸಮೀಕ್ಷಾ ಮೇ 25ರ ವರೆಗೆ ಅವಧಿಯನ್ನು ವಿಸ್ತರಿಸಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಚನ್ನಬಸಪ್ಪ ಅವರು ತಿಳಿಸಿದ್ದಾರೆ.

ಡಾ.ಹೆಚ್.ಎನ್,ನಾಗಮೋಹನ ದಾಸ್ ಅವರ ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಶೇಖರಿಸಲು ಸಮೀಕ್ಷೆ ನಡೆಸುವ ಹಿನ್ನೆಲೆಯಲ್ಲಿ ರಾಜ್ಯಮಟ್ಟ, ಜಿಲ್ಲಾ ಮಟ್ಟ ಹಾಗೂ ತಾಲ್ಲೂಕ ಮಟ್ಟದಲ್ಲಿ ಸಮನ್ವಯ ಸಮಿತಿಗಳನ್ನು ರಚಿಸಲಾಗಿದ್ದು, 2025ರ ಮೇ 5 ರಿಂದ ಸಮೀಕ್ಷೆ ಕಾರ್ಯಕ್ರಮವನ್ನು ಆರಂಭಿಸಿ 2025ರ ಮೇ 17ರ ವರೆಗೆ ಪೂರ್ಣಗೊಳಿಸಬೇಕಾಗಿರುತ್ತದೆ. ಸಮೀಕ್ಷೆ ಕಾರ್ಯವನ್ನು ಶಿಕ್ಷಣ ಇಲಾಖೆಯ ಶಿಕ್ಷಕರನ್ನು ಗಣತೀದಾರನ್ನಾಗಿಸಿ ಮನೆ ಮನೆಗೆ ತೆರಳಿ ಮೊಬೈಲ್ ಆ್ಯಪ್ ಮೂಲಕ ಸಮೀಕ್ಷೆಯನ್ನು ನಡೆಸಿ ಮಾಹಿತಿಯನ್ನು ನಮೂದಿಸಲಾಗುತ್ತಿದೆ. ಮಾನ್ಯ ಶಾಸಕರುಗಳು, ಹಲವು ಸಂಘ ಸಂಸ್ಥೆಗಳು ಸಮೀಕ್ಷೆ ವೇಳೆ ಉದ್ಭವಿಸಿರುವ ಕೆಲವೊಂದು ಸಮಸ್ಯೆಗಳನ್ನು ಸರಿಪಡಿಸಲು ಸಮೀಕ್ಷಾ ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿರುವ ಹಿನ್ನೆಲೆಯಲ್ಲಿ ಸಮೀಕ್ಷೆ ಅವಧಿಯನ್ನು ವಿಸ್ತರಿಸಲಾಗಿದೆ.

ಮನೆ ಮನೆ ಭೇಟಿ ನೀಡಿ ಸಮೀಕ್ಷೆ ಅವಧಿಯನ್ನು 2025ರ ಮೇ 25ರ ವರೆಗೆ ವಿಸ್ತರಿಸಲಾಗಿದೆ. ವಿಶೇಷ ಶಿಬಿರ (ಸಮೀಕ್ಷೆ ಬ್ಲಾಕ್ ವ್ಯಾಪ್ತಿಯಲ್ಲಿ) 3 ದಿನಗಳ ಕಾಲ 2025ರ ಮೇ 26 ರಿಂದ 28ರ ವರೆಗೆ ಮರು ನಿಗದಿಪಡಿಸಲಾಗಿದೆ. ಆನ್‌ಲೈನ್ ಮೂಲಕ ಸ್ವಯಂ ಘೋಷಣೆಯನ್ನು 2025ರ ಮೇ 19 ರಿಂದ 28ರ ವರೆಗೆ ನಿಗದಿಪಡಿಸಲಾಗಿದೆ. 2025ರ ಮೇ 26 ರಿಂದ 28ರ ವರೆಗೆ ವಿಶೇಷ ಶಿಬಿರದಲ್ಲಿ ನಡೆಸಬೇಕಾದ ಸಮೀಕ್ಷೆಯಲ್ಲಿ ಗಣತಿದಾರರು ಘೋಷಿತ ಮತಗಟ್ಟೆಗಳಲ್ಲಿ ಖುದ್ದಾಗಿ ಉಪಸ್ಥಿತಿಯಲ್ಲಿ ಮನೆ ಮನೆ ಸಮೀಕ್ಷೆಯಲ್ಲಿ ಒಂದು ವೇಳೆ ಕೈಬಿಟ್ಟು ಹೋದಂತಹ ಪರಿಶಿಷ್ಟ ಜಾತಿಯ ಕುಟುಂಬದವರು ಶಿಬಿರಕ್ಕೆ ಆಗಮಿಸಿದಾಗ ಸುಸೂತ್ರವಾಗಿ ಸಮೀಕ್ಷೆ ನಡೆಸಲು ಕ್ರಮವಹಿಸಲಾವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೈಪರ್‌ಟೆನಷನ್ ತಡೆಗೆ ಜಾಗೃತಿ ಅಗತ್ಯ-ಡಾ.ಮಂಜುನಾಥ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.17-ಹೈಪರ್‌ಟೆನಷನ್ ಹೃದ್ರೋಗ ಸೇರಿದಂತೆ ದೀರ್ಘಕಾಲ ಕಾಡುವ ಗಂಭೀರ ಸ್ವರೂಪದ ಆರೋಗ್ಯ ಸಮಸ್ಯೆಗಳಿಗೆ ಸದ್ದಿಲ್ಲದೇ ದಾರಿ ಮಾಡಿಕೊಡುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಂಜುನಾಥ ಡಿ. ಹೇಳಿದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಣಾ ಘಟಕ, ಎನ್‌ಸಿಡಿ ಘಟಕ, ತಾಲ್ಲೂಕು ಆರೋಗ್ಯ ಕಚೇರಿ ಹಾಗೂ ಡಾ.ಸುಭಾಸ ಪಾಟೀಲ ಇನ್ಸಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸ್ ಇವರ ಸಹಯೋಗದಲ್ಲಿ ಶನಿವಾರ ರಾಷ್ಟ್ರೀಯ ಅಸಾಂಕ್ರಾಮಿಕ ರೋಗಗಳ ಕಾರ್ಯಕ್ರಮದಡಿಯಲ್ಲಿ ವಿಶ್ವ ಅಧಿಕ ರಕ್ತದೊತ್ತಡ ದಿನಾಚರಣೆ ಮತ್ತು ರಕ್ತದೊತ್ತಡ ಕುರಿತು ಅರಿವು ಮತ್ತು ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಹೈಪರಟೆನಿಷನ್ ಸೈಲೆಂಟ್ ಕಿಲ್ಲರ್ ಆಗಿದೆ. ಮನುಷ್ಯನ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ರಕ್ತದೊತ್ತಡವನ್ನು ನಿರ್ವಹಿಸುವುದು ಅತ್ಯಗತ್ಯವಾಗಿದೆ ಎಂದು ಹೇಳಿದ ಡಾ.ಮಂಜುನಾಥ, ಅಧಿಕ ರಕ್ತದೊತ್ತಡ ನಿಯಂತ್ರಣಕ್ಕೆ ಉಪ್ಪು ಸೇವನೆ ಕಡಿಮೆ ಮಾಡಬೇಕು, ಹೆಚ್ಚು ಹಣ್ಣು ಮತ್ತು ತರಕಾರಿಗಳನ್ನು ಸೇವಿಸಬೇಕು ಎಂದರು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆಯನ್ನವರ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸುವರ್ಣ ಕುಲಕರ್ಣಿ, ಡಿಎಲ್‌ಓ ಎಸ್.ಸಿ.ಪಾಟೀಲ, ಡಿಎಚ್‌ಇಓ ಶಶಿಕಲಾ, ಎನ್‌ಸಿಡಿ ಕಾರ್ಯಕ್ರಮ ಸಂಯೋಜಕ ಡಾ.ಅಜೀತ ಪಾಟೀಲ, ಜಿಲ್ಲಾ ಆರ್ಥಿಕ ಮತ್ತು ಲಾಜಿಸ್ಟಿಕ್ಸ್ ಸಲಹೆಗಾರ ಎಂ.ವಿ.ಪಾಟೀಲ ಇದ್ದರು.

# ಸಾಧನೆಗೆ ಸತತ ಪರಿಶ್ರಮ ಮುಖ್ಯ : ಅಮರನಾಥ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.17-ವಿದ್ಯಾರ್ಥಿಗಳು ಶಿಸ್ತು ಹಾಗೂ ಗಂಭೀರತೆಯಿಂದ ಅಧ್ಯಯನ ಮಾಡಿ ಗುರಿ ಮುಟ್ಟುವ ಕಡೆಗೆ ಹೆಜ್ಜೆ ಹಾಕಬೇಕು. ಸಾಧನೆಗೆ ಸತತ ಪರಿಶ್ರಮ, ಅಧ್ಯಯನ ಮುಖ್ಯ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಹೇಳಿದರು.

ನವರನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ನಡೆದ 2024-25 ನೇ ಸಾಲಿನ ಕ್ರೀಡಾ, ಸಾಂಸ್ಕೃತಿಕ, ರೆಡ್ ಕ್ರಾಸ್, ಎನ್.ಸಿ.ಸಿ, ಎನ್.ಎಸ್.ಎಸ್, ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳ ಸಮಾರೋಪ ಹಾಗೂ ಬಿ.ಎ, ಬಿ.ಕಾಂ, ಬಿ.ಎಸ್ಸಿ, ಬಿ.ಸಿ.ಎ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಕಷ್ಟಪಟ್ಟು ಓದಿದರೆ ಮುಂದಿನ ಬದುಕು ಸುಂದರವಾಗಿರುತ್ತದೆ. ಮೊಬೈಲ್ ಗೀಳು ಬಿಟ್ಟು ಅಧ್ಯಯನಶೀಲರಾಗಬೇಕು. ಅವಕಾಶಗಳನ್ನು ಪಡೆದು ಜೀವನದಲ್ಲಿ ಸಾಧನೆ ಮಾಡಬೇಕು. ಮಹಿಳೆಯರಿಗೂ ಸಾಕಷ್ಟು ಅವಕಾಶಗಳಿದ್ದು ಅವುಗಳ ಸದುಪಯೋಗ ಮಾಡಿಕೊಳ್ಳಬೇಕು ಎಂದು ಅಮರನಾಥ ರೆಡ್ಡಿ ಹೇಳಿದರು.

ಸಿಡಿಸಿ ಸದಸ್ಯ ಟಿ.ಎಲ್. ಗಂಗೂರ ಮಾತನಾಡಿ, ಸರ್ಕಾರಿ ಕಾಲೇಜಿನಲ್ಲಿ ಅತ್ಯುತ್ತಮ ಬೋಧಕ ಸಿಬ್ಬಂದಿಯಿದೆ. ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಮಾತನಾಡಿ, ಮಹಾವಿದ್ಯಾಲಯದಲ್ಲಿ 2800 ವಿದ್ಯಾರ್ಥಿಗಳು ವಿವಿಧ ಕೋರ್ಸಗಳಲ್ಲಿ ಅಧ್ಯಯನ ಮಾಡುತ್ತಿದ್ದು, ವಿದ್ಯಾರ್ಥಿಗಳಿಗೆ ಎಲ್ಲ ರೀತಿಯ ಮೂಲಭೂತ ಸೌಲಭ್ಯಗಳಿವೆ. ಕ್ರೀಡೆ, ಸಾಂಸ್ಕೃತಿಕ ಕ್ಷೇತ್ರಗಳು ಸೇರಿದಂತೆ ವಿವಿಧ ರಂಗಗಳಲ್ಲಿ ಕಾಲೇಜಿನ ಕೀರ್ತಿಯನ್ನು ನಾಡಿನ ಉದ್ದಗಲಕ್ಕೂ ವಿದ್ಯಾರ್ಥಿಗಳು ಪರಿಚಯಿಸಿರುವುದು ಹೆಮ್ಮೆಯ ವಿಷಯ ಎಂದರು.

ಇದೇ ಸಂದರ್ಭದಲ್ಲಿ ಅಂತಿಮ ವರ್ಷದ ವಿದ್ಯಾರ್ಥಿಗಳನ್ನು ಬೀಳ್ಕೊಡಲಾಯಿತು. ಸುಜಾತಾ ನಾವಿ, ದ್ಯಾಮಣ್ಣ ಕಂಬಾರ ಅನಿಸಿಕೆ ಹಂಚಿಕೊಂಡರು. ವಿಶ್ವವಿದ್ಯಾಲಯ ಬ್ಲ್ಯೂ ಆಗಿ ಆಯ್ಕೆಯಾದ ಕ್ರೀಡಾಪಟುಗಳಿಗೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ವಿಜೇತರಿಗೆ ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಲಾಯಿತು.

ಎಚ್.ಎಸ್.ಗುಳೇದ, ಬಿ.ಎಲ್.ಸೋಮನಾಳ, ನಗರಸಭೆ ಸದಸ್ಯ ಹಾಜಿಸಾಬ್ ದಂಡಿನ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಸಾವಿತ್ರಿ ಮುತ್ತಗಿ ಪ್ರಾರ್ಥಿಸಿದರು. ಪ್ರೊ.ಜಿ.ಜಿ.ಹಿರೇಮಠ ಸ್ವಾಗತಿಸಿ, ಪರಿಚಯಿಸಿದರು. ಪ್ರೊ.ಪರಸಪ್ಪ ತಳವಾರ ವಾರ್ಷಿಕ ವರದಿ ವಾಚಿಸಿದರು. ಪ್ರೊ.ಚಂದ್ರಶೇಖರ ಕಾಳನ್ನವರ ನಿರೂಪಿಸಿದರು. ಪ್ರೊ.ಸುಮಂಗಲಾ ಮೇಟಿ ವಂದಿಸಿದರು.

# ಭಗೀರಥ ಮಹರ್ಷಿ ಜಯಂತಿ-ಅದ್ದೂರಿ ಮೆರವಣಿಗೆ ಗಂಗೆಯನ್ನೇ ಧರೆಗಿಳಿಸಿದ ಭಗೀರಥ : ಪೂಜಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.17-ಭಗೀರಥ ಮಹರ್ಷಿಗಳು ತಪಸ್ಸಿನ ಶಕ್ತಿಯಿಂದ ದೇವಲೋಕದ ಗಂಗೆಯನ್ನು ಧರೆಗಿಳಿಸಿದ ಮಹಾಮಹಿಮರು ಎಂದು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಹೇಳಿದರು.

ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಭಗೀರಥ ಮಹರ್ಷಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭಗೀರಥ ಮಹರ್ಷಿಗಳು ವರ್ಷಾನುಗಟ್ಟಲೇ ಒಂಟಿ ಕಾಲಿನಲ್ಲಿ ನಿಂತು ಘೋರ ತಪಸ್ಸು ಮಾಡುವ ಶಕ್ತಿಯನ್ನು ಪಡೆದುಕೊಂಡವರು ಎಂದರು.

ತಮ್ಮ ಪೂರ್ವಜರು ಕಪಿಲ ಮಹರ್ಷಿಗಳ ಕೋಪಕ್ಕೆ ತುತ್ತಾಗಿ ಭಸ್ಮವಾದಾಗ ಅವರಿಗೆ ಸದ್ಗತಿ ದೊರಕಿಸಲು ದೇವಗಂಗೆಯನ್ನು ಕರೆತರಲು ಕಾಡಿಗೆ ಹೋಗಿ ದೀರ್ಘಕಾಲ ತಪಸ್ಸನ್ನು ಮಾಡಿ ಗಂಗೆಯನ್ನು ಭೂಮಿಗೆ ತಂದ ಭಗೀರಥರು, ಕಠಿಣ ಪರಿಶ್ರಮದ ಮೂಲಕ ಜಯ ಸಾಧಿಸಬಹುದೆಂಬುದನ್ನು ತೋರಿಸಿಕೊಟ್ಟಿದ್ದಾರೆ ಎಂದ ಪೂಜಾರ, ಶಾಂತ ಸ್ವಭಾವ, ಸೌಜನ್ಯಕ್ಕೆ ಹೆಸರಾಗಿರುವ ಉಪ್ಪಾರ ಸಮಾಜದವರು ಧಾನ, ಧರ್ಮ ಮಾಡುವ ಪ್ರವೃತ್ತಿಯುಳ್ಳವರು ಎಂದು ಹೇಳಿದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ ಮಾತನಾಡಿ, ಭಗೀರಥರು ದೇವಗಂಗೆಯನ್ನು ಧರೆಗಿಳಿಸಬೇಕೆಂಬ ಸಂಕಲ್ಪ ಮಾಡಿ ಅದಕ್ಕಾಗಿ ಘೋರ ತಪಸ್ಸು ಮಾಡಿದವರು ಎಂದರು. ಜಿ.ಪಂ ಮುಖ್ಯಯೋಜನಾಧಿಕಾರಿ ಪುನಿತ್ ಆರ್. ಮಾತನಾಡಿದರು.

ಉಪನ್ಯಾಸ ನೀಡಿದ ಸಂಗಮೇಶ ಉಪ್ಪಾರ, ಭಗೀರಥ ಮಹರ್ಷಿಗಳ ಜೀವನಕಥೆ ಸ್ಪೂರ್ತಿದಾಯಕವಾಗಿದೆ ಎಂದರು. ಭಾಗವಾನಂದಗಿರಿ ಮುಡಾಶ್ರೀ, ಮುಡಾದೇವಪ್ರಸಾದಶ್ರೀ, ಶಿವಾನಂದ ಶ್ರೀಗಳು, ನಾಗೇಶ್ವರ ಚೈತನ್ಯಶ್ರೀಗಳು ಸಾನಿಧ್ಯ ವಹಿಸಿದ್ದರು. ಶಂಕರ ತಿಮ್ಮಾಪೂರ, ಜಿ.ಪಂ ಯೋಜನಾ ನಿರ್ದೇಶಕ ಕಾಂಬಳೆ. ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ತಾಪಂ ಇಓ ಸುಭಾಸ ಸಂಪಗಾವಿ, ಲೋಕಾಪುರ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಜ್ಯೋತಿ ಉಪ್ಪಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ, ಸಮುದಾಯದ ಮುಖಂಡ ತಿಪ್ಪಣ್ಣ ತಿಪ್ಪಣ್ಣವರ ಇತರರು ಉಪಸ್ಥಿತರಿದ್ದರು.

## ಅದ್ದೂರಿ ಮೆರವಣಿಗೆ

ಜಿಲ್ಲಾಡಳಿತ ಭವನದ ಆವರಣದಲ್ಲಿ ಭಗೀರಥ ಮಹರ್ಷಿಗಳ ಭಾವಚಿತ್ರಕ್ಕೆ ಸಂಸದ ಪಿ.ಸಿ.ಗದ್ದಿಗೌಡರ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆ ವಿವಿಧ ಜಾನಪದ ಕಲಾತಂಡಗಳ ಮೂಲಕ ನಾನಾ ಕಡೆಗಳಲ್ಲಿ ಸಂಚರಿಸಿ ಡಾ.ಬಿ.ಆರ್.ಅಂಬೇಡ್ಕರ ಭವನಕ್ಕೆ ಮುಕ್ತಾಯಗೊಂಡಿತು. ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯಯೋಜನಾಧಿಕಾರಿ ಪುನಿತ್ ಆರ್, ಸಮುದಾಯ ಭಾಂದವರು ಪಾಲ್ಗೊಂಡಿದ್ದರು.

# ಬಳ್ಳಾರಿ: ನಾಗರಿಕ ರಕ್ಷಣಾ ಕಾರ್ಯಚರಣೆಯ ಅಣುಕು ಪ್ರದರ್ಶನ

ಮಲ್ಲಮ್ಮ ನುಡಿ ವಾರ್ತೆ




ಬಳ್ಳಾರಿ,ಮೇ17-ಪ್ರಸ್ತುತ ದೇಶದಲ್ಲಿ ಯುದ್ಧ ಸಂಭವಿಸುವ ವಿದ್ಯಮಾನಗಳನ್ನು ಗಮನದಲ್ಲಿಟ್ಟುಕೊಂಡು ಭಾರತ ಸರ್ಕಾರದ ಕೇಂದ್ರ ಗೃಹ ಸಚಿವಾಲಯ ಹಾಗೂ ರಾಜ್ಯ ಸರ್ಕಾರದ ನಿರ್ದೇಶನದಂತೆ ಮುಂದೆ ಆಗಬಹುದಾದ ಎಲ್ಲಾ ರೀತಿಯ ಅನಾಹುತಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಜಾಗೃತೆ ಮೂಡಿಸಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ವತಿಯಿಂದ ಅಪರೇಶನ್ ಅಭ್ಯಾಸ್ ಅಡಿ ನಾಗರಿಕ ರಕ್ಷಣಾ ಕಾರ್ಯಚರಣೆಯ ಅಣುಕು ಪ್ರದರ್ಶನವನ್ನು ಶನಿವಾರ ಸಂಡೂರಿನ ತೋರಣಗಲ್ಲು ಬಳಿಯ ಜೆಎಸ್‌ಡಬ್ಲ್ಯೂ ಜೆ ವಿಜಯನಗರ ಟೌನ್‌ಶಿಪ್‌ನಲ್ಲಿ ಹಮ್ಮಿಕೊಳ್ಳಲಾಯಿತು.

ಅಣುಕು ಪ್ರದರ್ಶನದಲ್ಲಿ ನುರಿತ ಅಗ್ನಿಶಾಮಕ ಇಲಾಖೆ, ಪೋಲಿಸ್ ಇಲಾಖೆ ಹಾಗೂ ಜೆಎಸ್‌ಡಬ್ಲ್ಯೂಜೆನ ಕ್ಯೂಆರ್‌ಟಿ, ಸಂಶೋಧನಾ ಮತ್ತು ರಕ್ಷಣೆ, ವಿಮಾನ ನಿಲ್ದಾಣ ಭದ್ರತಾ ತಂಡ, ಶ್ವಾನದಳ, ಅಗ್ನಿಶಾಮಕ ದಳದ ತಂಡ ಮತ್ತು ಇತರೆ ತಂಡ ಒಳಗೊಂಡಂತೆ ಸುಮಾರು 100ಕ್ಕೂ ಹೆಚ್ಚು ಸಿಬ್ಬಂದಿಗಳು ಅಣುಕು ಪ್ರದರ್ಶನ ನಡೆಸಿಕೊಟ್ಟರು.

ಅಣಕು ಪ್ರದರ್ಶನದಲ್ಲಿ ಅನಾಹುತ ಸಂಭವಿಸಿದಲ್ಲಿ ಕೈಗೊಳ್ಳಬಹುದಾದ ಪ್ರಥಮ ಚಿಕಿತ್ಸಾ ಕಾರ್ಯ, ಸುರಕ್ಷಿತ ಸ್ಥಳದಲ್ಲಿ ಅಡಗುವಿಕೆ, ಶ್ವಾನಗಳ ಕಾರ್ಯಾಚರಣೆ ಹಾಗೂ ಇತರೆ ಮಾಹಿತಿಯನ್ನು ಸಾರ್ವಜನಿಕರಿಗೆ ತಿಳಿಯಪಡಿಸಲಾಯಿತು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತ ಪಿ. ಪ್ರಮೋದ್, ತೋರಣಗಲ್ಲು ವಿಭಾಗ ಡಿ.ಎಸ್.ಪಿ ಪ್ರಸಾದ್ ಗೋಖಲೆ ಸೇರಿದಂತೆ ಆರೋಗ್ಯ ಇಲಾಖೆ, ಕಾರ್ಖಾನೆಗಳು ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಗೃಹ ರಕ್ಷಕದಳ ಅಧಿಕಾರಿಗಳು, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಅಧಿಕಾರಿಗಳು, ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತರು ಮತ್ತು ಸಾರ್ವಜನಿಕರು ಹಾಜರಿದ್ದರು.

# ಮೇ 21 ರಂದು ಮಿನಿ ಉದ್ಯೋಗ ಮೇಳ

ಬಳ್ಳಾರಿ,ಮೇ17-ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಮೇ 21 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮಿನಿ ಉದ್ಯೋಗ ಮೇಳ ಆಯೋಜಿಸಲಾಗಿದೆ. ಈ ಮೇಳದಲ್ಲಿ 3 ರಿಂದ 4 ಕಂಪನಿಗಳು ಭಾಗವಹಿಸುತ್ತಿದ್ದು, ಖಾಲಿ ಇರುವ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ.

ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ. ಉದ್ಯೋಗಮೇಳದಲ್ಲಿ ಪುರುಷರು ಮತ್ತು ಮಹಿಳೆಯರು ಭಾಗವಹಿಸಬಹುದು. ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ ಮತ್ತು ಸ್ವ-ವಿವರ ಪ್ರತಿಗಳೊಂದಿಗೆ ನಗರದ ಹಳೇ ತಾಲ್ಲೂಕು ಕಚೇರಿ ಹಿಂಭಾಗದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಅಂದು ನಡೆಯುವ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು.

ಆಸಕ್ತ ಅಭ್ಯರ್ಥಿಗಳು ಮಿನಿ ಉದ್ಯೋಗ ಮೇಳದಲ್ಲಿ ಭಾಗವಹಿಸಿ, ಇದರ ಸದುಪಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಮೊ.9742718891,

# ಸಾಲದ ಹಣ ತಡವಾಗಿ ನೀಡಿದ್ದಕ್ಕೆ ಇಬ್ಬರ ಮೇಲೆ ಹಲ್ಲೆ: ಆರು ಜನರಿಗೆ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.17: ಆಳಂದ್ ತಾಲ್ಲೂಕಿನ ಸಾವಳಗಿ(ಕೆ) ಗ್ರಾಮದಲ್ಲಿ ಕಳೆದ 2018ರ ನವೆಂಬರ್ 17ರಂದು ಕೊಟ್ಟ ಸಾಲವನ್ನು ತಡವಾಗಿ ಮರಳಿಸಿದ ಎಂಬ ಕಾರಣಕ್ಕಾಗಿ ಯಶವಂತರಾಯ್ ತಂದೆ ಅಂಬಾಜಿ ಕಾಳೆ ಹಾಗೂ ಅನಿಲಕುಮಾರ್ ಕಾಳೆ ಎಂಬುವವರ ಮೇಲೆ ಕಲ್ಲಿನಿಂದ ಮಾರಣಾಂತಿಕ ಹಲ್ಲೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂರನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮೊಹ್ಮದ್ ಮುಜೀರ್ ಉಲ್ಲಾ ಅವರು ಆರು ಜನ ಆರೋಪಿಗಳಿಗೆ ಎರಡು ವರ್ಷಗಳ ಕಠಿಣ ಶಿಕ್ಷೆ ಹಾಗೂ ತಲಾ ಹತ್ತು ಸಾವಿರ ರೂ.ಗಳ ದಂಡ ವಿಧಿಸಿ ತೀರ್ಪು ನೀಡಿದರು.

ಸಾವಳಗಿ(ಕೆ) ಗ್ರಾಮದ ಶ್ರೀಮಂತರಾಯ್ ತಂದೆ ಸಿದ್ರಾಮಪ್ಪ ಮೂಲಗೆ, ಸಿದ್ಧರಾಮ್ ತಂದೆ ಶ್ರೀಮಂತರಾಯ್ ಮೂಲಗೆ, ಅಂಬಾರಾಯ್ ತಂದೆ ಶ್ರೀಮಂತರಾಯ್ ಮೂಲಗೆ, ಶಿವಕುಮಾರ್ ತಂದೆ ಸಿದ್ರಾಮಪ್ಪ, ನಾಗೇಂದ್ರ ತಂದೆ ಗಣಪತಿ ಮೂಲಗೆ, ಮಹಾದೇವ್ ತಂದೆ ನಾಗೇಂದ್ರಪ್ಪ ಮೂಲಗೆ ಅವರೇ ಶಿಕ್ಷೆಗೆ ಒಳಗಾದ ಆಪಾದಿತರು. ಗಾಯಾಳುಗಳಾದ ಯಶವಂತರಾಯ್ ತಂದೆ ಅಂಬಾಜಿ ಕಾಳೆ ಮತ್ತು ಅನಿಲಕುಮಾರ್ ಕಾಳೆ ಅವರಿಗೆ 15000ರೂ.ಗಳ ಪರಿಹಾರವನ್ನು ನೀಡುವಂತೆ ಆದೇಶಿಸಿದ ಅವರು, ಹೆಚ್ಚಿನ ಪರಿಹಾರಕ್ಕಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಲು ಸಹ ತಿಳಿಸಿದರು.

ಪಿಎಸ್ಐ ಶರಣಬಸಪ್ಪ ಕೆ., ಅವರು ತನಿಖೆ ಕೈಗೊಂಡು ನ್ಯಾಯಾಲಯಕ್ಕೆ ದೋಷಾರೋಪಣೆ ಪತ್ರವನ್ನು ಸಲ್ಲಿಸಿದ್ದರು. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಎಸ್.ಆರ್. ನರಸಿಂಹಲು ಅವರು ವಾದ ಮಂಡಿಸಿದರು.

# ಮಲ್ಲಮ್ಮ ಸೂಲಗಿತ್ತಿಗೆ "ಅವ್ವ ಪ್ರಶಸ್ತಿ"



ಕಲಬುರಗಿ:ಮೇ.17:ಗೋದುತಾಯಿ ದೊಡ್ಡಪ್ಪ ಅಪ್ಪ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಮಹಿಳಾ ಮಹಾವಿದ್ಯಾಲಯದಲ್ಲಿ ಸೋಮವಾರ ದಿ.19 ರಂದು ಬೆಳಗ್ಗೆ 11 ಗಂ–ಟೆಗೆ ಕಲಾವಾಣಿ ಸಮಾರೋಪ ಸಮಾರಂಭ ಮತ್ತು ಅಂತಿಮ ವರ್ಷದ ವಿದ್ಯಾರ್ಥಿನಿಯರಿಗೆ ಬೀಳ್ಕೊಡುಗೆ ಕಾರ್ಯಕ್ರಮ ನಡೆಯಲಿದೆ.

ಮಹಾವಿದ್ಯಾಲಯದಿಂದ ಪ್ರತಿ ವರ್ಷ ಕೊಡಲ್ಪಡುವ "ಅವ್ವ ಪ್ರಶಸ್ತಿ" ಯನ್ನು 2024–25ನೇ ಸಾಲಿನಲ್ಲಿ ರಾಯಚೂರ ಜಿಲ್ಲೆಯ ಕವಿತಾಳ ಪಟ್ಟಣದ ಸಮಾಜ ಸೇವಕರು, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪಡೆದ, ಸುಮಾರು 40 ವರ್ಷಗಳಿಂದ 10 ಸಾವಿರಕ್ಕೂ ಹೆಚ್ಚು ಉಚಿತವಾಗಿ ಹೆರಿಗೆ ಮಾಡಿರುವ ಮಲ್ಲಮ್ಮ ಸೂಲಗಿತ್ತಿಯವರಿಗೆ ನೀಡಿ ಗೌರವಿಸಲಾಗುತ್ತಿದೆ. ಪ್ರಶಸ್ತಿಯು ಪ್ರಶಸ್ತಿ ಫಲಕ ಮತ್ತು ನಗದು ಬಹುಮಾನ ಒಳಗೊಂಡಿರುತ್ತದೆ.

ಸಂಸ್ಥೆಯ ಕಾರ್ಯದರ್ಶಿ ಬಸವರಾಜ ದೇಶಮುಖ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಕಲಬುರಗಿ ಉಪಪೊಲೀಸ್ ಆಯುಕ್ತರಾದ ಶ್ರೀಮತಿ ಕನಿಕಾ ಸಿಕ್ರಿವಾಲ್ ಐಪಿಎಸ್, ರೇಷ್ಮಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ.ಭಾರತಿ ಎನ್. ರೇಷ್ಮಿ ಮತ್ತು ಗೌರವ ಅತಿಥಿಗಳಾಗಿ ಶರಣಬಸವೇಶ್ವರ ದೇವಸ್ಥಾನ ಆವರಣದ ಶಾಲಾ ಕಾಲೇಜುಗಳ ನಿರ್ದೇಶಕರಾದ ಡಾ.ನೀಲಾಂಬಿಕಾ ಶೇರಿಕಾರ, ಕಾರ್ಯಕ್ರಮದ ಅಧ್ಯಕ್ಷತೆ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಪುಟ್ಟಮಣಿ ದೇವಿದಾಸ ವಹಿಸುವರು.

# ಆಪರೇಷನ್ ಸಿಂಧೂರ ಬೆಂಬಲಿಸಿ ಬಿಜೆಪಿ ತಿರಂಗಾ ಯಾತ್ರೆ



ಯಾದಗಿರಿ:ಮೇ.17:ಭಾರತೀಯ ಸೇನೆಯ ಆಪರೇಷನ್ ಸಿಂಧೂರ ಬೆಂಬಲಿಸಿ ಜಿಲ್ಲಾ ಬಿಜೆಪಿ ಸೇರಿದಂತೆ ನಗರದಲ್ಲಿ ವಿವಿಧ ಸಂಘಟನೆಗಳಿಂದ ಶನಿವಾರ ಸಂಜೆ ಮೈಲಾಪುರ ಬೇಸ್ ನಿಂದ ಗಾಂಧಿ ವೃತ್ತದ ವರೆಗೆ ಬೃಹತ್ ತಿರಂಗಾ ಯಾತ್ರೆ ನಡೆಸಲಾಯಿತು.

ಗಾಂಧಿ ವೃತದಲ್ಲಿ ಸಮಾವೇಶಗೊಂಡ ಯಾತ್ರೆಯಲ್ಲಿ ಸಾವಿರಾರು ನಾಗರಿಕರು ಭಾರತ್ ಮಾತಾ ಕೀ ಜೈ, ಭಾರತೀಯ ಸೈನಿಕರಿಗೆ ಜಯವಾಗಲಿ ಎಂಬ ಘೋಷಣೆ ಕೂಗಿದರು. ಭಾರತೀಯ ಮಾಜಿ ಯೋಧರ ಸಂಘದ ಜಿಲ್ಲಾಧ್ಯಕ್ಷ ಲಿಂಗನಗೌಡ ಮಾಲೀಪಾಟೀಲ್ ಮಾತನಾಡಿ, ಈ ಆಪರೇಷನ್ ಸಿಂಧೂರ್ ಮುಗಿದಿಲ್ಲ. ಇನ್ನೊಮ್ಮೆ ನಡೆದರೆ ಪಾಕಿಸ್ತಾನ ನಿರ್ನಾಮವಾಗಲಿದೆ. ಪಿಒಕೆ ನಮ್ಮದಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪಾಕಿಸ್ತಾನಕ್ಕೆ ಬುದ್ಧಿ ಕಲಿಸಬೇಕೆಂಬುದು ದೇಶದ ನಿಲುವಾಗಿತ್ತು. ಪ್ರಧಾನಿಯವರು ರಾಜಕೀಯ ಇಚ್ಛಾಶಕ್ತಿ ಪ್ರದರ್ಶಿಸಿದರು. ಜನರು ಬಯಸಿದ್ದನ್ನು ನಾವು ಮಾಡಿ ತೋರಿಸಿದೆವು. ಸೈನಿಕರ ಹಿಂದೆ ಇಡೀ ರಾಷ್ಟ್ರ ನಿಂತಿತ್ತು. ಪಾಕಿಸ್ತಾನಕ್ಕೆ ಮಹಿಳೆಯರು ಸಮರ್ಥ ಉತ್ತರ ನೀಡಿದ್ದಾರೆ ಎಂದು ವಿವರಿಸಿದರು.

ನಮ್ಮ ಯುವಕರು ದೇಶಾಭಿಮಾನ ಬೆಳಸಿಕೊಳ್ಳುವ ಅಗತ್ಯವಿದೆ. ದೇಶದ ಸುರಕ್ಷತೆಗೆ ನಮ್ಮ ಇಡೀ ಸೈನ್ಯ ತಮ್ಮ ಕುಟುಂಬ ತೊರೆದು ಗಡಿಯಲ್ಲಿ ಶತೃಗಳೊಂದಿಗೆ ನಿರಂತರ ಹೋರಾಡುತ್ತಾ ಪ್ರಾಣ ಕಳೆದುಕೊಳ್ಳುತ್ತಾರೆ. ಆದರೆ, ದೇಶದೊಳಗಿನ ಕೆಲ ರಾಜಕೀಯ ವ್ಯಕ್ತಿಗಳು ಭಾರತೀಯ ಸೈನ್ಯ ಮತ್ತು ಸೈನಿಕರಿಗೆ ಅಪಮಾನಗೊಳಿಸುವ ಮಾತನ್ನಾಡುತ್ತಾರೆ ಎಂದು ಬೇಸರ ವ್ಯಕ್ತಪಡಿಸಿದರು.

ದಾಸಬಾಳ ಮಠದ ಶ್ರೀ ವೀರೇಶ್ವರ ಸ್ವಾಮಿಗಳು ಯಾತ್ರೆಗೆ ಚಾಲನೆ ನೀಡಿದರು. 20ಕ್ಕೂ ಹೆಚ್ಚು ಮಾಜಿ ಯೋಧರು ಪಾಲ್ಗೊಂಡಿದ್ದರು.

ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ, ಯುಡ ಅಧ್ಯಕ್ಷ ವಿನಾಯಕ ಮಾಲಿಪಾಟೀಲ, ನಗರಸಭೆ ಅಧ್ಯ–ಕ್ಷೆ ಕು.ಲಲಿತಾ ಅನಪುರ, ಯುವ ಮುಖಂಡ ಮಹೇಶರಡ್ಡಿ ಮುದ್ನಾಳ, ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ, ನಾಗರತ್ನ ಕುಪ್ಪಿ, ಡಾ.ಶರಣಭೂಪಾಲರಡ್ಡಿ, ಚೇಂಬರ್ಸ್ ಆಫ್ ಕಾಮರ್ಸ್ ಜಿಲ್ಲಾಧ್ಯಕ್ಷ ದೀನೇಶ ದೋಕಾ, ಅಕ್ಕಿ ಗಿರಣಿ ಮಾಲೀಕ ಸಂಘ ಜಿಲ್ಲಾಧ್ಯಕ್ಷ ಹನಮಾನ ದಾಸ ಮುಂಡಸು, ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಟಿ ಎನ್ ಭೀಮನು ನಾಯಕ, ಬಂಗಾರ ವರ್ತಕರು ಅಧ್ಯಕ್ಷ ವಿಜಯ್ ಬಟಡ, ವಿಶ್ವ ಹಿಂದೂ ಪರಿಷತ್, ಭಜರಂಗ ದಳದ ಶಿವು ಸಂಕೂಲರ, ಭಾರತೀಯ ವೈದ್ಯ ಸಂಘದ ಜಿಲ್ಲಾಧ್ಯಕ್ಷ ಡಾ. ಪದಾಧಿಕಾರಿಗಳು, ಯಿಮ್ಸ ವೈದ್ಯಕೀಯ ವಿದ್ಯಾರ್ಥಿಗಳು, ಲಿಂಗಪ್ಪ ಹತ್ತಿಮನಿ, ಮಾಜಿ ಯೋಧ ರಾಜಶೇಖರ ಬಾಪುರೆ, ತೀಪ್ಪಣ್ಣಗೌಡ, ಮಡಿವಾಳಪ್ಪ, ವಿಶ್ವರಾಜ ಬಿರಾದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಆಪರೇಷನ್ ಸಿಂಧೂರ್ ಬೆಂಬಲಿಸಿ ಬೀದರನಲ್ಲಿ ಭವ್ಯ ತಿರಂಗಾ ಯಾತ್ರೆ



ಬೀದರ್, ಮೇ.17: ಆಪರೇಷನ್ ಸಿಂಧೂರ ಯಶಸ್ವಿಯಾದ ಹಿನ್ನೆಲೆಯಲ್ಲಿ ರಾಷ್ಟ್ರ ರಕ್ಷಣೆಗಾಗಿ ನಾಗರಿಕರು ಎಂಬ ಧ್ಯೇಯದೊಂದಿಗೆ ಶನಿವಾರ ವಿವಿಧ ಸಂಘಟನೆಗಳು ಹಾಗೂ ಬಿಜೆಪಿ ಸಂಘ ಪರಿವಾರದ ಕಾರ್ಯಕರ್ತರನ್ನು ಒಳಗೊಂಡು ನಗರದಲ್ಲಿ ಭವ್ಯ ತಿರಂಗಾ ಯಾತ್ರೆ ನಡೆಯಿತು. ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ್ ಪಾಟೀಲ್, ಶಾಸಕರಾದ ಪ್ರಭು ಚವ್ಹಾಣ್, ಡಾ. ಶೈಲೇಂದ್ರ ಬೆಲ್ದಾಳೆ, ಶಾಸಕ ಶರಣು ಸಲಗರ್, ರಾಜ್ಯ ವಿಧಾನ ಪರಿಷತ್ ಸದಸ್ಯ ಎಂ.ಜಿ. ಮೂಳೆ ಹಾಗೂ ತಿರಂಗಾ ಅಭಿಯಾನದ ಕಲಬುರಗಿ ವಿಭಾಗದ ಪ್ರಭಾರಿ ಹಾಗೂ ರಾಜ್ಯ ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ್ ಪಾಟೀಲ್ ಅವರೂ ಸೇರಿದಂತೆ ಅನೇಕ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಕಾರ್ಯಕರ್ತರು ಪಾಲ್ಗೊಂಡಿದ್ದರು. ಭಾರತ್ ಮಾತಾ ಕಿ ಜೈ, ಭಾರತೀಯ ಸೇನೆಗೆ ಜೈ ಘೋಷಣೆಗಳೊಂದಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ವಿದ್ಯಾರ್ಥಿಗಳು, ಸಂಘ ಸಂಸ್ಥೆಗಳ ಪ್ರಮುಖರು ಹಾಗೂ ಸಾರ್ವಜನಿಕರೊಂದಿಗೆ ಸಂಚರಿಸಿದ ತಿರಂಗಾ ಯಾತ್ರೆಯು ನೆರೆದವರಲ್ಲಿ ದೇಶಭಕ್ತಿಯನ್ನು ಇಮ್ಮಡಿಗೊಳಿಸಿತು.

# ಬೀದರನಲ್ಲಿ ಹಮ್ಮಿಕೊಳ್ಳಲಾಗಿದ್ದ ಅಣಕು ಪ್ರದರ್ಶನ ಯಶಸ್ವಿ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ







ಮಲ್ಲಮ್ಮ ನುಡಿ ವಾರ್ತೆ ಬೀದರ : ಮೇ.17: ಕೇಂದ್ರ ಹಾಗೂ ರಾಜ್ಯ ಗೃಹ ಸಚಿವಾಲಯದ ಸೂಚನೆ ಮೇರೆಗೆ ಹಮ್ಮಿಕೊಳ್ಳಲಾದ ಆಪರೇಷನ್ ಅಭ್ಯಾಸ ಹೆಸರಿನ ಅಣಕು ಪ್ರದರ್ಶನ ಯಶಸ್ವಿ ನಿರ್ವಹಣೆಗೊಂಡಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದರು.

ಇವರು ಶನಿವಾರ ಬೀದರ ನಗರದ ರೈಲ್ವೆ ನಿಲ್ದಾಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪೋಲಿಸ್ ಇಲಾಖೆ, ಆರೋಗ್ಯ ಇಲಾಖೆ, ಅಗ್ನಿಶಾಮಕ ದಳ ಸೇರಿದಂತೆ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ನಾಗರಿಕ ರಕ್ಷಣಾ ಅಣಕು ಪ್ರದರ್ಶನ ಯಶಸ್ವಿ ಕುರಿತು ಮಾತನಾಡಿದರು.

ಸಂಜೆ 4:30ಕ್ಕೆ ಬಾಂಬ್ ಬ್ಲಾಸ್ಟ್ ಮಾಡಿದ ನಂತರ ಮೊದಲ ತುರ್ತು ಪರಿಸ್ಥಿತಿ ಎಚ್ಚರಿಕೆ ಸೈರನ್ ಶಬ್ದ ಮೊಳಗಿಸಲಾಯಿತು. ಎರಡನೇ ಸೈರನ್ ಶಬ್ದವು ಬೆಂಕಿ ಅವಘಡ ಸಂಭವಿಸಿದ ನಂತರ ಮೊಳಗಿಸಲಾಯಿತು. ಸೈರನ್ ಮೊಳಗಿದ ಕೂಡಲೇ ನಾಗರಿಕರು ಕೈಗೊಳ್ಳಬೇಕಾದ ಎಚ್ಚರಿಕೆ ಹಾಗೂ ದುರ್ಘಟನೆಯಲ್ಲಿ ಸಿಲುಕಿರುವ ನಾಗರಿಕರನ್ನು ಸುಸಜ್ಜಿತ ಸ್ಥಳಕ್ಕೆ ಸ್ಥಳಾಂತರಿಸಲಾಯಿತು. ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ರಕ್ಷಣಾ ಕಾರ್ಯಾಚರಣೆ ಕೈಗೊಂಡರು.

ಆರೋಗ್ಯ ಇಲಾಖೆಯಿಂದ ತುರ್ತಾಗಿ ಅಂಬುಲೆನ್ಸ್ ಮೂಲಕ ಆಸ್ಪತ್ರೆಗೆ ದಾಖಲಿಸಲಾಗಿತ್ತು. ರೈಲ್ವೆ ನಿಲ್ದಾಣದ ಸ್ಥಳದಲ್ಲಿಯೇ ಪ್ರಥಮ ಚಿಕಿತ್ಸಾ ಕೇಂದ್ರ ಸ್ಥಾಪನೆ, ಕಾಳಜಿ ಕೇಂದ್ರ ಹಾಗೂ ಕಮಾಂಡಿಂಗ್ ಸೆಂಟರ್ ರೂಮ್ ತೆರೆದು ರಕ್ಷಣಾ ಕಾರ್ಯ ಕೈಗೊಳ್ಳಲಾಯಿತು. ತುರ್ತು ಪರಿಸ್ಥಿತಿ ವೇಳೆ ವಿವಿಧ ಇಲಾಖೆಗಳಿಂದ ಯಾವ ರೀತಿ ಕಾರ್ಯ ನಿರ್ವಹಣೆ ಮಾಡಬೇಕು ಮತ್ತು ಸಾರ್ವಜನಿಕರು ಯಾವ ರೀತಿಯಲ್ಲಿ ಇರಬೇಕು ಎಂಬುದನ್ನು ತಿಳಿಯಲು ಬೇರೆ ಬೇರೆ ಇಲಾಖೆಗಳು ಮತ್ತು ಭದ್ರತಾ ಪಡೆಯ ತಂಡಗಳು ಹೇಗೆ ಕಾರ್ಯನಿರ್ವಹಣೆ ಮಾಡಬೇಕು ಎಂದು ತೋರಿಸಲಾಯಿತು ಎಂದು ತಿಳಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಮಾತನಾಡಿ, ತುರ್ತು ಪರಿಸ್ಥಿತಿ ವೇಳೆ ನಾಗರಿಕರು ಮತ್ತು ವಿವಿಧ ಇಲಾಖೆಗಳು ಕಾರ್ಯನಿರ್ವಹಿಸಬೇಕು ಮತ್ತು ನಾಗರಿಕರು ತುರ್ತು ಪರಿಸ್ಥಿತಿಯಲ್ಲಿ ಭಯಪಡದೆ ಅದನ್ನು ಹೇಗೆ ಎದುರಿಸಬೇಕು ಎಂದು ತಿಳಿಸಿದರು.

ಈ ಅಣಕು ಪ್ರದರ್ಶನ ಪ್ರದರ್ಶನದಲ್ಲಿ ರೈಲ್ವೆ ಪೊಲೀಸರು ಮತ್ತು ಸಿಬ್ಬಂದಿಗಳು ಸಂಪೂರ್ಣ ಸಹಯೋಗ ನೀಡಿದರು. ಪೋಲಿಸ್ ಇಲಾಖೆಯಿಂದ 300 ಪೋಲಿಸರು ಭಾಗವಹಿಸಿದ್ದರು.

ಈ ಅಣಕು ಪ್ರದರ್ಶನ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಬೀದರ ಉಪವಿಭಾಗಾಧಿಕಾರಿ ಎಮ್.ಡಿ ಶಕೀಲ್, ಕೆ.ಎಸ್.ಆರ್.ಟಿ ವಿಭಾಗೀಯ ನಿಯಂತ್ರಣಾಧಿಕಾರಿ ವಿಶ್ವನಾಥ ಪುಲೇಕರ, ಜಿಲ್ಲಾ ಕುಟುಂಬ ಕಲ್ಯಾಣ ಮತ್ತು ಆರೋಗ್ಯ ಅಧಿಕಾರಿ ಧ್ಯಾನೇಶ್ವರ ನಿರಗುಡೆ, ಜಿಲ್ಲಾ ಶಸ್ತ್ರ ಚಿಕಿತ್ಸಾ ಅಧಿಕಾರಿ ಅಹಮದ್, ಜಿಲ್ಲಾ ಅಗ್ನಿಶಾಮಕ ಠಾಣಾಧಿಕಾರಿ ಎಮ್.ಡಿ. ಮುಜಾಮಿಲ್ ಪಟೇಲ್, ಜಿಲ್ಲಾ ಗೃಹರಕ್ಷಕ ದಳದ ಅಧಿಕಾರಿ ಮನೋಜಕುಮಾರ ಪಾಟೀಲ, ಬೀದರ ರೈಲ್ವೆ ನಿಲ್ದಾಣದ ಸ್ಟೇಷನ್ ಮಾಸ್ಟರ್ ರಮೇಶ್ ಶಿರಪತಿ, ಲಿಂಗಾನಂದ, ಮುಜಿಬ್, ಮನೋಜ್ ಕುಮಾರ್, ಕುಂದನ್ ಕೂಮಾರ, ಆರ್.ಪಿ.ಎಫ್. ಇನ್ಸೆಕ್ಟರ್ ಪ್ರಸಾದ್, ಂಖಖ ಸುಧೀರ್ ರೆಡ್ಡಿ, ಜಿಲ್ಲಾಧಿಕಾರಿ ಕಚೇರಿ ವಿಪತ್ತು ನಿರ್ವಹಣಾ ಪರಿಣೀತರಾದ ಸಂದಿಪ್ ಪಾಟೀಲ್, ಬ್ರಿಮ್ಸ್ ನರ್ಸಿಂಗ್ ಕಾಲೇಜು ಪ್ರಾಂಶುಪಾಲರಾದ ರಾಜಕುಮಾರ ಮಾಳಗೆ ಸೇರಿದಂತೆ ಗೃಹರಕ್ಷಕ ದಳ, ನರ್ಸಿಂಗ್ ವಿದ್ಯಾರ್ಥಿಗಳು, ಎನ್.ಸಿ.ಸಿ ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

# ಡಿಕೆಶಿಗೆ ಮಾನ, ಮರ್ಯಾದೆ ಇದ್ರೆ ಕೂಡ್ಲೇ ಮಂಜುನಾಥ್ ಉಚ್ಚಾಟಿಸಲಿ: ಶರಣು ಸಲಗರ್



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಮೇ.17: ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಮಾನ, ಮರ್ಯಾದೆ ಇದ್ರೆ ಕೂಡಲೇ ಮಂಜುನಾಥರನ್ನು ಪಕ್ಷದಿಂದ ಉಚ್ಚಾಟಿಸಬೇಕು ಎಂದು ಬಿಜೆಪಿ ಶಾಸಕ ಶರಣು ಸಲಗರ್ ಕಿಡಿ–ಕಾರಿದರು.


ಬೀದರ್‌ನಲ್ಲಿ ಕಾಂಗ್ರೆಸ್ ಶಾಸಕ ಕೊತ್ತೂರು ಮಂಜುನಾಥ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಆಪರೇಷನ್ ಸಿಂಧೂರ ಬಗ್ಗೆ ರೈತರು, ಕೂಲಿ ಕಾರ್ಮಿಕರು ಎಲ್ಲರಿಗೂ ಸಂತೋಷವಿದೆ. ಉಗ್ರವಾದವನ್ನ ಬುಡ ಸಮೇತ ಕಿತ್ತು ಹಾಕುವ ಕೆಲಸವನ್ನು ಆಪರೇಷನ್ ಸಿಂಧೂರ ಮಾಡಿದೆ ಎಂದರು.

ಕಾಂಗ್ರೆಸ್ ಶಾಸಕರು ಮೂರ್ಖತನದ ಹೇಳಿಕೆ ಕೊಡುತ್ತಿದ್ದು, ಕಾಂಗ್ರೆಸ್‌ನ ಮುಖವಾಡ ಕಳಚುತ್ತಿದೆ. ಇದು ಕೇವಲ ಶಾಸಕನ ಮಾತಲ್ಲ, ಇಡೀ ಕಾಂಗ್ರೆಸ್ ಪಕ್ಷದ ಹೇಳಿಕೆ. ಯಾಕಂದ್ರೆ, ಇದು ರಾಷ್ಟ್ರ ಕಟ್ಟುವ ಕೆಲಸವಾಗಿದ್ದು ಪ್ರಧಾನಿ ಮೋದಿ ಸೇರಿದಂತೆ ಬಿಜೆಪಿ ಸರ್ಕಾರ ಗಟ್ಟಿ ನಿರ್ಧಾರ ಕೈಗೊಳ್ಳುತ್ತಿದೆ ಎಂದು ಹೇಳಿದರು. ಮುರ್ಖತನ, ದೇಶದ್ರೋಹದ ಹೇಳಿಕೆ ಕೊಟ್ಟಿರುವ ಕೊತ್ತೂರು ಮಂಜುನಾಥ್ ಬಹಿರಂಗವಾಗಿ ಕ್ಷಮೆಯಾಚಿಸಬೇಕು. ಇಂತಹ ದೇಶದ್ರೋಹಿ ಶಾಸಕರನ್ನ ಅಧಿವೇಶನದೊಳಗೆ ಕಾಲಿಡಲು ಬಿಡಲ್ಲ ಎಂದು ಆಕ್ರೋಶ ಹೊರಹಾಕಿದರು.

ಕಾಂಗ್ರೆಸ್ ನಾಯಕರು ಆಪರೇಷನ್ ಸಿಂಧೂರ ಬಗ್ಗೆ ಸಾಕ್ಷಿ ಕೇಳುತ್ತಿರುವ ವಿಚಾರವಾಗಿ ಮಾತನಾಡಿ, ಯುದ್ಧ ಮಾಡಬೇಕಾದ್ರೆ ಇವರೆಲ್ಲರಿಗೂ ಲೈವ್ ತೋರಿಸಿ ಯುದ್ಧ ಮಾಡೋಕೆ ಆಗಲ್ಲ. ಪ್ರಿಯಾಂಕ್ ಖರ್ಗೆಯವರ ಹೇಳಿಕೆಯಲ್ಲ ಇಡೀ ಕಾಂಗ್ರೆಸ್ ಹೇಳಿಕೆಯಾಗಿದೆ. ಪ್ರಿಯಾಂಕ್ ಖರ್ಗೆಯವರಿಗೆ ನಾಲಿಗೆಯ ಮೇಲೆ ಹಿಡಿತವಿರಲಿ ಎಂದು ಕಿಡಿಕಾರಿದರು.

ಇದು ಸಿಂಧೂರ ಅಷ್ಟೇ, ಕೆಲವೇ ದಿನಗಳಲ್ಲಿ ಆಪರೇಷನ್ ಸಂಹಾರ ಮಾಡಲಾಗುತ್ತದೆ. ನನಗೂ ಆದೇಶ ಬಂದ್ರೆ ಗನ್ ಹಿಡಿದು ಯುದ್ಧಕ್ಕೆ ಹೋಗ್ತೀನಿ. ನನಗೆ ಯಾವುದೇ ತರಬೇತಿ ಬೇಡ. ಅನುಮತಿ ಕೊ–ಟ್ರೆ ಪಾಕಿಸ್ತಾನ ವಿರುದ್ಧ ಮುಗಿ ಬೀಳುತ್ತೇವೆ ಎಂದು ಹೇಳಿದರು.

# ಗುಡುಗು – ಸಿಡಿಲಿನಿಂದ ಕೂಡಿದ ಮಳೆಗೆ ತತ್ತರಿಸಿದ ಗುಡಿಸಲುವಾಸಿಗಳು ಕೈ ಕೊಟ್ಟ ಕರೆಂಟ್, ಪರದಾಡಿದ ಸಾರ್ವಜನಿಕರು



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ.17:ನಗರದಲ್ಲಿ ನಿನ್ನೆ ರಾತ್ರಿ 10.45 ಕ್ಕೆ ಏಕಾಏಕಿ ಗುಡುಗು ಸಿಡಿಲಿನೊಂದಿಗೆ ಭಾರಿ ಮಳೆ ಸುರಿಯಿತು.

ಸಂಜೆ ವೇಳೆಯೇ ತಂಪು ಬೀಸಿ ಗಾಳಿ ಜೋರಾಗಿ ಬೀಸಿತ್ತು.

ಆದರೇ ಇದು ನಂತರದ ಕೆಲವು ತಾಸುಗಳಲ್ಲಿ ಈ ಪರಿ ಮಳೆ ಬೀಳುತ್ತೆ ಅಂತ ಅಂದಾಜು ಇರಲಿಲ್ಲ.

ಇನ್ನೇನು ಮಳೆ ಬರುವ ಲಕ್ಷಣಗಳು ಇಲ್ಲವೆಂದು ಅಂದುಕೊಂಡ ಅನೇಕರಿಗೆ ಬೇರಗಾಗುವಂತೆಯೇ ರಾತ್ರಿ 10.45 ಸುಮಾರಿಗೇ ಬಾರಿ ಗುಡುಗು, ಸಿಡಿಲಿನ ಶಬ್ದದೊಂದಿಗೆ ವರುಣ ದೇವ ನೇಲಕ್ಕೆ ಅಪ್ಪಳಿಸುವ ಮೂಲಕ ಇಡಿ ನಗರ ತಂಪು ಮಾಡಿದ.

ಆದರೇ ಇದರ ಬಗ್ಗೆ ಯಾವ ಸುಳಿವು ಅರಿಯದ ಗುಡಿಸುವಾಸಿಗಳು ಭಾರಿ ತೊಂದರೆಗೇ ಸಿಕ್ಕಿಹಾಕಿಕೊಂಡರು. ಹಠಾತ್ತನೇ ಸುರಿದ ಈ ಮಳೆಯಿಂದಾಗಿ ಆಶ್ರಯ ನೀಡಿದ್ದ ಸೂರಿನ ಮೇಲ್ಛದರು ರಭರದ ಗಾಳಿ ಮಳೆಗೆ ಹೌಹಾರಿ ಏನು ಆಗುತ್ತಿದೆ ಎಂದು ವಿಚಾರ ಮಾಡಲು ಆಗದಂತೆಯೇ ಒದ್ದಾಡಿದರು. ಅನೇಕರ ಮನೆ ದಿನಸಿ ವಸ್ತುಗಳು ಮಳೆಗೆ ಆಹುತಿಯಾದವು. ಇಷ್ಟು ಆಗುತ್ತಲೇ ಕರೆಂಟ್ ನಾಪತ್ತೆ ಆಯಿತು ಇದರಿಂದ ನಗರದ ಅನೇಕರು ಭಾರಿ ತ್ರಾಸಿಗೆ ಸಿಕ್ಕಿಕೊಂಡರು. ಆದರೂ ರಾತ್ರಿ 11.30 ರ ತನಕ ಮಳೆ ನಿಲ್ಲಲಿಲ್ಲ. ಇಡಿ ರಾತ್ರಿ ಕರೆಂಟ್ ಇಲ್ಲದೇ ಈ ಮಳೆಗೆ ಜನರು ಹೈರಾಣೋ ಹೈರಾಣ್ ಆಗಿದ್ದು ಸತ್ಯ.

# ಪಾಕ್ ಪರ ಬೇಹುಗಾರಿಕೆ: ಯುಟ್ಯೂಬರ್ ಜ್ಯೋತಿ ಬಂಧನ

ಚಂಡೀಗಢ:ಮೇ.17:ಪಾಕಿಸ್ತಾನದ ಇಂಟರ್–ಸರ್ವೀಸಸ್ ಇಂಟೆಲಿಜೆನ್ಸ್(ಐಎಸ್ಐ) ಪರ ಬೇಹುಗಾರಿಕೆ ನಡೆಸುತ್ತಿದ್ದ ಆರೋಪದ ಮೇಲೆ ಹಿಸಾರ್ ಮೂಲದ ಯೂಟ್ಯೂಬರ್ ಜ್ಯೋತಿ ಮಲ್ಹೋತ್ರಾ ಅವರನ್ನು ಶನಿವಾರ ಬಂಧಿಸಲಾಗಿದೆ. ಇದರೊಂದಿಗೆ ಹರಿಯಾಣ ಮತ್ತು ಪಂಜಾಬ್‌ನಾದ್ಯಂತ ಕಳೆದ ಎರಡು ವಾರಗಳಲ್ಲಿ ಬೇಹುಗಾರಿಕೆ ನಡೆಸಿದ ಆರೋಪದ ಮೇಲೆ ಒಂಬತ್ತು ಜನರನ್ನು ಬಂಧಿಸದಂತಾಗಿದೆ. ಟ್ರಾವೆಲ್ ವಿತ್ ಜೋ ಎಂಬ ಯೂಟ್ಯೂಬ್ ಚಾನೆಲ್ ನಡೆಸುತ್ತಿರುವ ಜ್ಯೋತಿ ಮಲ್ಹೋತ್ರಾ ಅವರನ್ನು ಹಿಸಾರ್‌ನ ನ್ಯೂ ಅಗರ್ವಾಲ್ ಎಕ್ಸ್‌ಟೆನ್ಶನ್ ಪ್ರದೇಶದಲ್ಲಿ ಬಂಧಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಜ್ಯೋತಿ ಅವರು ಯೂಟ್ಯೂಬ್‌ನಲ್ಲಿ 3.77 ಲಕ್ಷ ಚಂದಾದಾರರನ್ನು ಮತ್ತು ಇನ್‌ಸ್ಟಾಗ್ರಾಮ್‌ನಲ್ಲಿ 1.32 ಲಕ್ಷ ಫಾಲೋವರ್ಸ್ ಹೊಂದಿದ್ದಾರೆ ಮತ್ತು ಈ ವರ್ಷದ ಮಾರ್ಚ್‌ನಲ್ಲಿ ಪಾಕಿಸ್ತಾನಕ್ಕೆ ತಮ್ಮ ಪ್ರಯಾಣದ ಬಗ್ಗೆ ವಿಡಿಯೋಗಳನ್ನು ಸಹ ಪೋಸ್ಟ್ ಮಾಡಿದ್ದಾರೆ. ಹಿಸಾರ್ ಪೊಲೀಸರು ಜ್ಯೋತಿ ವಿರುದ್ಧ ಎಫ್ಐಆರ್ ದಾಖಲಿಸಿ ವಶಕ್ಕೆ ಪಡೆದು, ಸ್ಥಳೀಯ ನ್ಯಾಯಾಲಯದ ಮುಂದೆ ಹಾಜರುಪಡಿಸಿದರು. ವಿಚಾರಣೆ ನಡೆಸಿದ ಕೋರ್ಟ್ ಆರೋಪಿಯನ್ನು ಐದು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಿ ಆದೇಶಿಸಿದೆ. ಸಿವಿಲ್ ಲೈನ್ಸ್ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಬಿಜೇಂದರ್ ಸಿಂಗ್ ಅವರ ದೂರಿನ ಮೇರೆಗೆ, ಅಧಿಕೃತ ರಹಸ್ಯ ಕಾಯ್ದೆಯ ಸೆಕ್ಷನ್ 3 ಮತ್ತು 5 ಹಾಗೂ ಭಾರತೀಯ ನ್ಯಾಯ ಸಂಹಿತೆಯ(ಬಿಎನ್ಎಸ್) ಸೆಕ್ಷನ್ 152 ರ ಅಡಿಯಲ್ಲಿ ಜ್ಯೋತಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

# ವಂಚನೆ ಪ್ರಕರಣ; ಡಿ.ಕೆ. ಸಿದ್ರಾಮಗೆ ಜಾಮೀನು



ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 17 : ನಗರದ ಡಿಸಿಸಿ ಬ್ಯಾಂ–ಕಿಗೆ ಸುಳ್ಳು ಮಾಹಿತಿ ಕೊಟ್ಟು, ಸಾರ್ವಜನಿಕರ ಹಣ ವಂಚಿಸಿರುವ ಆರೋಪದಡಿ ಬಂಧನಕ್ಕೆ ಒಳಗಾಗಿದ್ದ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ (ಎನ್ಎಸ್ಎಸ್‌ಕೆ) ಅಧ್ಯಕ್ಷ ಡಿ.ಕೆ. ಸಿದ್ರಾಮ ಅವರು ಶನಿವಾರ ಜಾಮೀನಿನ ಮೇಲೆ ಬಿಡುಗಡೆಯಾಗಿ ಹೊರಬಂದಿದ್ದಾರೆ. ಮೇ 9ರಂದು ಅವರು ಬಂಧನಕ್ಕೆ ಒಳಗಾಗಿದ್ದರು. ಒಂಬತ್ತು ದಿನಗಳ ನಂತರ ಜಾಮೀನು ಸಿಕ್ಕಿದೆ. ನಗರದ ಜಿಲ್ಲಾ ನ್ಯಾಯಾಲಯವು ಮಧ್ಯಂತರ ಜಾಮೀನು ನೀಡಿದೆ ಎಂದು ಅವರ ಸಹೋದರ ಡಿ.ಕೆ.ಗಣಪತಿ ತಿಳಿಸಿದ್ದಾರೆ. ’ರೈತರ ಸಲುವಾಗಿ ಹೋರಾಟ ಮಾಡಿದ್ದೇನೆ. ರೈತರ ಒಳಿತಿಗಾಗಿ ಕೆಲಸ ಮಾಡಿದ್ದೇನೆ. ರೈತರಿಗಾಗಿ ಜೈಲಿಗೆ ಹೋಗಿದ್ದೇನೆ ಎಂಬ ಭಾವನೆ ಇದೆ. ಕೃಷ್ಣನ ಜನ್ಮಸ್ಥಳಕ್ಕೆ ಕಳಿಸಿ ನನಗೆ ರಾಜಕೀಯವಾಗಿ ಪುನರ್‌ಜನ್ಮ ಕೊಟ್ಟಿದ್ದಾರೆ. ಈ ಪ್ರಕರಣ ನ್ಯಾಯಾಲಯದಲ್ಲಿ ಇರುವುದರಿಂದ ಇದರ ಬಗ್ಗೆ ನಾನೇನೂ ಮಾತನಾಡಲಾರೆ’ ಎಂದು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದಾರೆ.

’ಡಿಸಿಸಿ ಬ್ಯಾಂಕಿನಿಂದ ಸಾಲ ನವೀಕರಿಸಿಕೊಳ್ಳುವಾಗ ?56.20 ಕೋಟಿ ಮೌಲ್ಯದ ಸಕ್ಕರೆ ಕೊರತೆ ಇತ್ತು. ಬ್ಯಾಂಕಿನ ಅನುಮತಿ ಪಡೆಯದೇ ಸಕ್ಕರೆ ಮಾರಾಟ ಮಾಡಿದ್ದಾರೆ. ಬ್ಯಾಂಕಿಗೆ ಹಣ ಕಟ್ಟದೇ ಬೇರೆ ಉದ್ದೇಶಕ್ಕಾಗಿ ಬಳಸಿಕೊಂಡಿದ್ದಾರೆ. ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಯವರೊಂದಿಗೆ ಶಾಮಿಲಾಗಿ ಬ್ಯಾಂಕಿಗೆ ತಪ್ಪು ಮಾಹಿತಿ ಕೊಟ್ಟು ?78 ಕೋಟಿ ಸಾಲ ಮಂಜೂರಾತಿ ಮಾಡಿಸಿಕೊಂಡಿದ್ದಾರೆ. ಹಣ ವಂಚನೆಯ ಉದ್ದೇಶದಿಂದ ಹೀಗೆ ಮಾಡಿದ್ದಾರೆ’ ಎಂದು ಡಿಸಿಸಿ ಬ್ಯಾಂಕಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಎಸ್. ಅವರು ಜನವಾಡ ಪೊಲೀಸ್ ಠಾಣೆಗೆ ಮೇ 8ರಂದು ದೂರು ಕೊಟ್ಟಿದ್ದರು. ಅದನ್ನು ಆಧರಿಸಿ ಡಿ.ಕೆ. ಸಿದ್ರಾಮ ಸೇರಿದಂತೆ ಏಳು ಜನರ ವಿರುದ್ಧ ಜನವಾಡ ಪೊಲೀಸ್ ಠಾಣೆಯಲ್ಲಿ 420, 409, 468, 474, 120 (ಬ) ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.